ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 13 ಸಂಚಿಕೆ : 96
30–9–2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 96

### ಪಾಕ್ ಸಚಿವನಿಂದ ಟ್ರೋಫಿ ಸ್ವೀಕರಿಸಲು ಭಾರತ ನಕಾರ। ಕ್ರಿಕೆಟ್ ಇತಿಹಾಸದಲೇ ಕಂಡು ಕೇಳರಿಯದ ಘಟನೆ..!

# 9ನೇ ಬಾರಿ ಏಷ್ಯಾಕಪ್ ಮುಡಿಗೇರಿಸಿಕೊಂಡ ಭಾರತ



**ದುಬೈ:** ಭಾನುವಾರ ರಾತ್ರಿ ದುಬೈ ಅಂತರಾಷ್ಟ್ರೀಯ ಕ್ರೀಡಾಂಗಣದಲ್ಲಿ 147 ರನ್‌ಗಳ ಗೆಲುವಿನ ಗುರಿ ಬೆನ್ನಟ್ಟಿದ ಪಾಕಿಸ್ತಾನದವಿರುದ್ಧ ಭಾರತ ತಂಡವು ಆರಂಭದಲ್ಲಿಯೇ ಎಡವಿತ್ತು. 4 ಓವರ್‌ಗಳಲ್ಲಿ 20 ರನ್‌ಗಳಿಗೆ ಮೂರು ವಿಕೆಟ್ ಕಳೆದುಕೊಂಡಿತು. ಅದರಲ್ಲಿ ಸಿಡಿಲಮರಿ ಅಭಿಷೇಕ್ ಶರ್ಮಾ, ನಾಯಕ ಸೂರ್ಯಕುಮಾರ್ ಮತ್ತು ಶುಭಮನ್ ಗಿಲ್ ಅವರು ಡಗ್‌ಔಟ್ ಸೇರಿಸಿದರು.

ಏಷ್ಯಾಕಪ್ ಫೈನಲ್ ಪಂದ್ಯ ರೋಚಕ ರೀತಿಯಲ್ಲಿ ಮುಕ್ತಾಯಗೊಂಡ ಬಳಿಕ ಪ್ರಶಸ್ತಿ ವಿತರಣಾ ಸಮಾರಂಭದಲ್ಲಿ ಭಾರೀ ಹೈಡ್ರಾಮಾ ನಡೆದಿದೆ.

ಪಾಕಿಸ್ತಾನ ಕ್ರಿಕೆಟ್ ಮಂಡಳಿ (ಪಿಸಿಬಿ) ಅಧ್ಯಕ್ಷ, ಪಾಕ್‌ನ ಆಂತರಿಕ ವ್ಯವಹಾರಗಳ ಸಚಿವರೂ ಆಗಿರುವ ಏಷ್ಯಾ ಕ್ರಿಕೆಟ್ ಮಂಡಳಿ (ಎಸಿಸಿ) ಅಧ್ಯಕ್ಷ ಮೊಹಿನ್ ನಖ್ವಿಯಿಂದ ಟ್ರೋಫಿ ಸ್ವೀಕರಿಸಲು ಭಾರತ ನಿರಾಕರಿಸಿದೆ.

ಮೊಹ್ಸಿನ್ ನಖ್ವಿ ಹಾಗೂ ಇನ್ನಿತರ ಗಣ್ಯರು ವೇದಿಕೆ ಮೇಲೆ ಬಂದು ಕಾಯುತ್ತಾ ನಿಂತಿದ್ದರು. ಆದರೆ. ಭಾರತೀಯ ಆಟಗಾರರು ವೇದಿಕೆಯಿಂದ 15–20 ಅಡಿ ದೂರದಲ್ಲಿ ನಿಂತು ಪ್ರತಿರೋಧ ವ್ಯಕ್ತಪಡಿಸಿದರು.

ಇನ್ನು ಪಾಕಿಸ್ತಾನಿ ಆಟಗಾರರು ಡ್ರೆಸ್ಸಿಂಗ್ ಕೋಣೆ ಬಿಟ್ಟು ಹೊರಗೇ ಬರಲಿಲ್ಲ. ಒಂದು ಹಂತದಲ್ಲಿ ಟ್ರೋಫಿಯನ್ನು ಮೈದಾನದಿಂದ ಹೊರಕ್ಕೆ ಕೊಂಡೊಯ್ಯಲಾಯಿತು. ಪ್ರಶಸ್ತಿ ವಿತರಣಾ ಸಮಾರಂಭ ನಡೆಯತ್ತೋ ಇಲ್ಲವೋ ಎನ್ನುವ ಬಗ್ಗೆ ಯಾರಿಗೂ ಸ್ಪಷ್ಟತೆ ಇರಲಿಲ್ಲ.

ಕೊನೆಗೆ ಪಂದ್ಯದ ಮುಗಿದ 55 ನಿಮಿಷಗಳ ಬಳಿಕ ಪ್ರಶಸ್ತಿ ವಿತರಣಾ ಸಮಾರಂಭ ಆರಂಭಗೊಂಡಿತು. ವೇದಿಕೆ ಮೇಲೆ ಮೊಹ್ಸಿನ್ ನಖ್ವಿ ಸೇರಿ ಹಲವು ಗಣ್ಯರು ಇದ್ದರು. ಆದರೆ, ಭಾರತ ಪಂದ್ಯ ಶ್ರೇಷ್ಠ, ಸರಣಿ ಶ್ರೇಷ್ಠ ಪ್ರಶಸ್ತಿಗಳನ್ನು ಇನ್ನಿತರ ಗಣ್ಯರಿಂದ ಸ್ವೀಕರಿಸಿತು. ಆದರೆ, ಮೊಹ್ಸಿನ್ ನಖ್ವಿಯಿಂದ ಟ್ರೋಫಿ ಪಡೆಯಲಿಲ್ಲ.

ಭಾರತ ತಂಡ ಪ್ರಶಸ್ತಿ ಸ್ವೀಕರಿಸುವುದಿಲ್ಲ ಎಂದು ಎಸಿಸಿ ಮಾಹಿತಿ ನೀಡಿದೆ ಎಂದು ತಿಳಿಸಿ ನಿರೂಪಕ ಸೈಮನ್ ಡೂಲ್ ಪ್ರಶಸ್ತಿ ವಿತರಣಾ ಸಮಾರಂಭವನ್ನು ಕೊನೆಗೊಳಿಸಿದರು.

ಈ ನಡುವೆ ರನ್ನರ್–ಅಪ್ ಬಹುಮಾನ ಪಡೆಯಲು ಪಾಕ್ ಆಟಗಾರರನ್ನು ವೇದಿಕೆ ಮೇಲೆ ಕರೆಯಲಾಯಿತು. ಒಲ್ಲದ ಮನಸಿನಿಂದಲೇ ಪಾಕ್ ಆಟಗಾರರು ವೇದಿಕೆಗೆ ಬಂದು ಬಾಂಗ್ಲಾ ಕ್ರಿಕೆಟ್ ಮುಖ್ಯಸ್ಥರಿಂದ ಬಹುಮಾನ ಸ್ವೀಕರಿಸಿದರು. ನಾಯಕ ಸಲ್ಮಾನ್ ಚೆಕ್ ಸ್ವೀಕರಿಸಿ ಅದನ್ನು ವೇದಿಕೆ ಮೇಲೆಯೇ ಎಸೆದು ಹೊರನಡೆದರು.

## ಟ್ರೋಫಿ ಇಲ್ಲದೆ ಸಂಭ್ರಮಿಸಿದ ಭಾರತ



**ಸ್ಥಳದಲ್ಲಿ ಪರಿಸ್ಥಿತಿ ಬಿಗಡಾಯಿಸುತ್ತಿದ್ದಂತೆ, ಸಂಘಟಕರು ಇದ್ದಕ್ಕಿದ್ದಂತೆ ಟ್ರೋಫಿಯನ್ನು ವೇದಿಕೆಯಿಂದ ಡ್ರೆಸ್ಸಿಂಗ್ ರೂಮ್‌ಗೆ ತೆಗೆದುಕೊಂಡು ಹೋದರು. ಕ್ರಿಕೆಟ್ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ಚಾಂಪಿಯನ್ ತಂಡಕ್ಕೆ ಟ್ರೋಫಿ ನೀಡದೆ ಇರುವ ಘಟನೆ ನಡೆದಿದೆ. ಟ್ರೋಫಿ ಇಲ್ಲದೆ ಟೀಂ ಇಂಡಿಯಾ ಆಟಗಾರರು ಸಂಭ್ರಮಿಸಿದರು.**

ಏತನ್ಮಧ್ಯೆ ಪಾಕ್ ಆಟಗಾರರು ಬಹುಮಾನ ಸ್ವೀಕರಿಸಲು ವೇದಿಕೆಗೆ ಕಾಲಿಡುತ್ತಿದ್ದಂತೆ ಸ್ಟ್ಯಾಂಡ್‌ನಲ್ಲಿದ್ದ ಭಾರತೀಯ ಅಭಿಮಾನಿಗಳು 'ಮೋದಿ.. ಮೋದಿ' ಎಂದು ಕೂಗಿ, ಪಾಕ್ ಆಟಗಾರರನ್ನ ಕಿಚಾಯಿಸಿದರು.

ಟ್ರೋಫಿ ಇಲ್ಲದೆ ಸಂಭ್ರಮಿಸಿದ ಭಾರತ

ಸ್ಥಳದಲ್ಲಿ ಪರಿಸ್ಥಿತಿ ಬಿಗಡಾಯಿಸುತ್ತಿದ್ದಂತೆ, ಸಂಘಟಕರು ಇದ್ದಕ್ಕಿದ್ದಂತೆ ಟ್ರೋಫಿಯನ್ನು ವೇದಿಕೆಯಿಂದ ಡ್ರೆಸ್ಸಿಂಗ್ ರೂಮ್‌ಗೆ ತೆಗೆದುಕೊಂಡು ಹೋದರು. ಕ್ರಿಕೆಟ್ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ಚಾಂಪಿಯನ್ ತಂಡಕ್ಕೆ ಟ್ರೋಫಿ ನೀಡದೆ ಇರುವ ಘಟನೆ ನಡೆದಿದೆ. ಟ್ರೋಫಿ ಇಲ್ಲದೆ ಟೀ ಇಂಡಿಯಾ ಆಟಗಾರರು ಸಂಭ್ರಮಿಸಿದರು.

ಸ್ಥಳದಲ್ಲಿ ಪರಿಸ್ಥಿತಿ ಬಿಗಡಾಯಿಸುತ್ತಿದ್ದಂತೆ, ಸಂಘಟಕರು ಇದ್ದಕ್ಕಿದ್ದಂತೆ ಟ್ರೋಫಿಯನ್ನು ವೇದಿಕೆಯಿಂದ ಡ್ರೆಸ್ಸಿಂಗ್ ರೂಮ್‌ಗೆ ತೆಗೆದುಕೊಂಡು ಹೋದರು. ಕ್ರಿಕೆಟ್ ಇತಿಹಾಸದಲ್ಲಿ ಬಹುಶಃ ಇದೇ ಮೊದಲ ಬಾರಿಗೆ ಚಾಂಪಿಯನ್ ತಂಡಕ್ಕೆ ಟ್ರೋಫಿ ನೀಡದೆ ಇರುವ ಘಟನೆ ನಡೆದಿದೆ. ಟ್ರೋಫಿ ಇಲ್ಲದೆ ಟೀ ಇಂಡಿಯಾ ಆಟಗಾರರು ಸಂಭ್ರಮಿಸಿದರು.

ಭಾರತದ ವಿರುದ್ಧ ವಿಷ ಕಾರುತ್ತಿದ್ದ ಮೊಹ್ಸಿನ್ ನಖ್ವಿ ಅವ್ರಿಂದ ಟ್ರೋಫಿಯನ್ನ ಸ್ವೀಕರಿಸದಿರಲು ಭಾರತ ತಂಡ ಈಗಾಗಲೇ ದೃಢ ನಿರ್ಧಾರ ತೆಗೆದು–ಕೊಂಡಿತ್ತು. ಅದರಂತೆಯೇ ನಡೆದುಕೊಂಡಿದೆ.

ನಖ್ವಿ ಪಾಕಿಸ್ತಾನ ಕ್ರಿಕೆಟ್ ಮಂಡಳಿಯ ಅಧ್ಯಕ್ಷರು ಹಾಗೂ ಪಾಕ್ ಗೃಹ ಸಚಿವರಾಗಿದ್ದಾರೆ. ಅದರಂತೆ ACC ಅಧ್ಯಕ್ಷರಾಗಿ ವಿಜೇತ ತಂಡಕ್ಕೆ ಟ್ರೋಫಿಯನ್ನು ಪ್ರದಾನ ಮಾಡ ಬೇಕಾಗಿತ್ತು ಹಾಗೂ ಎರಡೂ ತಂಡಗಳೊಂದಿಗೆ ಕೈಕುಲುಕಬೇಕಾಗಿತ್ತು. ಆದರೆ, ಭಾರತೀಯ ತಂಡವು ಪಾಕಿಸ್ತಾನದ ಯಾರೊಂದಿಗೂ ಕೈಕುಲುಕಬಾರದು ಅಥವಾ ಯಾವುದೇ ಮೈದಾನದ ಹೊರಗೆ ಸಂವಹನಗಳಲ್ಲಿ ತೊಡಗಬಾರದು ಎಂದುಕೊಂಡ ಹಿನ್ನೆಲೆ ನಖ್ವಿ ಕೈಯಲ್ಲಿ ಕಪ್ ಸ್ವೀಕರಿಸಲು ಒಪ್ಪಲಿಲ್ಲ.

### ಉದ್ಯೋಗಾಕಾಂಕ್ಷಿಗಳಿಗೆ ದಸರಾ ಗಿಫ್ಟ್:

## 3 ವರ್ಷ ವಯೋಮಿತಿ ಸಡಿಲಿಕೆ : ರಾಜ್ಯ ಸರ್ಕಾರದಿಂದ ಮಹತ್ವದ ಆದೇಶ

ಬೆಂಗಳೂರು: ರಾಜ್ಯ ಸರ್ಕಾರ ಉದ್ಯೋಗಾಕಾಂಕ್ಷಿಗಳಿಗೆ ದಸರಾ ಬಂಪರ್ ಗಿಫ್ಟ್ ನೀಡಿದ್ದು, ಸಿವಿಲ್ ಸೇವಾ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಮೂರು ವರ್ಷ ವಯೋಮಿತಿ ಸಡಿಲಿಕೆ ಮಾಡಿ ಸೋಮವಾರ ಮಹತ್ವದ ಆದೇಶ ಹೊರಡಿಸಿದೆ.

ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಮೂಲಕ ನಡೆಸುವ ನೇರ ನೇಮಕಾತಿಯಲ್ಲಿ ಭಾಗವಹಿಸುವ ಎಲ್ಲ ಪ್ರವರ್ಗಗಳ ಅಭ್ಯರ್ಥಿಗಳಿಗೂ ಒಂದು ಬಾರಿಗೆ ಅನ್ವಯವಾಗುವಂತೆ ಮೂರು ವರ್ಷಗಳ ವಯೋಮಿತಿ ಸಡಿಲಿಕೆ ಮಾಡಿ ರಾಜ್ಯ ಸರ್ಕಾರ ಇಂದು ಅಧಿಕೃತ ಆದೇಶ ಹೊರಡಿಸಿದೆ.

ಇತ್ತೀಚೆಗೆ ಧಾರವಾಡದಲ್ಲಿ ಸ್ಪರ್ಧಾತ್ಮಕ ಪರೀಕ್ಷಾರ್ಥಿಗಳು ಹಾಗೂ ವಿದ್ಯಾರ್ಥಿ ಸಂಘಟನೆಗಳು 5 ವರ್ಷ ವಯೋಮಿತಿ ಸಡಿಲಿಕೆ ಹಾಗೂ ಪಿಎಸ್ಐ/ಕಾನ್ಸಟೇಬಲ್ ಹುದ್ದೆಗಳಿಗೆ ನೇಮಕಾತಿ ಆದೇಶಕ್ಕೆ ಆಗ್ರಹಿಸಿ ಪ್ರತಿಭಟನೆ ನಡೆಸಿ ಸರ್ಕಾರಕ್ಕೆ ಬಿಸಿ ಮುಟ್ಟಿಸಿದ್ದರು. ಇದರ ಮಧ್ಯೆ ಇದೇ ತಿಂಗಳ 6ರಂದು ರಾಜ್ಯ ಸರ್ಕಾರ ಸಿವಿಲ್ ಹುದ್ದೆಗಳ ನೇರ ನೇಮಕಾತಿಗಳಿಗೆ 2 ವರ್ಷ ಸಡಿಲಿಕೆ ಮಾಡಿ ಆದೇಶಿಸಿತ್ತು. ಇದೀಗ 3 ವರ್ಷಗಳ ಸಡಿಲಿಕೆ ಮಾಡಿದೆ.

# ಅನಧಿಕೃತ ಚರ್ಮರೋಗ ಚಿಕಿತ್ಸಾಲಯಗಳಿಗೆ ದಂಡ ಮತ್ತು ಶಾಶ್ವತ ಬಂದ್: ಗಂಗಾಧರ ಸ್ವಾಮಿ ಜಿ.ಎಂ.

**ದಾವಣಗೆರೆ :** ಅನಧಿಕೃತ ಚರ್ಮರೋಗ ಚಿಕಿತ್ಸಾ ಕೇಂದ್ರಗಳನ್ನು ತೆರೆದರೆ ಅಂತಹ ಕ್ಲಿನಿಕ್‌ಗಳ ವಿರುದ್ಧ ಎಫ್.ಐ.ಆರ್ ದಾಖಲಿಸಲಾಗುವುದು ಮತ್ತು ನಗರದಲ್ಲಿ ಅನಧಿಕೃತವಾಗಿ ಚರ್ಮರೋಗ ಚಿಕಿತ್ಸಾ ಕೇಂದ್ರಗಳನ್ನು ಅನುಮತಿ ಪಡೆಯದೆ ಕಾನೂನು ಬಾಹಿರವಾಗಿ ತೆರೆದು ಜನರಿಗೆ ಚಿಕಿತ್ಸೆ ನೀಡುತ್ತಿರುವ ಕೇಂದ್ರಗಳನ್ನು ಮುಚ್ಚಿಸಿ, ಒಂದು ಲಕ್ಷ ರೂ.ಗಳ ದಂಡ ವಿಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರ ಸ್ವಾಮಿ ತಿಳಿಸಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಕೆ.ಪಿ.ಎಂ.ಇ ನೊಂದಣಿ ಮತ್ತು ಕುಂದುಕೊರತೆ ನಿವಾರಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನಗರದಲ್ಲಿ ಒಟ್ಟು 15 ಚರ್ಮರೋಗ ಚಿಕಿತ್ಸಾ ಕೇಂದ್ರಗಳೆಂದು ಚರ್ಮ ಚಿಕಿತ್ಸೆ ನೀಡುತ್ತಿದ್ದ ಚಿಕಿತ್ಸಾ ಕೇಂದ್ರಗಳಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ 15 ತಂಡಗಳು ಏಕಕಾಲಕ್ಕೆ ಎಲ್ಲಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸಿ ವರದಿ ನೀಡಿದ್ದು ಸದರಿ ವರದಿಯನ್ವಯ ದಾವಣಗೆರೆಯ ರಾಮ್ ಅಂಡ್ ಕೋ ಸರ್ಕಲ್ ಬಳಿ ಇರುವ ವಿ–ಕೇರ್ ಹೇರ್ ಅಂಡ್ ಸ್ಕಿನ್ ಕ್ಲಿನಿಕ್, ಶಾಮನೂರು ರಸ್ತೆ ಯಲ್ಲಿರುವ ಹೇರ್ ಓ ಕ್ರಾಫ್ಟ್, ಯಲ್ಲಮ್ಮ ನಗರ ದಲ್ಲಿರುವ ಕಾಸ್ಮೋ ಅಸ್ತೇಟಿಕ್ ಅಂಡ್ ಸ್ಕಿನ್ ಕೇರ್ ಕ್ಲಿನಿಕ್‌ಗಳು ಕೆ.ಪಿ.ಎಂ.ಇ ಅಡಿಯಲ್ಲಿ ಅನುಮತಿ ಪಡೆಯದೆ ಚಿಕಿತ್ಸೆ ನೀಡುತ್ತಿದ್ದು ತಕ್ಷಣದಿಂದ ಜಾರಿಗೆ ಬರುವಂತೆ ಮುಚ್ಚಿಸಲಾಗಿರುತ್ತದೆ ಮತ್ತು ಎಫ್.ಐ.ಆರ್ ದಾಖಲಿಸಿ ಕೆ.ಪಿ.ಎಂ.ಇ ರಿಡ್ರಸೇಲ್ ಕಮಿಟಿಗೆ ಸಲ್ಲಿಸಲಾಗಿದೆ ಹಾಗೂ ಕೆ.ಪಿ.ಎಂ ಇ ಕಾಯ್ದೆಯಡಿ ದಂಡ ವಿಧಿಸಲು ಅರ್ಹವಾಗಿರುತ್ತದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ತಿಳಿಸಿದರು ಅನುಮತಿ ಪಡೆಯದೆ ಚಿಕಿತ್ಸಾ ಕೇಂದ್ರಗಳನ್ನು ನಡೆಸುತ್ತಿರುವುದು ಕಾನೂನು ಬಾಹಿರ ಆದುದರಿಂದ ಸದರಿ ಚಿಕಿತ್ಸಾ ಕೇಂದ್ರಗಳನ್ನು ಮುಚ್ಚಿಸಿ ತಲಾ ಒಂದು ಲಕ್ಷ ರೂ.ಗಳ ದಂಡ ವಿಧಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.




ರಾಂ ಮತ್ತು ಕೋ ಸರ್ಕಲ್ ಬಳಿ ಇರುವ ಕಾಸ್ಮೋ ಡರ್ಮ ಹೇರ್ ಅಂಡ್ ಸ್ಕಿನ್ ವೇಲ್ನೇಸ್ ಸೆಂಟರ್ ಬ್ಯೂಟಿ ಪಾರ್ಲರ್ ಆಗಿ ಕಾರ್ಯ ನಿರ್ವಹಿಸುತ್ತಿರುತ್ತದೆ ಕೂದಲು ಕಸಿ ಚಿಕಿತ್ಸೆಗೆ ಸಂಬಂಧಿಸಿದಂತೆ ಚಿಕಿತ್ಸೆ ನೀಡುವುದಾಗಿ ನಾಮಫಲಕವನ್ನು ಹಾಕಿದ್ದು ಕೂದಲು ಚಿಕಿತ್ಸೆ ನೀಡುತ್ತಿರುವುದು ಕಂಡು ಬಂದಿರುವುದಿಲ್ಲ ಆದುದ–ರಿಂದ ನಾಮಫಲಕವನ್ನು ತೆರವುಗೊಳಿಸಿ ಚರ್ಮ ಚಿಕಿತ್ಸೆಯ ಉಪಕರಣವನ್ನು ಡಿ ಕಮಿಷನ್ ಮಾಡಿ ಇಡಿಸಲಾಯಿತು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ತಿಳಿಸಿದರು ನಾಮಫಲಕವನ್ನು ತೆರವುಗೊಳಿಸಿ ಒಂದು ಲಕ್ಷ ರೂ.ಗಳ ದಂಡ ವಿಧಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಎಂ.ಸಿ.ಸಿ ಎ ಬ್ಲಾಕ್ ನಲ್ಲಿರುವ ಇಶಾ ಹೇರ್ ಅಂಡ್ ಸ್ಕಿನ್ ಕ್ಲಿನಿಕ್, ರಾಂ ಅಂಡ್ ಕೋ ಸರ್ಕಲ್ ನಲ್ಲಿರುವ ಓಂ ಡೆಂಟಲ್ ಕೇರ್, ಎಂ.ಸಿ.ಸಿ ಬಿ ಬ್ಲಾಕ್ ನಲ್ಲಿರುವ ಲಾ ಪೇಟಲ್ಸ್ ಅಸ್ತೇಟಿಕ್ ಕ್ಲಿನಿಕ್, ಶಿವಕುಮಾರ್ ಸ್ವಾಮಿ ಬಡಾವಣೆಯಲ್ಲಿರುವ ರಿಧಿ ದಂತ ಚಿಕಿತ್ಸಾಲಯ ಮತ್ತು ಮಾಮಾಸ್ ಜಾಯಿಂಟ್ ರಸ್ತೆ ಯಲ್ಲಿರುವ ಗ್ಲೋ ಡೆಂಟಲ್ ಅಂಡ್ ಫೇಶಿಯಲ್ ಅಸ್ಥಟಿಕ್ ಸೆಂಟರ್‌ಗಳು ದಂತ ಚಿಕಿತ್ಸೆಗಾಗಿ ಲೈಸನ್ಸ್ ಪಡೆದು ಚರ್ಮ ಚಿಕಿತ್ಸಾ ಕೇಂದ್ರಗಳಾಗಿ ಕಾರ್ಯ ನಿರ್ವಹಿಸುತ್ತಿರುತ್ತವೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ತಿಳಿಸಿದರು. ನಾಮಫಲಕವನ್ನು ತೆರವುಗೊಳಿಸಿ ಪುನರಾವರ್ತನೆಯಾಗದಂತೆ ಕ್ರಮವಹಿಸುವಂತೆ ತಿಳಿಸಿದರು.

ನಗರದ ವಿದ್ಯಾನಗರದಲ್ಲಿರುವ ಪ್ರೆಸ್ಟಿಜ್ ಹೇರ್ ಸಲ್ಯೂಷನ್, ಹೌರ ಕಾಸ್ಮೆಟಿಕ್ ಕ್ಲಿನಿಕ್, ದೇವರಾಜು ಅರಸು ಬಡಾವಣೆಯಲ್ಲಿರುವ ರೀಜಿವಾ ಹೇರ್/ಸ್ಕಿನ್/ಲೇಸರ್ ಕ್ಲಿನಿಕ್ ಅಂಡ್ ಆಯುರ್ವೇದ

ತಾಲ್ಲೂಕು ಆರೋಗ್ಯಾಧಿಕಾರಿಗಳು ಹಾಗೂ ಖಾಸಗಿ ಕ್ಲಿನಿಕ್ ಗಳ ಮುಖ್ಯಸ್ಥರು ಸಭೆಯಲ್ಲಿ ಉಪಸ್ಥಿತರಿದ್ದರು.

# ಭದ್ರಾ ಜಲಾಶಯಕ್ಕೆ ಬಾಗಿನ ಸಮರ್ಪಣೆ




**ದಾವಣಗೆರೆ.ಸೆ.29:** ದಾವಣಗೆರೆ ತಾಲೂಕು ಬಿತ್ತನೆ ಬೀಜ ರಸಗೊಬ್ಬರ ಮತ್ತು ಕೀಟನಾಶಕ ಮಾರಾಟಗಾರರ ಸಂಘ ಇವರ ಸಹಯೋಗದಲ್ಲಿ ದಾವಣಗೆರೆ ಜಿಲ್ಲೆಯ ಜೀವ ನಾಡಿಯಾದ ಭದ್ರ ಡ್ಯಾಮಿಗೆ ಇಂದು ಸಂಘದ ಅಧ್ಯಕ್ಷರಾದ ಆರನೇಕಲ್ ಮಂಜಣ್ಣ ಇವರ ನೇತೃತ್ವದಲ್ಲಿ ಬಾಗಿನವನ್ನು ಅರ್ಪಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಸೋಮಶೇಖರ್ ಎಬಿ, ಸಹಕಾರ್ಯದರ್ಶಿ ಸಮೃದ್ಧಿ ಸುರೇಶ್, ನಿರ್ದೇಶಕರುಗಳಾದ ಬ್ರಹ್ಮಲಿಂಗೇಶ್ವರ ಹನುಮಂತ ಗೌಡ, ಪಂಚಮಿ ಸೀಡ್ಸ್ ಶಂಭುಲಿಂಗಪ್ಪ, ಭೂಮಿಕಾ ಶ್ರೀಕಾಂತ್, ಹೊಸಕುಂದವಾಡ ಸಿದ್ದೇಶ್, ಜರೀಕಟ್ಟೆ ಮಾರ್ಕಂಡೇಶ್, ನರಗನಹಳ್ಳಿ ನಾಗರಾಜ್, ಕಾಶೀಪುರ ಗಿರೀಶ್, ಮಾಯಕೊಂಡದ ರವಿಕುಮಾರ್, ಸಂಘದ ಖಜಾಂಚಿ ಕಿರಣ್ ಬಾಳೇಹೊಲದ್ ಮತ್ತು ಸಂಘದ ಸರ್ವ ನಿರ್ದೇಶಕರು ಸದಸ್ಯರು ಪಾಲ್ಗೊಂಡಿದ್ದರು.

# ಶಿಸ್ತು, ಸೇವಾ ಮನೋಭಾವ, ಪರಿಸರ ಸಂರಕ್ಷಣೆಯೇ ಸ್ಕೌಟ್ಸ್ ಗುರಿ: ತಮ್ಮಯ್ಯ

**ಚಿಕ್ಕಮಗಳೂರು:** ವಿದ್ಯಾರ್ಥಿ ದೆಸೆಯಲ್ಲಿ ಶಿಸ್ತು, ಜವಾಬ್ದಾರಿ, ಸೇವಾ ಮನೋಭಾವ ಹಾಗೂ ಪರಿಸರ ಸಂರಕ್ಷಣೆಯ ಬಗ್ಗೆ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆ ಕಾಳಜಿ ತುಂಬಿ, ಸಮಾಜದಲ್ಲಿ ಮಕ್ಕಳನ್ನು ಸತ್ಪ್ರಜೆಗಳಾಗಿಸುವ ಕಾರ್ಯ ಮಾಡುತ್ತಿದೆ ಎಂದು ಶಾಸಕ ಹೆಚ್.ಡಿ.ತಮ್ಮಯ್ಯ ಹೇಳಿದರು.

ನಗರದ ಸ್ಕೌಟ್ಸ್ ಭವನದಲ್ಲಿ ಇಂದು ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆ ಆಯೋಜಿಸಿದ್ದ ಎ.ಎಂ.ನಿಂಗೇಗೌಡ ಸ್ಮಾರಕ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ತರಬೇತಿ ಕೇಂದ್ರದ ಕಟ್ಟಡ ಸಮುಚ್ಚಯದ ಭೂಮಿ ಪೂಜಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಗತ್ತಿನ ಸುಮಾರು 200 ದೇಶಗಳಲ್ಲಿ ಸ್ಕೌಟ್ಸ್ ಸಂಸ್ಥೆ ಕಾರ್ಯಪ್ರವೃತ್ತವಾಗಿದೆ. ಇದೇ ರೀತಿ ರಾಜ್ಯದಲ್ಲೂ ಪಿ.ಜಿ.ಆರ್ ಸಿಂಧ್ಯಾರವರ ನೇತೃತ್ವದಲ್ಲಿ ಅಭೂತವಾಗಿ ಕಾರ್ಯಚಟುವಟಿಕೆ ನಡೆಸಲಾಗುತ್ತಿರುವುದು ಹೆಮ್ಮೆಯ ಸಂಗತಿ ಎಂದ ಅವರು, ತುರ್ತು ಅಥವಾ ಅವಘಡ ವೇಳೆಯಲ್ಲಿ ಸ್ವಯಂಸೇವಕರಾಗಿ ದುಡಿಯುತ್ತಿರುವ ಸಂಸ್ಥೆ ಸಮಾಜಮುಖಿ ಚಿಂತನೆ ಹೊಂದಿದೆ ಎಂದರು.

ಜಿಲ್ಲೆಯ ಸ್ಕೌಟ್ಸ್ ವಿದ್ಯಾರ್ಥಿಗಳಿಗೆ ಅನುಕೂಲವಾಗಲು ಟೋಯೊಟಾ ಕಂಪನಿಯು ತನ್ನ ಸಿಎಸ್‌ಆರ್ ನಿಧಿಯಿಂದ ತರಬೇತಿ ಕೇಂದ್ರ ನಿರ್ಮಿಸಿರುವುದು ಖುಷಿಯ ವಿಷಯ. ಅದರಂತೆ ಜಿಲ್ಲಾ ಸಂಸ್ಥೆಯ ಎಲ್ಲಾ ಪದಾಧಿಕಾರಿಗಳು ಮಕ್ಕಳಲ್ಲಿ ರಾಷ್ಟ್ರಪ್ರೇಮ, ಸೇವಾಚಟುವಟಿಕೆಗಳ ಬಗ್ಗೆ ಮನದಟ್ಟು ಮಾಡಿ ಪ್ರೋತ್ಸಾಹಿಸುತ್ತಿರುವುದು ಒಳ್ಳೆಯ ಕೆಲಸ ಎಂದು ಹೇಳಿದರು.




ವಿಧಾನ ಪರಿಷತ್ ಸದಸ್ಯ ಎಸ್.ಎಲ್.ಭೋಜೇಗೌಡ ಮಾತನಾಡಿ, ಜೀವನದ ಶಿಕ್ಷಣ, ಸಂಸ್ಕಾರದ ಗುಣವನ್ನು ಸ್ಕೌಟ್ಸ್ ಸಂಸ್ಥೆ ಅರಿವು ಮೂಡಿಸುತ್ತಿದೆ. ಮನೆಗೆ ಬೆಳಕು, ಗುರುಹಿರಿಯರು, ಪಾಲಕರಿಗೆ ಹಾಗೂ ನಾಡು ನುಡಿಯ ಬಗ್ಗೆ ಗೌರವಿಸುವ ಪರಿಪಾಠವನ್ನು ಬೋಧಿಸಿ ಸಮಾಜದ ಒಳಿತಿಗೆ ಶ್ರಮಿಸುತ್ತಿದೆ ಎಂದು ತಿಳಿಸಿದರು.

ಭವಿಷ್ಯದಲ್ಲಿ ಮಕ್ಕಳು ಸಾರ್ಥಕ ಜೀವನ ಹಾಗೂ ಶಿಸ್ತುಬದ್ಧ ಬದುಕಿಗಾಗಿ ಸ್ಕೌಟ್ಸ್ ಮತ್ತು ಗೈಡ್ಸ್ ಸಹಕಾರಿ. ಮೊದಲೆಲ್ಲಾ ಅವಕಾಶ ಬಹಳಷ್ಟು ಕಡಿಮೆಯಿತ್ತು. ಸೂಕ್ತ ವ್ಯವಸ್ಥೆಯ ಸೌಲಭ್ಯವಿರಲಿಲ್ಲ. ಇದೀಗ ತರಬೇತಿ, ಕಾರ್ಯಾಗಾರ ಇನ್ನಿತರೆ ಚಟುವಟಿಕೆಗಳು ಉತ್ತಮ ಕಟ್ಟಡಗಳಲ್ಲಿ ನಿರ್ಮಿಸಿ ವಿದ್ಯಾರ್ಥಿಗಳಿಗೆ ಬೋಧಿಸುತ್ತಿದ್ದು, ಇದರ ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್.ಸಿಂಧ್ಯಾ ಮಾತನಾಡಿ, ಸ್ಕೌಟ್ಸ್ ತರಬೇತಿಗಳನ್ನು ಕಾಲಕ್ಕೆ ತಕ್ಕಂತೆ ಬದಲಾವಣೆಗೊಳಿಸಿ, ಮೂಲತತ್ವವನ್ನು ಉಳಿಸಬೇಕು. ಹಾಗಾಗಿ ವಿಶೇಷವಾಗಿ ತರಬೇತಿಯಲ್ಲಿ ಪರಿಸರ ರಾಯಭಾರಿಗಳಾಗಿಸುವ ಕಾರ್ಯ ಮಾಡುತ್ತಿದೆ ಎಂದರು.

## ರಾಜ್ಯದಲ್ಲಿ ಸದ್ದಿಲ್ಲದೇ ಏರಿಕೆಯಾಗುತ್ತಿವೆ ಡೆಂಘೀ ಸೋಂಕಿನ ಪ್ರಕರಣಗಳು

**ಬೆಂಗಳೂರು, ಸೆ.29–** ವಾತವರಣದಲ್ಲಿ ಏರುಪೇರು ಆಗುತ್ತಿದ್ದಂತೆ ರಾಜ್ಯದಲ್ಲಿ ಸದ್ದಿಲ್ಲದೇ ಸಾಂಕ್ರಾಮಿಕ ಸೋಂಕುಗಳು ಏರಿಕೆಯಾಗ್ತಿವೆ. ಆದರಲ್ಲೂ ಮಾರಣಾಂತಿಕ ಡೆಂಘೀ ಪ್ರಕರಣಗಳು ಭಾರಿ ಪ್ರಮಾಣದಲ್ಲಿ ಏರಿಕೆಯಾಗುತ್ತಿರುವುದು ಆತಂಕಕ್ಕೆ ಕಾರಣವಾಗಿದೆ.ರಾಜ್ಯದಲ್ಲಿ ಇದುವರೆಗೂ ಡೆಂಘೀ ಸೋಂಕಿತರ ಸಂಖ್ಯೆ ಐದು ಸಾವಿರದ ಗಡಿ ದಾಟಿರುವುದು ವಿಶೇಷವಾಗಿದೆ.




ಇಡೀ ರಾಜ್ಯದಲ್ಲಿ ಡೆಂಘೀ ಪ್ರಕರಣಗಳು ಏರಿಕೆಯಾಗುತ್ತಿರುವುದರ ಜೊತೆಗೆ ಬೆಂಗಳೂರಿನಲ್ಲೂ ಸೋಂಕು ಉಲ್ಬಣಗೊಂಡಿರುವುದು ಕಂಡು ಬಂದಿದೆ. ಕಳೆದ ಒಂಬತ್ತು ತಿಂಗಳಿನಲ್ಲಿ ಇಡೀ ರಾಜ್ಯದಲ್ಲಿ 5093 ಕ್ಕೂ ಹೆಚ್ಚು ಡೆಂಘೀ ಪ್ರಕರಣಗಳು ಕಂಡು ಬಂದಿದ್ದರೆ, ರಾಜಧಾನಿ ಬೆಂಗಳೂರು ಒಂದರಲ್ಲೆ 2478 ಪ್ರಕರಣಗಳು ವರದಿಯಾಗಿರುವುದು ವಿಶೇಷವಾಗಿದೆ.

ಬೆಂಗಳೂರು ಹೊರತುಪಡಿಸಿ ರಾಜ್ಯಾದಾದ್ಯಂತ 2615 ಪ್ರಕರಣಗಳು ದೃಢಪಟ್ಟಿದ್ದು, ಈ ಸೋಂಕಿಗೆ ಈಡೀಸ್ ಈಜಿಪ್ಟೈ ಎಂಬ ಸೊಳ್ಳೆ ಕಡಿತವೇ ಕಾರಣವಾಗಿದೆ.ನಿಂತ ನೀರಲ್ಲಿ ಬೆಳೆಯುವ ಈ ಡೇಂಜರಸ್ ಸೊಳ್ಳೆ ಕಚ್ಚುವುದರಿಂದ ಡೆಂಘೀ ಗುಣಲಕ್ಷಣಗಳು ಕಂಡು ಬರುತ್ತಿವೆ. ವಿಪರೀತ ಜ್ವರ, ತಲೆನೋವು, ಮೈಕೈ ನೋವು,ಕೀಲುನೋವು, ವಾಂತಿ– ವಾಕರಿಕೆ,ಕಣ್ಣುಗಳ ಹಿಂಭಾಗದಲ್ಲಿ ನೋವು, ಊದಿಕೊಂಡ ಗ್ರಂಥಿಗಳು ಈ ಸೋಂಕಿನ ಲಕ್ಷಣಗಳಾಗಿರುತ್ತವೆ.

# ರಾಶಿ ಭವಿಷ್ಯ

### ಮೇಷ ರಾಶಿ

ಫಿಟ್ ನೆಸ್ ಮತ್ತು ತೂಕ ನಷ್ಟ ಕಾರ್ಯಕ್ರಮಗಳು ನೀವು ಒಳ್ಳೆಯ ದೇಹರಚನೆ ಹೊಂದಲು ಸಹಾಯ ಮಾಡುತ್ತದೆ. ಇಂದು ನೀವು ನಿಮ್ಮ ಹಣವನ್ನು ಖರ್ಚು ಮಾಡುವ ಅಗತ್ಯವಿಲ್ಲ, ಏಕೆಂದರೆ ಮನೆಯ ಯಾವುದೇ ಹಿರಿಯ ಸದಸ್ಯ ಇಂದು ನಿಮಗೆ ಹಣವನ್ನು ನೀಡಬಹುದು. ಕುಟುಂಬದ ಸದಸ್ಯರ ಖುಷಿಯ ಸ್ವಭಾವ ಮನೆಯಲ್ಲಿನ ವಾತಾವರಣವನ್ನು ಹಗುರಗೊಳಿಸುತ್ತದೆ.ನೀವು ನಿಮ್ಮ ಪ್ರೀತಿಪಾತ್ರರನ್ನು ಅವಳ ಹಿಂದಿನ ಉದಾಸೀನತೆಯನ್ನು ಮನ್ನಿಸುವ ಮೂಲಕ ನಿಮ್ಮ ಜೀವನವನ್ನು ಮೌಲ್ಯಯುತವಾಗಿಸುತ್ತೀರಿ.

### ವೃಷಭ ರಾಶಿ

ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ವಿಶ್ವಾಸರಾಹಿತ್ಯ ಅಹಂಭಾವ ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ. ನಿಮ್ಮ ಖರ್ಚುಗಳಲ್ಲಿ ಅನಿರೀಕ್ಷಿತ ಏರಿಕೆ ನಿಮ್ಮ ಮನಸ್ಸಿನ ಶಾಂತಿಗೆ ಭಂಗ ತರುತ್ತದೆ. ಎಲ್ಲರನ್ನೂ ನಿಮ್ಮ ದೊಡ್ಡ ಪಾರ್ಟಿಗೆ ಕರೆಯಿರಿ ನೀವು ಇಂದು ಆ ಹೆಚ್ಚುವರಿ ಚೈತನ್ಯವನ್ನು ಹೊಂದಿರುತ್ತೀರಿ ಹಾಗೂ ಇದು ನಿಮ್ಮನ್ನು ನಿಮ್ಮ ಗುಂಪಿಗಾಗಿ ಸಮಾರಂಭವನ್ನು ಸಂಯೋಜಿಸುವಂತೆ ಮಾಡುತ್ತದೆ.

### ಮಿಥುನ ರಾಶಿ

ಒಬ್ಬ ಆಧ್ಯಾತ್ಮಿಕ ವ್ಯಕ್ತಿ ಆಶೀರ್ವಾದ ಮಾಡುತ್ತಾರೆ ಮತ್ತು ಮನಸ್ಸಿನ ಶಾಂತಿ ತರುತ್ತಾರೆ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ನಿಮ್ಮ ಮಗುವಿನ ಒಂದು ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಆಮಂತ್ರಣ ಸಂತೋಷದ ಮೂಲವಾಗಬಹುದು.

### ಕರ್ಕ ರಾಶಿ

ಸ್ವಯಂ ಸುಧಾರಣೆಯ ಯೋಜನೆಗಳು ಒಂದಕ್ಕಿಂತ ಹೆಚ್ಚು ರೀತಿಯಲ್ಲಿ ಫಲ ನೀಡುತ್ತವೆ - ನಿಮ್ಮ ಬಗ್ಗೆ ನಿಮಗೇ ಒಳ್ಳೆಯದೆನಿಸುತ್ತದೆ ಮತ್ತು ವಿಶ್ವಾಸ ಮೂಡುತ್ತದೆ. ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತಿದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ. ಮನೆಯ ಸದಸ್ಯರೊಬ್ಬರ ವರ್ತನೆಯಿಂದ ನೀವು ತೊಂದರೆಗೊಳಗಾಗಬಹುದು. ನೀವು ಅವರೊಂದಿಗೆ ಮಾತನಾಡುವ ಅಗತ್ಯವಿದೆ. ಪ್ರಣಯಕ್ಕೆ ಒಳ್ಳೆಯ ದಿನ. ನಿಮ್ಮ ಶ್ರಮ ಕೆಲಸದಲ್ಲಿ ಇಂದು ಫಲ ನೀಡುತ್ತದೆ.

### ಸಿಂಹ ರಾಶಿ

ಕ್ರೀಡೆಗಳು ಸಾರ್ವಕಾಲಿಕ ಯೌವನದ ರಹಸ್ಯವಾಗಿದ್ದರಿಂದ ಯಾವುದಾದರೂ ಆಟಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ.

### ಕನ್ಯಾ ರಾಶಿ

ಕಣ್ಣಿನ ಪೋರೆ ರೋಗಿಗಳಿಗೆ ಧೂಮಪಾನವು ಅವರ ಕಣ್ಣುಗಳಿಗೆ ಮತ್ತಷ್ಟು ಹಾನಿಯುಂಟುಮಾಡಬಹುದಾದ್ದರಿಂದ ಅವರು ಕಲುಷಿತ ಪರಿಸರದಲ್ಲಿ ಹೋಗಬಾರದು. ಸಾಧ್ಯವಾದರೆ ಸೂರ್ಯನ ಬೆಳಕಿಗೆ ಅತಿಯಾದ ಒಡ್ಡಿಕೊಳ್ಳುವಿಕೆಯನ್ನು ತಪ್ಪಿಸಿ. ನೀವು ಪ್ರಯಾಣ ಮಾಡುವ ಮತ್ತು ಹಣ ಖರ್ಚು ಮಾಡುವ ಮನಸ್ಥಿತಿಯಲ್ಲಿರುತ್ತೀರಿ. ಅದರೆ ಹಾಗೆ ಮಾಡಿದಲ್ಲಿ ನೀವು ವಿಷಾದಿಸುತ್ತೀರಿ. ಥಿಯೇಟರ್ ಅಥವಾ ನಿಮ್ಮ ಸಂಗಾತಿಯ ಜೊತೆಗಿನ ಊಟ ನಿಮ್ಮನ್ನು ಒಂದು ಶಾಂತವಾದ ಮತ್ತು ಅದ್ಭುತ ಲಹರಿಯಲ್ಲಿರಿಸುವಂತೆ ತೋರುತ್ತದೆ.

### ತುಲಾ ರಾಶಿ

ನೀವು ಬಹಳ ವಿಚಿತ್ರವಾದ ಪರಿಸ್ಥಿತಿಯಲ್ಲಿ ಸಿಲುಕಿದರೂ ಅದನ್ನು ಎದುರಿಸಲು ನಿಮ್ಮ ಇಚ್ಛಾಶಕ್ತಿ ಇಂದು ಸಹಾಯ ಮಾಡಬಹುದು. ಒಂದು ಅತ್ಯಂತ ಭಾವನಾತ್ಮಕ ನಿರ್ಧಾರ ಕೈಗೊಳ್ಳುವಾಗ ನೀವು ಸ್ತಿಮಿತ ಕಳೆದುಕೊಳ್ಳಬಾರದು. ದುರ್ಬಲ ಆರ್ಥಿಕ ಸ್ಥಿತಿಯಿಂದ ಕೆಲವು ಪ್ರಮುಖ ಕೆಲಸಗಳು ಸ್ಥಗಿತಗೊಳ್ಳುತ್ತವೆ. ಕೌಟುಂಬಿಕ ಜೀವನ ಸರಾಗವಾಗಿ ನಡೆಯುತ್ತಿರುವಂತೆ ತೋರುತ್ತದೆ ಮತ್ತು ನಿಮ್ಮ ಯೋಜನೆಗಳಿಗೆ ಪೂರ್ಣ ಬೆಂಬಲವನ್ನು ನೀವು ನಿರೀಕ್ಷಿಸಬಹುದು.

### ವೃಶ್ಚಿಕ ರಾಶಿ

ತಂದೆಯು ನಿಮ್ಮನ್ನು ಆಸ್ತಿಯ ಉತ್ತರಾಧಿಕಾರಿತ್ವದಿಂದ ತಪ್ಪಿಸಬಹುದು. ಆದರೆ ಧೃತಿಗೆಡಬೇಡಿ. ಅಭ್ಯುದಯ ಮನಸ್ಸಿಗೆ ಮುದ ನೀಡಿದರೆ ಅಭಾವ ಅದನ್ನು ಬಲಗೊಳಿಸುತ್ತದೆಂದು ನೆನಪಿಡಿ. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ.

### ಧನು ರಾಶಿ

ನಿಮ್ಮ ವಿಶ್ವಾಸ ಮತ್ತು ಚೈತನ್ಯ ಇಂದು ಅಧಿಕವಾಗಿರುತ್ತದೆ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ - ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ. ನೀವು ಬಯಸುವ ಲ್ಲಾ ಗಮನವನ್ನೂ ನೀವು ಪಡೆಯುವ ಒಳ್ಳೆಯ ದಿನ ನಿಮ್ಮ ಮನಸ್ಸಿನಲ್ಲಿ ಅನೇಕ ವಿಷಯಗಳಿರುತ್ತವೆ ಹಾಗೂ ನೀವು ಯಾವುದನ್ನು ಅನುಸರಿಸಬೇಕೆನ್ನುವ ಸಮಸ್ಯೆ ಹೊಂದಿರುತ್ತೀರಿ. ಪ್ರೀತಿಯ ಶಕ್ತಿ ನಿಮಗೆ ಪ್ರೀತಿಸಲು ಒಂದು ಕಾರಣ ನೀಡುತ್ತದೆ. ಅರ್ಹ ನೌಕರರಿಗೆ ಬಡ್ತಿ ಅಥವಾ ಆರ್ಥಿಕ ಲಾಭ.

### ಮಕರ ರಾಶಿ

ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ಸಮಯ ಮತ್ತು ಹಣದ ಕಾತರ ನೀವು ಮಾಡಬೇಕು ಇಲ್ಲದಿದ್ದರೆ ಮುಂಬರುವ ಸಮಯ ತೊಂದರೆಗಳಿಂದ ತುಂಬಿರಬಹುದು ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ಇಂದು, ನೀವು ನಿಮ್ಮ ಪ್ರಿಯತಮೆ ನಿಮ್ಮನ್ನು ಎಷ್ಟು ಪ್ರೀತಿಸುತ್ತಾರೆಂದು ತಿಳಿದುಕೊಳ್ಳುತ್ತೀರಿ.

### ಕುಂಭ ರಾಶಿ

ಕೆಲವು ಮಾನಸಿಕ ಒತ್ತಡಗಳ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ತಮ್ಮ ಆಪ್ತರು ಅಥವಾ ಸಂಬಂಧಿಕರೊಂದಿಗೆ ಸೇರಿ ವ್ಯಾಪಾರವನ್ನು ಮಾಡುತ್ತಿರುವ ಜನರು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹೆಜ್ಜೆಯನ್ನು ಹಾಕುವ ಅಗತ್ಯವಿದೆ , ಇಲ್ಲದಿದ್ದರೆ ಆರ್ಥಿಕ ನಷ್ಟವಾಗಬಹುದು ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ

### ಮೀನ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ. ಕುಟುಂಬದ ಸದಸ್ಯರು ಅಥವಾ ಸಂಗಾತಿ ಕೆಲವು ಆತಂಕಗಳನ್ನು ಉಂಟುಮಾಡುತ್ತಾರೆ. ಕೆಲವರಿಗೆ ಸುಂದರ ಉಡುಗೊರೆಗಳು ಮತ್ತು ಹೂಗಳಿಂದ ತುಂಬಿದ ಪ್ರಣಯದ ಸಂಜೆ.

## ಸನ್ ಬೋನ್ ಮತ್ತು ಸ್ಪೈನ್ ಸ್ಪೆಷಾಲಿಟಿ ಆಸ್ಪತ್ರೆ ಲೋಕಾರ್ಪಣೆ

# ವೈದ್ಯರು ಹಣಕ್ಕೆ ಹಾತೊರೆಯದೆ ರೋಗಿಗಳ ಆತ್ಮಸ್ಥೈರ್ಯ ಹೆಚ್ಚಿಸಲಿ: ವೀರಾಪುರ ಶ್ರೀಗಳು

**ಶಿವಮೊಗ್ಗ:** ವೈದ್ಯರು ಹಣಕ್ಕಾಗಿ ಹಾತೊರೆಯದೆ ಮಾತ್ರ ಹೃದಯದಿಂದ ರೋಗಿಗಳಿಗೆ ಚಿಕಿತ್ಸೆ ನೀಡಿ ಅವರ ಆತ್ಮಸ್ಥೈರ್ಯ ಹೆಚ್ಚಿಸಬೇಕು. ಬದುಕುವ ವಿಶ್ವಾಸ ಮೂಡಿಸಬೇಕು. ಹಣಕ್ಕಾಗಿ ಹಾತೊರೆಯದೆ ಆತ್ಮೀಯತೆ, ಪ್ರೀತಿಯಿಂದ ಉಪಚರಿಸಿ ಮಾನವೀಯತೆ ತೋರಬೇಕು. ಆಗ ರೋಗಿಗಳು ಶೀಘ್ರ ಗುಣಮುಖರಾಗುತ್ತಾರೆ ಎಂದು ವೀರಾಪುರ ಹಿರೇಮಠದ ಡಾ. ಮರುಳಸಿದ್ಧ ಪಂಡಿತಾರಾಧ್ಯ ಶಿವಾಚಾರ್ಯರು ಅಭಿಪ್ರಾಯಿಸಿದರು.

ಇಲ್ಲಿನ ತಿಲಕ್ ನಗರದ ರಾಘವೇಂದ್ರ ಸ್ವಾಮಿ ಮಠ ರಸ್ತೆಯಲ್ಲಿ ನೂತನವಾಗಿ ನಿರ್ಮಿಸಿರುವ ಸನ್ ಬೋನ್ ಮತ್ತು ಸ್ಪೈನ್ ಸ್ಪೆಷಾಲಿಟಿ ಆಸ್ಪತ್ರೆಯನ್ನು 28-09-2025ರ ಭಾನುವಾರ ಬೆಳಿಗ್ಗೆ ಉದ್ಘಾಟಿಸಿ ಅವರು ಆಶೀರ್ವಚನ ನೀಡಿದರು.

ವೈದ್ಯರು ಶ್ರದ್ಧೆ, ಭಕ್ತಿ, ಪ್ರಾಮಾಣಿಕತೆಯಿಂದ ಚಿಕಿತ್ಸೆ ನೀಡುವ ಮೂಲಕ ಸಮಾಜಕ್ಕೆ ಕೊಡುಗೆ ನೀಡಲಿ. ಆಗ ಭಗವಂತ ವೈದ್ಯರಿಗೆ



ಸಂಪತ್ತನ್ನು ಕರುಣಿಸುತ್ತಾನೆ. ವೈದ್ಯರ ಇಚ್ಛಾ ಶಕ್ತಿ, ಕ್ರಿಯಾ ಶಕ್ತಿ, ಜ್ಞಾನ ಶಕ್ತಿಯ ಮೂಲಕ ರೋಗಿಗಳ ಖಾಯಿಲೆ ದೂರ ಮಾಡಬೇಕೆಂದರು.

ದೇಹವು ರಸ, ರಕ್ತ, ಮಾಂಸ, ಅಸ್ಥಿ ಸೇರಿದಂತೆ ಸಪ್ತಧಾತುಗಳಿಂದ ಕೂಡಿದೆ. ಈ ಸಪ್ತಧಾತುಗಳಲಿ ಅಸ್ಥಿ ಬಹಳ ಪ್ರಮುಖವಾದುದು. ಉಳಿದ ಆರು ಧಾತುಗಳನ್ನು ಅಸ್ಥಿ ಹಿಡಿದಿಟ್ಟಿದೆ. ಅಸ್ಥಿ ಇಲ್ಲದಿದ್ದಲ್ಲಿ ಅಸ್ತಿತ್ವವೇ ಇರುವುದಿಲ್ಲ. ಇಂತಹ ಮಹತ್ವದ ಅಸ್ಥಿಯ ಅತ್ಯಾಧುನಿಕ ಚಿಕಿತ್ಸೆಗಾಗಿ ಸುಸಜ್ಜಿತ ಆಸ್ಪತ್ರೆ ಪ್ರಾರಂಭಿಸುವ ಮೂಲಕ ಆರೋಗ್ಯ ಕ್ಷೇತ್ರದಲ್ಲಿ ಶಿವಮೊಗ್ಗಕ್ಕೆ ಉತ್ತಮ ಆಸ್ತಿ ಮಾಡಿದಂತಾಗಿದೆ ಎಂದು ಹೇಳಿದರು.

ಸಂಸದ ಬಿ.ವೈ. ರಾಘವೇಂದ್ರ ಮಾತನಾಡಿ ಶಿವಮೊಗ್ಗ ನಗರದಲ್ಲಿ ಅತ್ಯಾಧುನಿಕ ಸೌಲಭ್ಯವುಳ್ಳ ಆಸ್ಪತ್ರೆಗಳು ಹೆಚ್ಚುತ್ತಿವೆ. ರಾಜ್ಯವಷ್ಟೇ ಅಲ್ಲ ದೇಶದ ಆರೋಗ್ಯ ಕ್ಷೇತ್ರದ ಭೂಪಟದಲ್ಲಿ ಶಿವಮೊಗ್ಗ ಜಿಲ್ಲೆ ಮಹತ್ವದ ಸ್ಥಾನ ಪಡೆಯುತ್ತಿದೆ.

ಬೆಂಗಳೂರು, ಮುಂಬೈ, ಚನ್ನೈ, ಹೈದರಾಬಾದ್‌ನಂತಹ ಮೆಟ್ರೋ ಸಿಟಿಗಳಲ್ಲಿ ಮಾತ್ರ ಲಭ್ಯವಿದ್ದ ಅತ್ಯಾಧುನಿಕ ಚಿಕಿತ್ಸೆಯು ಶಿವಮೊಗ್ಗದಂತಹ ಎರಡನೇ ಹಂತದ ನಗರಗಳಲ್ಲಿ ದೊರೆಯುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ. ಇದಕ್ಕೆ ಪೂರಕವಾಗಿ ರಸ್ತೆ, ರೈಲು ಸಂಪರ್ಕ, ವಿಮಾನಯಾನ ಕಲ್ಪಿಸಿರುವುದರಿಂದ ಬೇರೆ ಭಾಗದ ರೋಗಿಗಳು ಇಲ್ಲಿಗೆ ಬಂದು ಚಿಕಿತ್ಸೆ ಪಡೆಯಲು ಅನುಕೂಲವಾಗಲಿದೆ ಎಂದರು.

ವಿಧಾನ ಪರಿಷತ್ತಿನ ಮಾಜಿ ಸಭಾಪತಿ ಬಿ.ಎಲ್. ಶಂಕರ್ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಬೆಂಗಳೂರಿನ ಆಸ್ಟರ್ ಆಸ್ಪತ್ರೆಯ ನರ ವಿಜ್ಞಾನ ವಿಭಾಗದ ನಿರ್ದೇಶಕ, ಪ್ರಮುಖ ಸಲಹೆಗಾರ ಪ್ರೊ. ಡಾ. ಸತೀಶ್ ರುದ್ರಪ್ಪ ಉಪಸ್ಥಿತರಿದ್ದರು.

ಆರ್ಥೋ ಸ್ಪೈನ್ ಸರ್ಜನ್ ಡಾ. ಆಕಾಶ್ ಹೊಸತೋಟ, ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ, ವಿಧಾನ ಪರಿಷತ್ ಸದಸ್ಯರುಗಳಾದ ಡಾ. ಧನಂಜಯ ಸರ್ಜಿ, ಎಸ್.ಎಲ್. ಭೋಜೇಗೌಡ,

ಮಾಜಿ ಸದಸ್ಯ ಎಸ್. ರುದ್ರೇಗೌಡ, ಅಡಿಕೆ ವರ್ತಕ ಸೂರ್ಯನಾರಾಯಣ್ ಹೊಸ್ತೋಟ, ನಮಿತಾ, ಡಾ. ಪೂಜಾ ಆಕಾಶ್, ಬಿ.ವೈ. ಅರುಣಾದೇವಿ, ಡಾ. ಸೀಮಂತಿನಿ ದೇಸಾಯಿ, ಡಾ. ದೀಪಕ್ ಉಪ್ಪಿನ್, ಡಾ. ಹೆಚ್.ಡಿ. ಭರತ್, ಡಾ. ಎಂ.ಬಿ.ಅಭಿಷೇಕ್, ಜಿಲ್ಲಾ ರಕ್ಷಣಾಧಿಕಾರಿ ಜಿ.ಕೆ. ಮಿಥುನ್ ಕುಮಾರ್ ಮತ್ತಿತರರು ಭಾಗವಹಿಸಿದ್ದರು.

ಸುರೇಖಾ ಹೆಗಡೆ ಪ್ರಾರ್ಥಿಸಿ, ಡಾ. ಆಕಾಶ್ ಸ್ವಾಗತಿಸಿ, ಸೂರ್ಯನಾರಾಯಣ್ ಪ್ರಸ್ತಾವಿಸಿ ಸಮನ್ವಯ ಕಾಶಿ ನಿರೂಪಿಸಿದರು.

# ಕ್ಷಯ ರೋಗಿಗಳಿಗೆ ಉಚಿತ ಆಹಾರದ ಕಿಟ್

**ದಾವಣಗೆರೆ :** ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಇತ್ತೀಚೆಗೆತಾಲ್ಲೂಕು ಆರೋಗ್ಯಾಧಿಕಾರಿಗಳ ಕಛೇರಿ, ದಾವಣಗೆರೆ ಸಭಾಂಗಣದಲ್ಲಿ ಮಹಮ್ಮದ್ ರಫಿ ಜೆ ವಿದ್ಯುತಗುತ್ತಿಗೆದಾರರು ನಾಗರಸನಹಳ್ಳಿ ದಾವಣಗೆರೆತಾಲ್ಲೂಕು , ಇವರುತಮ್ಮ ಮಗಳ ಮೊದಲನೇ ವರ್ಷದ ಹುಟ್ಟು ಹಬ್ಬದಆಚರಣೆಯನ್ನುಸುಮಾರು 150 ಕ್ಷಯ ರೋಗಿಗಳಿಗೆ ಆಹಾರದ ಕಿಟ್‌ಗಳನ್ನು 6 ತಿಂಗಳ ವರೆಗೆ ನೀಡಲುಒಪ್ಪಿಕೊಂಡು ಮೊದಲನೆ ಕಂತಿನಲ್ಲಿತಮ್ಮ ಮಗಳ ಹುಟ್ಟು ಹಬ್ಬದ ದಿನದ ಪ್ರಯುಕ್ತತಾಲ್ಲೂಕು ಆರೋಗ್ಯಾಧಿಕಾರಿಗಳ ಕಛೇರಿ, ದಾವಣಗೆರೆಯಲ್ಲಿ ಕ್ಷಯರೋಗಿಗಳಿಗೆ ಪುಡ್‌ಕಿಟ್ ನೀಡುವುದರೊಂದಿಗೆ ಆಚರಿಸಿದರು. ಈ ಸಂದರ್ಭದಲ್ಲಿಮಯಖ್ಯತಿಥಿಗಳಾಗಿ ಆಗಮಿಸಿದ್ದ ಜಿಲ್ಲಾಆರೋಗ್ಯ ಮತ್ತುಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ॥ ಷಣ್ಮುಖಪ್ಪ ನವರು ಮಾತನಾಡಿಮಹಮದ್‌ರಫಿ ಜೆರವರುತಮ್ಮ ಮಗಳ ಹುಟ್ಟುಹಬ್ಬದ ಪ್ರಯುಕ್ತಕ್ಷಯರೋಗಗಳಿಗೆ ಪುಡ್‌ಕಿಟ್ ವಿತರಣೆ ಮಾಡುತ್ತಿರುವುದುಶ್ರೇಷ್ಟದಾನವಾಗಿದೆ, ಇವರ ಈ ಕೊಡುಗೆಯನ್ನುಇಲಾಖೆಯು ಶ್ಲಾಘಿಸುತ್ತದೆಎಂದುಇನ್ನೂಇಂತಹಹಲವು ದಾನಿಗಳು ಮುಂದೆ ಬರಲುಕರೆನೀಡಿದರು.

ನಂತರಜಿಲ್ಲಾಕ್ಷಯರೋಗ ನಿರ್ಮೂಲನಾಧಿಕಾರಿಗಳಾದ ಡಾ॥ ಮುರುಳೀಧರ ಪಿ.ಡಿ. ರವರು ಮಾತನಾಡಿಕ್ಷಯರೋಗನಿರ್ಮೂಲನಾ



ಕಾರ್ಯಕ್ರಮದಡಿಇದನ್ನುಒಂದು ನಿಕ್ಷಯ್ ಮಿತ್ರಕಾರ್ಯಕ್ರಮಎಂದುಕರೆಯುತ್ತಾರೆ, ಕ್ಷಯರೋಗಿಗಳಿಗೆ ಪೌಷ್ಠಿಕಾಂಶಯುಕ್ತಆಹಾರ ಸೇವನೆರೋಗ ನಿರ್ಮೂಲನೆಯಲ್ಲಿತುಂಬಾಅವಶ್ಯಕವಾಗಿರುತ್ತದೆ.ಯುವ ಮುಖಂಡರಾದಮಹಮದ್‌ರಫಿಜೆತಮ್ಮ ಮಗಳ ಹುಟ್ಟು ಹಬ್ಬವನ್ನುಅರ್ಥಪೂರ್ಣವಾಗಿ ಆಚರಿಸಿಕೊಳ್ಳುತ್ತಿರುವುದಕ್ಕೆ ದಾನಿಗಳನ್ನು ನಮ್ಮಆರೋಗ್ಯ ಇಲಾಖೆ ವತಿಯಿಂದಸನ್ಮಾನಿಸುವ ಮೂಲಕ ಅವರಿಗೆತುಂಬು ಹೃದಯದ ಧನ್ಯವಾದಗಳನ್ನು ಅರ್ಪಿಸುತ್ತಿದ್ದೇವೆಎಂದರು.

ನಂತರತಾಲ್ಲೂಕುಆರೋಗ್ಯಾಧಿಕಾರಿಗಳಾದ ಡಾ॥ ದೇವರಾಜ್ ಪಟಗೆಮಾತನಾಡಿಇಂತಹ ದಾನಿಗಳು ಇನ್ನೂ ಹೆಚ್ಚಿನರೀತಿಯಲ್ಲಿ ಇಲಾಖೆಗೆ ಸಹಕಾರ ನೀಡುವ ಮೂಲಕ ಕ್ಷಯರೋಗವನ್ನುತಡೆಗಟ್ಟಲು ಸಮುದಾಯ ಭಾಗವಹಿಸಬೇಕು ಎಂದುಕರೆ ನೀಡಿದರು.

ನಂತರಹಿರಿಯಕ್ಷಯರೋಗಚಿಕಿತ್ಸಾ ಮೇಲ್ವಿಚಾರಕರುದಾವಣಗೆರೆಗ್ರಾಮೀಣಘಟಕಶ್ರೀ ಹಾಲಸ್ವಾಮಿ ಎನ್.ಸಿ ರವರುಕೂಡ ಮಾತನಾಡಿಕ್ಷಯರೋಗಿಗಳನ್ನು ಮುಖ್ಯವಾಹಿನಿಗೆ ತರಲು ಸಮುದಾಯದಲ್ಲಿರುವಜನಸಾಮಾನ್ಯರುಯುವ ಮುಖಂಡರಾದ ಮಹಮದ್‌ರಫಿಜೆರವರಹಾಗೆ ದಾನಿಗಳಾಗಿ ಮುಂದೆ ಬಂದರೆ ರೋಗಿಗಳನ್ನು ಮುಖ್ಯವಾಹಿನಿಗೆ ತರಬಹುದುಎಂದರು, ಈ ಸಂಧರ್ಭದಲ್ಲಿಇಲಾಖೆಯ ಸಿಬ್ಬಂದಿಗಳಾದ ನಂದೀಶ್‌ಶ್ರೀನಿವಾಸ್, ದೊಡ್ಡಮನಿ, ಬಸವರಾಜ್‌ಇತತರು ಹಾಜರಿದ್ದರು,

# ಸರ್ವ ಸದಸ್ಯರ ವಾರ್ಷಿಕ ಮಹಾಸಭೆ

**ದಾವಣಗೆರೆ:** ಕಡ್ಲೇಬಾಳು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ 2024-25ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯು ಈಚೆಗೆ ಸಂಘದ ಆವರಣದಲ್ಲಿ ನಡೆಯಿತು.
ಸಂಘದ ಅಧ್ಯಕ್ಷ ಹೆಚ್.ಎಸ್. ಉಜ್ಜಪ್ಪ ವಾರ್ಷಿಕ ಮಹಾಸಭೆಯನ್ನು ಉದ್ಘಾಟಿಸಿ ಮಾತನಾಡಿ, ಸಂಘದ ಅಭಿವೃದ್ಧಿಗೆ ಸದಸ್ಯರು ತಾವು ಪಡೆದ ಸಾಲವನ್ನು ಸಕಾಲಕ್ಕೆ ನೀಡಲು ಕಿವಿಮಾತು ಹೇಳಿದರು.
ಸಂಘದ ನಿರ್ದೇಶಕ ರಾಘವೇಂದ್ರ ನಾಯ್ಕ್ ಮಾತನಾಡಿ, ಸಂಘದ ರೈತ ಸದಸ್ಯರಿಗೆ ಶೂನ್ಯ ಬಡ್ಡಿ ದರದಲ್ಲಿ ಸಾಲ ನೀಡಲಾಗುತ್ತಿದ್ದು, ರೈತರು ಇದನ್ನು ಸದುಪಯೋಗ ಪಡಿಸಿಕೊಳ್ಳಿ ಎಂದು ತಿಳಿಸಿದರು. ಸಭೆಯಲ್ಲಿ ಸಂಘದ ಹಾಲಿ ಮತ್ತು ಮಾಜಿ ನಿರ್ದೇಶಕರು, ರೈತ ಸದಸ್ಯರು ಭಾಗವಹಿಸಿದ್ದರು.

## ಶ್ರೀಗುರು ಕರಿಸಿದ್ದೇಶ್ವರ ಸ್ವಾಮಿಗಳ ಪುಣ್ಯಾರಾಧನೆ

**ದಾವಣಗೆರೆ:** ಶ್ಯಾಗಲೆ ಗ್ರಾಮದ ಶ್ರೀಗುರು ಕರಿಸಿದ್ದೇಶ್ವರ ಸ್ವಾಮಿಗಳ 70ನೇ ಪುಣ್ಯಾರಾಧನೆಯು ಶ್ಯಾಗಲೆಯ ಶ್ರೀಗುರು ಕರಿಸಿದ್ದೇಶ್ವರ ಸ್ವಾಮಿ ಸಮುದಾಯ ಭವನದಲ್ಲಿ ನಡೆಯಿತು.

# ನಿಧನ ಸುದ್ದಿಗಳು

### ಜಯಣ್ಣ ನಿಧನ

**ಸಂತೇಬೆನ್ನೂರು:** ಇಲ್ಲಿನ ಶಿವಗಂಗಾ ಕಾಲೊನಿ ನಿವಾಸಿ ನೀರಾವರಿ ಇಲಾಖೆ ನಿವೃತ್ತ ಅಧಿಕಾರಿ ಜಯಣ್ಣ (82) ಶನಿವಾರ ನಿಧನರಾದರು. ಇವರಿಗೆ ಪತ್ನಿ, ಇಬ್ಬರು ಪುತ್ರರು, ಒಬ್ಬ ಪುತ್ರಿ ಇದ್ದಾರೆ. ಅಂತ್ಯಕ್ರಿಯೆ ಭಾನುವಾರ ನಡೆಯಿತು.

### ಡಾ.ಚನ್ನಯ್ಯಸ್ವಾಮಿ ನಿಧನ

**ಮಲೇಬೆನ್ನೂರು** : ಪಟ್ಟಣದ ಸ್ವಾಮಿ ಕ್ಲಿನಿಕ್ ವೈದ್ಯರಾದ ಡಾ. ಚನ್ನಯ್ಯಸ್ವಾಮಿ 28-09-20258 ಭಾನುವಾರ ರಾತ್ರಿ 9.30 ಕ್ಕೆ ಅನಾರೋಗ್ಯದಿಂದಾಗಿ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ 47 ವರ್ಷ ವಯಸ್ಸಾಗಿತ್ತು. ತಂದೆ, ತಾಯಿ, ಪತ್ನಿ, ಮಕ್ಕಳು, ಸಹೋದರಿ, ಸಹೋದರ, ಅಳಿಯಂದಿರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 29-09-2025 ರ ಸೋಮವಾರ ಮಧ್ಯಾಹ್ನ 3 ಗಂಟೆಗೆ ಬ್ಯಾಡಗಿ ತಾಲ್ಲೂಕಿನ ಗುಡ್ಡದ ಮಲ್ಲಾಪುರ ಗ್ರಾಮದಲ್ಲಿ ನೆರವೇರಿದೆ.

### ಕಡ್ಲೆಬಾಳು ಮಾನಿ ಮಂಜಪ್ಪ ನಿಧನ

**ದಾವಣಗೆರೆ:** ತಾಲ್ಲೂಕು ಹೊಸಕಡ್ಲೆಬಾಳು ಗ್ರಾಮದ ದಿ. ಮಾನಿ ಚನ್ನಬಸಪ್ಪನವರ ಪುತ ಶ್ರೀ ಮಾನಿ ಮಂಜಪ್ಪ ಇವರು ದಿನಾಂಕ 28.9.2025 ರ ಭಾನುವಾರ ರಾತ್ರಿ 11 ಗಂಟೆಗೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ 61 ವರ್ಷ ವಯಸ್ಸಾಗಿತ್ತು. ಪತ್ನಿ, ಒರ್ವ ಪುತ್ರ, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು - ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 29.9.2025ರ ಮಧ್ಯಾಹ್ನ 1 ಗಂಟೆಗೆ ದಾವಣಗೆರೆ ತಾಲ್ಲೂಕು ಹೊಸಕಡ್ಲೆಬಾಳು ಗ್ರಾಮದ ಮೃತರ ಸ್ವಂತ ಜಮೀನಿನಲ್ಲಿ ನೆರವೇರಿಸಲಾಯಿತು.

### ಮಾಗಳದ ಚೌಡಮ್ಮ ನಿಧನ

**ಹರಪನಹಳ್ಳಿ :** ತಾಲ್ಲೂಕು ಜಿ. ದಾದಾಪುರ ಗ್ರಾಮ ವಾಸಿ ಶ್ರೀಮತಿ ಮಾಗಳದ ಚೌಡಮ್ಮ ಇವರು ದಿನಾಂಕ 28-09-2025ರ ಭಾನುವಾರ ಸಂಜೆ 7:45ಕ್ಕೆ ನಿಧಾನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ 59 ವರ್ಷ ವಯಸ್ಸಾಗಿತ್ತು. ಪತಿ, ಐವರು ಪುತ್ರರು, ಸೊಸೆಯಂದಿರು, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗವನ್ನು ಆಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 29-09-2025 ರ ಸೋಮವಾರ ಮಧ್ಯಾಹ್ನ 2ಕ್ಕೆ ಜಿ. ದಾದಾಪುರ ಗ್ರಾಮದ ಮೃತರ ಜಮೀನಿನಲ್ಲಿ ನೆರವೇರಿದೆ.

### ವೆಂಕಟರಮಣ ಶ್ರೇಷ್ಠಿ ನಿಧನ

**ದಾವಣಗೆರೆ :** ಸಿಟಿ ಎಂ.ಸಿ.ಸಿ. 'ಬಿ' ಬ್ಲಾಕ್, 12ನೇ ಮೇನ್, ಬಾಪೂಜಿ ಸ್ಕೂಲ್ ಹತ್ತಿರ, ಓಂ ಬಾಲಾಜಿ ಅಪಾರ್ಟ್‌ಮೆಂಟ್ ವಾಸಿ ದಾವಣಗೆರೆ ಐಟಿಐ ಕಾಲೇಜಿನ ನಿವೃತ್ತ ಪ್ರಾಚಾರ್ಯ

ವೆಂಕಟರಮಣ ಶ್ರೇಷ್ಠಿ ಅವರು ದಿನಾಂಕ : 28-09-2025ರ ಭಾನುವಾರ ನಿಧನರಾದರು. ಅವರಿಗೆ 86 ವರ್ಷ ವಯಸ್ಸಾಗಿತ್ತು. ಪತ್ನಿ, ಓರ್ವ ಪುತ್ರ, ಇಬ್ಬರು ಪುತ್ರಿಯರು, ಅಳಿಯಂದಿರು, ಸೊಸೆ, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ : 29-09-2025ರ ಸೋಮವಾರ ಬೆಳಿಗ್ಗೆ 9-30ಕ್ಕೆ ನಗರದ ಶಾಮನೂರಿನ ಗ್ಲಾಸ್ ಹೌಸ್ ಬಳಿ ಇರುವ ವೈಕುಂಠಧಾಮದಲ್ಲಿ ನೆರವೇರಿದೆ.

# ಉತ್ತರ ಕರ್ನಾಟಕ ಬಾಗದ ಸವಿತಾ ಕ್ಷೌರಿಕರ ಅಭಿವೃದ್ಧಿ ಅಂದರೆ ಅಷ್ಟೇ ಸಾಕೇ? ಅಧಿಕಾರ ಬೇಡವೇ? ಹಮನಂತಪ್ಪ ರಾಂಪೂರ ಬೇಸರ

**ಗದಗ :** ಉತ್ತರ ಕರ್ನಾಟಕ ಹಾಗೂ ಈ ಭಾಗದ ಹಿಂದುಳಿದ ಶೋಷಿತ ಹಾಗೂ ಬಡ ಸವಿತಾ ಸಮಾಜದ ಕ್ಷೌರಿಕರ ಸಮಾನತೆ ಕುರಿತಾಗಿ ರಾಜಕಾರಣಿಗಳು ದೊಡ್ಡ ದೊಡ್ಡ ಭಾಷಣಗಳನ್ನೇ ಮಾಡುತ್ತಾರೆ. ಆದ್ರೆ, ರಾಜಕಾರಣದಲ್ಲಿ ಈ ಭಾಗದ ಸವಿತಾ ಸಮಾಜದ ಕ್ಷೌರಿಕರ ನಾಯಕರು ಎಷ್ಟಿದ್ದಾರೆ ಎಂದು ಕೇಳಿದರೆ ನಿಜಕ್ಕೂ ನಾಚಿಕೆಯಾಗುತ್ತೆ..! ಎಂದು ಕರ್ನಾಟಕ ಸವಿತಾ ಸಮಾಜದ ಉತ್ತರ ಕರ್ನಾಟಕ ವಿಭಾಗೀಯ ರಾಜ್ಯ ಕಾರ್ಯಧರ್ಶಿಗಳಾದ ಹನಮಂತಪ್ಪ ರಾಂಪೂರ ಹೇಳಿದರು

ಅವರು ಗದಗ ಜಿಲ್ಲಾ ಸವಿತಾ ಸಮಾಜದಿಂದ ಜಿಲ್ಲಾ ಕಾರ್ಯಾಲಯದಲ್ಲಿ ಜಿಲ್ಲಾಧ್ಯಕ್ಷರಾದ ಕೃಷ್ಣಾ ಎಚ್ ಹಡಪದ ಅವರ ಮುಂದಾಳತ್ವದಲ್ಲಿ ಹಮ್ಮಿಕೊಂಡ ಸನ್ಮಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಸವಿತಾ ಸಮಾಜದ ಉತ್ಸಾಹಿ ಯುವಕರು ಹಾಗೂ ಸಮಾಜಕ್ಕೆ ಅತ್ಯಂತ ಕಳಕಳಿಯಿಂದ ಸೇವೆ ಸಲ್ಲಿಸುತ್ತಿರುವ ವಿನಾಯಕ ರಾಯಚೂರ ಅವರಿಗೆ ಸಮಾಜದ ಯುವ ಘಟಕದ ಉಪಾಧ್ಯಕ್ಷರನ್ನಾಗಿ ಆಯ್ಕೆಗೊಂಡ ಅವರಿಗೆ ಸನ್ಮಾನಿಸಿ ಅಭಿನಂದಸಿ ಮಾತನಾಡಿ ಸುಮಾರು 26 ವರ್ಷಗಳಿಂದ ಸವಿತಾ ಸಮಾಜದ ಸೇವೆ ಸಲ್ಲಿಸುತ್ತಿರುವ ಹಾಗೂ ಉತ್ತರ ಕರ್ನಾಟಕ ಭಾಗದ ಗದಗ ನಲ್ಲಿ ಹುಟ್ಟಿ ಬೆಳೆದು ಇಲ್ಲಿನ ಬಡತನ ಹಾಗೂ ಕೆಟ್ಟ ಪರಿಸ್ಥಿತಿ ಬಗ್ಗೆ ಅರಿವು ಇದ್ದು ಈ ಭಾಗದ ಸಮಗ್ರ ಅಭಿವೃದ್ಧಿಯ ಸಂಕಲ್ಪಗಾರ ಮತ್ತು ಕ್ಷೌರ ಕುಟೀರಗಳ ನಿರ್ಮಾಣದ ಕನಸುಗಾರ ಹಾಗೂ ಉತ್ತರ ಕರ್ನಾಟಕ ಭಾಗದ ಸವಿತಾ ಸಮಾಜದ ಏಕೈಕ ಯುವ ಮುಖಂಡರಾದ ಗದಗ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷರಾದ ಕೃಷ್ಣಾ ಎಚ್ ಹಡಪದ ಅವರಿಗೆ ಸವಿತಾ ಸಮಾಜ ಅಭಿವೃದ್ಧಿ ನಿಗಮ ಮಂಡಳಿಯ ಅಧ್ಯಕ್ಷ ಸ್ಥಾನ ನೀಡಬೇಕೆಂದು ಸವಿತಾ ಸಮಾಜ ಅಭಿವೃದ್ಧಿ ನಿಗಮ ಸ್ಥಾಪನೆಯಾದಾಗಿನಿಂದ ಗದಗ-ಬೆಟಗೇರಿ ಹಾಗೂ ಜಿಲ್ಲೆಯ ಎಲ್ಲ ತಾಲ್ಲೂಕು ಮತ್ತು ಉತ್ತರ ಕರ್ನಾಟಕದ ಸಮಸ್ತ ಜಿಲ್ಲೆ ಮತ್ತು ತಾಲ್ಲೂಕು ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಿಂದಲೂ ಸಹ ಹಿರಿಯ ಮಂತ್ರಿಗಳಾದ ಎಚ್ ಕೆ ಪಾಟೀಲ ಅವರ ಆದಿಯಾಗಿ ರಾಜ್ಯದ ಮುಖ್ಯಮಂತ್ರಿಗಳಿಗೆ ಉಪ.ಮುಖ್ಯಮಂತ್ರಿಗಳಿಗೆ ಹಾಗೂ ಕಾಂಗ್ರೆಸ್ ಪಕ್ಷದ ವರೀಷ್ಠರಿಗೆ ಮನವಿ ಸಲ್ಲಿಸಿ ಬೇಡಿಕೊಂಡರೂ ಸಹ ಸವಿತಾ ನಿಗಮ ಅಧ್ಯಕ್ಷ ಸ್ಥಾನ ನೇಮಕ ವಿಚಾರದಲ್ಲಿ ಕೇವಲ ಬೆಂಗಳೂರಿನವರಿಗೇ ಮಾತ್ರ ಮಿಸಲು ಎಂಬಂತೆ ನಾವುಗಳು ಬಹಳ ನಬಿಂದ ಎಲ್ಲ ರಾಜಕೀಯ ನಾಯಕರು ನಡೆದುಕೊಂಡು



ಉತ್ತರ ಕರ್ನಾಟಕ ಭಾಗದ ಕ್ಷೌರಿಕ ನಾಯಕರ ಒಕ್ಕೂರಿನಿಂದ ಸಲ್ಲಿಸಿದ ಮನವಿಗೆ ಸ್ಪಂದಿಸದೆ ಹಿಡಿ ಉತ್ತರ ಕರ್ನಾಟಕಕ್ಕೆ ಮತ್ತು ಗದುಗಿಗೆ ಅನ್ಯಾಯ ಮಾಡಲಾಗಿದೆ. ಎಂದು ಬೇಸರ ವ್ಯಕ್ತ ಪಡಿಸಿ ಮಾತನಾಡಿದರು

ಗದಗ ಸವಿತಾ ಸಮಾಜ ಸುಧಾರಣಾ ಸಂಘದ ಅಧ್ಯಕ್ಷರಾದ ಪರಶುರಾಮ ಕೊಟೇಕಲ್ಲ ಅವರು ಮಾತನಾಡಿ ಉತ್ತರ ಕರ್ನಾಟಕ ಭಾಗಕ್ಕೆ ಮತ್ತು ಗದಗ ಸವಿತಾ ಸಮಾಜಕ್ಕೆ 50 ರಿಂದ 60 ವರ್ಷಗಳಿಂದ ರಾಜಕೀಯದಲ್ಲಿ ನಮ್ಮ ಸಮಾಜದ ನಾಯಕರಿಗೆ ಸಿಕ್ಕಿರುವ ಸ್ಥಾನಮಾನವೇನು ಅಂತಾ ನೋಡಿದ್ರೆ,

ನಿಜಕ್ಕೂ ಬೇಸರವಾಗುತ್ತೆ.. ವೋಟ್ ಹಾಕೋ ವಿಚಾರಕ್ಕೆ ಬಂದರೆ ಎಲ್ಲ ರೀತಿ ಹಾಗೂ ರಂಗಗಳಿಂದ ಹಿಂದುಳಿದ ಉತ್ತರ ಕರ್ನಾಟಕಕ್ಕೆ ಸಂಬಂದಿಸಿದ ಎಲ್ಲಾ ಜಿಲ್ಲೆ ಹಾಗೂ ತಾಲ್ಲೂಕುಗಳಲ್ಲಿ ಸವಿತಾ ಸಮಾಜದ ಲಕ್ಷಾಂತರ ಪುರುಷರು ಹಾಗೂ ಮಹಿಳೆಯರು ಮತ್ತು ಯುವಕರು ಮತದಾರರು ಬೇಕು. ಆದ್ರೆ, ಸವಿತಾ ಸಮಾಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನದ ಅಧಿಕಾರದ ಚುಕ್ಕಾಣಿ ಮಾತ್ರ ಬೆಂಗಳೂರಿನವರಿಗೆ ಮಾತ್ರ..! ಏಕೆ ಹೀಗೆ? ಈ ಭಾಗದ ನಾಯಕರಿಗೆ ಏಕೆ ರಾಜಕೀಯ ಪ್ರಾತಿನಿಧ್ಯ ಸಿಗ್ತಿಲ್ಲ? ಈ ಕುರಿತು ಉತ್ತರ ಕರ್ನಾಟಕದ ಎಲ್ಲಾ ರಾಜಕಾರಣಿಗಳು ಮತ್ತು ಸರಕಾರವು ಅವಲೋಕನ ಮಾಡಿಕೊಳ್ಳುವ ಅಗತ್ಯವಿದೆ ಎಂದು ಹೇಳಿದರು

ಜಿಲ್ಲಾ ಖಜಾಂಚಿಗಳಾದ ಅರೂಣ ರಾಂಪೂರ ಅವರು ಮಾತನಾಡಿ ಚುನಾವಣೆ ಸಂದರ್ಭಗಳಲ್ಲಿ ಉತರ ಕರ್ನಾಟಕದ ಸವಿತಾ ಸಮಾಜದ ಕ್ಷೌರಿಕ ಬಾಂಧವರು ಕೇವಲ ವೋಟ್ ಬ್ಯಾಂಕ್ ಆಗಿರುತ್ತಾರೆ. ಮತ ಹಾಕೋದಕ್ಕಷ್ಟೇ ಅವರು ಬೇಕು, ಅಧಿಕಾರ ಚಲಾಯಿಸೋದಕ್ಕೆ ಬೆಂಗಳೂರಿನವರೇ ಸಾಕು ಎನ್ನುವಂತಾಗಿದೆ. ಎಂದು ಅಸಮಾಧಾನ ವ್ಯಕ್ತ ಪಡಿಸಿ ಮಾತನಾಡಿದರು

**ಸವಿತಾ ಸಮಾಜ ಸಂಘಟನೆ ಕ್ಷೇತ್ರದಲ್ಲಿ 26 ವರ್ಷಗಳ ಅಪಾರ ಅನುಭವ ಹೊಂದಿರುವ ಹಾಗೂ ಗದಗ ಜಿಲ್ಲಾ ಸವಿತಾ ಸಮಾಜವನ್ನು ಸರ್ವರನ್ನು ಒಗ್ಗೂಡಿಸಿಕೊಂಡು ರಾಜ್ಯ ಮಟ್ಟದಲ್ಲಿ ಗುರುತಿಸುವಂತೆ ಬೆಳೆಸಿದ ಸವಿತಾ ಸಮಾಜದ ಗದಗ ಜಿಲ್ಲಾಧ್ಯಕ್ಷರಾದ ಕೃಷ್ಣಾ ಎಚ್ ಹಡಪದ ಅವರಿಗೆ ಹಿರಿಯ ಸಚೀವರಾದ ಎಚ್ ಕೆ ಪಾಟೀಲರು ಹಾಗೂ ಹಿರಿಯರಾದ ಡಿ ಆರ್ ಪಾಟೀಲಜಿ ಅವರ ಆಶೀರ್ವಾದದಿಂದ ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮ ಅಧ್ಯಕ್ಷ ಸ್ಥಾನ ಸಿಗುವ ವಿಸ್ವಸವು ಉಸಿಯಾಗಿದೆ ಆದರೆ ಇನ್ನು ಮುಂದಿನ ದಿನಮಾನಗಳಲ್ಲಾದರು ಯುವ ಕಾಂಗ್ರೇಸ್ ಜಿಲ್ಲಾಧ್ಯಕ್ಷರಾದ ಕೃಷ್ಣಗೌಡ್ರ ಪಾಟೀಲರು ತಮ್ಮ ತಂದೆ ಹಾಗೂ ದೊಡ್ಡಪ್ಪನವರ ಮೂಲಕ ಗದಗ ಕೃಷ್ಣಾ ಎಚ್ ಹಡಪದ ಅವರಿಗೆ ರಾಜಕೀಯ ಉನ್ನತ ಸ್ಥಾನವನ್ನು ಸಿಗುವ ವಿಸ್ವಾಸವಿದೆ**

ಗದಗ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷರಾದ ಕೃಷ್ಣಾ ಎಚ್ ಹಡಪದ ಅವರು ಜಿಲ್ಲಾ ಸವಿತಾ ಸಮಾಜದ ಯುವ ಘಟಕದ ನೂತನ ಉಪಾಧ್ಯಕ್ಷರಿಗೆ ಸಂಘಟನಾತ್ಮಕ ಸಲಹೆ ಸೂಚನೆ ನೀಡಿ ಗೌರವಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು

ಈ ಸಂದರ್ಭದಲ್ಲಿ ಹಿರಿಯರಾದ ಅಥಿತಿಗಳಾಗಿ ಭಾಗವಹಿಸಿದ್ದ ಸಾಮಾಜಿಕ ಕಾರ್ಯಕರ್ತರಾದ ಅಬ್ದುಲಮುನಾಫ ಮುಲ್ಲಾ ಸಮಾಜದ ಹಿರಿಯರಾದ ಬಾಲರಾಜ ಕೊಟೇಕಲ್ಲ. ಪರಶುರಾಮ (ಬಜ್ಜು) ರಾಂಪೂರ. ಜಂಮ್ಮಣ್ಣ ಕಡಮೂರ. ಹೇಮಂತ ವಡ್ಡೆಪಲ್ಲಿ. ಕೀರಣ ರಾಂಪೂರ. ಶ್ರೀನಿವಾಸ ಕೊಟೇಕಲ್ಲ. ಸುರೇಶ ಬುದೂರ ಹಾಗೂ ಸಮಾಜದ ಅನೇಕ ಬಾಂಧವರು ಉಪಸ್ತಿತರಿದ್ದರು

# ಕಾಗದದಿಂದಲೇ ತಯಾರಾಯ್ತು ಮನೆ! ಇದು ಅಗ್ನಿ ಮತ್ತು ಜಲನಿರೋಧಕವಂತೆ!

ಕಾಗದದಿಂದಲೇ ತಯಾರಾಯ್ತು ಮನೆ! ಇದು ಅಗ್ನಿ ಮತ್ತು ಜಲನಿರೋಧಕವಂತೆ! ಜೈಪುರ (ಎಚಿಔಖಿಃಡಿ) ಮೂಲದ ವಾಸ್ತುಶಿಲ್ಪಿಗಳಾದ ಅಭಿಮನ್ಯು ಸಿಂಗ್ ಮತ್ತು ಶಿಲ್ಪಿ ದುವಾ ತಮ್ಮ ?ಹೆಎಕ್ಸ್ಟ್ರಶನ್ಸ್? ಎಂಬ ಉದ್ಯಮದ ಮೂಲಕ ಅಸಾಂಪ್ರದಾಯಿಕ ಕಲ್ಪನೆಯನ್ನು ಮೀರಿ ಇದು ವಾಸ್ತವಕ್ಕೂ ಸರಿಹೊಂದುತ್ತದೆ ಎಂಬ ಟ್ರೆಂಡ್ ಅನ್ನು ಹುಟ್ಟು ಹಾಕಿದ್ದಾರೆ. ಮನೆ ನಿರ್ಮಾಣಕ್ಕೆ ಅವರ ಹೊಸ ವಿಧಾನವು ಮರುಬಳಕೆಯ ಕಾಗದದಿಂದ ತಯಾರಿಸಿದ ಸಂಯೋಜಿತ ಜೇನುಗೂಡು ಸ್ಯಾಂಡ್ವಿಚ್ (ಖಿಚಿಟಿಜತಿಛ್ಖಿ) ಪ್ಯಾನೆಲ್ಗಳನ್ನು ಬಳಸುತ್ತದೆ. ಅದಲ್ಲದೇ ಈ ಸಂಸ್ಥೆ ಕೇವಲ ಎರಡು ವಾರಗಳಲ್ಲಿ ಸುಸ್ಥಿರ ಮನೆಗಳನ್ನು ಕಟ್ಟಿಕೊಡುತ್ತದೆ. ಇನ್ನು ಬೆಲೆ ಎಷ್ಟು ಅಂತೀರಾ? ಕೇವಲ 6–10 ಲಕ್ಷ ರೂ.ಗಳಿಂದ ಪ್ರಾರಂಭವಾಗುತ್ತವೆ. ಈ ಪರಿಸರ ಸ್ನೇಹಿ ಮನೆ ನಿರ್ಮಾಣಕ್ಕೆ ಪ್ಯಾನೆಲ್ಗಳ ತಯಾರಿ ಹೇಗಿರುತ್ತದೆ?

ಈ ವಿಶಿಷ್ಟ ಪ್ಯಾನೆಲ್ಗಳನ್ನು ಗಟ್ಟಿಮುಟ್ಟಾದ ಮರುಬಳಕೆಯ ಕಾಗದದಿಂದ ತಯಾರಿಸಲಾಗುತ್ತದೆ, ಷಡ್ಭುಜಾಕೃತಿಯ ಆಕಾರಗಳಲ್ಲಿ ಮಡಚಿ ಕೋಶಗಳಂತೆ ಜೋಡಿಸಲಾಗುತ್ತದೆ.

ಈ ಕೋಶಗಳನ್ನು ಪ್ಲೈವುಡ್ ಅಥವಾ ಸಿಮೆಂಟ್ ಫೈಬರ್ ಬೋರ್ಡ್ಗಳಿಂದ ಮಾಡಿದ ಎರಡು ಪ್ಯಾನೆಲ್ಗಳ ನಡುವೆ ಜೋಡಿಸಲಾಗುತ್ತದೆ. ಪ್ಯಾನೆಲ್ಗಳ ಅಂಚುಗಳಲ್ಲಿರುವ ಕಲಾಯಿ ಕಬ್ಬಿಣದ ಚಾನಲ್ಗಳು ಅವುಗಳ ಆಕಾರವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ, ಆದರೆ ಕಬ್ಬಿಣದ ಟೊಳ್ಳಾದ ಕೊಳವೆಗಳು ಹೆಚ್ಚುವರಿ ರಚನಾತ್ಮಕ ಬೆಂಬಲವನ್ನು ಒದಗಿಸುತ್ತವೆ. ಇದರ ಫಲಿತಾಂಶವು ಅಗ್ನಿ ನಿರೋಧಕ, ಧ್ವನಿ ನಿರೋಧಕ ಮತ್ತು ಜಲ ನಿರೋಧಕವಾದ ಬಲವಾದ, ಹಗುರವಾದ ಕಟ್ಟಡ ಸಾಮಗ್ರಿಯಾಗಿದೆ.




### ಈ ಮನೆಗಳ ವಿಶೇಷತೆ ಏನು? ಇವು ಪರಿಸರ ಸ್ನೇಹಿಯೇ?

**ಈ ಮನೆಗಳ ಹಗುರವಾದ ಸ್ವಭಾವವು ಅವುಗಳನ್ನು ಎಲ್ಲಿಗೆ ಬೇಕಾದರೂ ಸುಲಭವಾಗಿ ಸಾಗಿಸುವಂತೆ ಮಾಡುತ್ತದೆ ಮತ್ತು ತರಬೇತಿ ಪಡೆದ ವೃತ್ತಿಪರರನ್ನು ರಚನೆಗಳನ್ನು ಸ್ಥಳದಲ್ಲೇ ಜೋಡಿಸಲು ಕಳುಹಿಸಲಾಗುತ್ತದೆ.**

**ಸಾಂಪ್ರದಾಯಿಕ ಕಟ್ಟಡಗಳಿಗೆ ಹೋಲಿಸಿದರೆ 80% ರಷ್ಟು ಕಡಿಮೆ ಪರಿಸರ ಪ್ರಭಾವದೊಂದಿಗೆ, ಈ ಮನೆಗಳು ಕೈಗೆಟುಕುವವು ಮಾತ್ರವಲ್ಲದೆ ಗಮನಾರ್ಹವಾಗಿ ಹೆಚ್ಚು ಪರಿಸರ ಸ್ನೇಹಿಯೂ ಆಗಿವೆ. ಮುಂದಿನ 5 ವರ್ಷಗಳಲ್ಲಿ**

**ಹೆಕ್ಸ್ಟ್ರಶನ್ಸ್ ಸಂಸ್ಥೆಯ ಗುರಿಯೇನು**

**ಈ ಕಂಪನಿಯು ಈಗಾಗಲೇ ಆಸ್ಪತ್ರೆಗಳು ಮತ್ತು ಸಂಸ್ಥೆಗಳು ಸೇರಿದಂತೆ 50 ಮನೆಗಳನ್ನು ನಿರ್ಮಿಸಿದೆ. ಈಗ, ದಂಪತಿಗಳು ಮುಂದಿನ ಐದು ವರ್ಷಗಳಲ್ಲಿ ಭಾರತದಾದ್ಯಂತ 500 ಹಸಿರು ಮನೆಗಳನ್ನು ನಿರ್ಮಿಸುವ ಗುರಿಯನ್ನು ಹೊಂದಿದ್ದಾರೆ.ಶಿಲ್ಪಿ ಅವರು ಒಂದು ಚದರ ಅಡಿ 100 ಕೆಜಿ ವರೆಗೆ ಭಾರವನ್ನು ಹಿಡಿದಿಟ್ಟುಕೊಳ್ಳುತ್ತದೆ.? ಎಂದು ವಿವರಿಸುತ್ತಾರೆ.**

ಈ ಸುಸ್ಥಿರ ಮನೆಗಳ ಬಗ್ಗೆ ಹೆಎಕ್ಸ್ಟ್ರಶನ್ಸ್‌ಸಂಸ್ಥೆಯ ಸ್ಥಾಪಕಿ ಏನ್ ಹೇಳ್ತಾರೆ ಕೇಳಿ

ತ್ರಿಕೋನವು ತನ್ನ ಆಕಾರವನ್ನು ಹಿಡಿದಿಟ್ಟುಕೊಳ್ಳುವುದರಿಂದ ನಿರ್ಮಾಣದಲ್ಲಿ ಅತ್ಯಂತ ಬಲವಾದ ಆಕಾರ ಇದಾಗಿದೆ. ಒಂದು ಷಡ್ಭುಜಾಕೃತಿಯು ಆರು ತ್ರಿಕೋನಗಳಿಂದ ಮಾಡಲ್ಪಟ್ಟಿದೆ, ಆದ್ದರಿಂದ ಇದು ತುಂಬಾ ದೃಢವಾಗಿರುತ್ತದೆ.

ಈ ತಂತ್ರವನ್ನು ವಾಣಿಜ್ಯ ವಿಮಾನಗಳಲ್ಲಿ ಬಳಸುತ್ತಾರೆ. ಅಲ್ಲಿ ಅಲ್ಯೂಮಿನಿಯಂ ಪೇಪರ್ಗಳನ್ನು ,ಅವುಗಳ ಹಗುರವಾದ ಆದರೆ ಬಾಳಿಕೆ ಬರುವ ರಚನೆಗಾಗಿ ಬಳಸಲಾಗುತ್ತದೆ? ಎಂದು ತಮ್ಮ ಮನೆ ನಿರ್ಮಾಣದ ಶೈಲಿ ಏಕೆ ಸ್ಟ್ರಾಂಗ್ ಎಂದು ಶಿಲ್ಪಿ ವಿವರಿಸುತ್ತಾರೆ.

### ಹೆಕ್ಸ್ಟ್ರಶನ್ಸ್ ಮನೆಗಳನ್ನು ಹೆಚ್ಚು ವೇಗವಾಗಿ ನಿರ್ಮಿಸಬಹುದು, ಏಕೆ?

**ಹೆಕ್ಸ್ಟ್ರಶನ್ಸ್ ಮನೆಗಳನ್ನು ನಿರ್ಮಿಸಲು ಬಳಸುವ ಪ್ಯಾನೆಲ್ಗಳನ್ನು ಸ್ಥಳೀಯವಾಗಿ ತಯಾರಿಸಲಾಗುತ್ತದೆ. ಇದರರ್ಥ ಅವುಗಳನ್ನು ತ್ವರಿತವಾಗಿ ಜೋಡಿಸಬಹುದು. ಇವುಗಳು ಆಘಾತ–ಹೀರಿಕೊಳ್ಳುವ ಗುಣವನ್ನು ಹೊಂದಿವೆ. ಇದು ಅವುಗಳನ್ನು ಸುರಕ್ಷಿತವಾಗಿಸುತ್ತದೆ. ವಸ್ತುವು ಹಗುರವಾಗಿರುವುದರಿಂದ, ಮನೆಗಳನ್ನು ಸಾಂಪ್ರದಾಯಿಕ ಮನೆಗಳಿಗಿಂತ ಹೆಚ್ಚು ವೇಗವಾಗಿ ನಿರ್ಮಿಸಬಹುದು. ಹೆಕ್ಸ್ಟ್ರಶನ್ಸ್ ಮನೆಗಳು 190 ಚದರ ಅಡಿಗಳಿಂದ 400 ಚದರ ಅಡಿಗಳವರೆಗೆ ವಿಭಿನ್ನ ಗಾತ್ರಗಳಲ್ಲಿ ಬರುತ್ತವೆ.**

**ಈ ಮನೆಗಳು ಬಾಳಿಕೆ ಬರುವುದಿಲ್ಲ ಎಂದು ಕೆಲವರು ಚಿಂತಿಸಬಹುದು, ಆದರೆ ಶಿಲ್ಪಿ ಅವರು ಶೆಲ್ಗಳ ನಡುವೆ ಆಮ್ಲಜನಕವಿಲ್ಲ, ಇದು ಕಾಗದವನ್ನು ಬೆಂಕಿ ಹಿಡಿಯುವುದನ್ನು ತಡೆಯುತ್ತದೆ. ಇದಲ್ಲದೆ, ಪ್ಯಾನೆಲ್ಗಳನ್ನು ಸಸ್ಯ ಆಧಾರಿತ, ನೀರು–ನಿರೋಧಕ ರಾಳದಲ್ಲಿ ಅದ್ದಿ ಮತ್ತು ಅವುಗಳ ಷಡ್ಭುಜೀಯ ಶೆಲ್ಗಳನ್ನು ಬೆಂಕಿ ನಿರೋಧಕತೆಯನ್ನು ಖಚಿತಪಡಿಸಿಕೊಳ್ಳಲು ಬೂದಿಯಿಂದ ತುಂಬಿಸಲಾಗುತ್ತದೆ.**

# ಮನುಕುಲದ ಚ್ಯಾರಿತ್ರವನ್ನು ಶ್ರೀಮಂತಗೊಳಿಸಿದ ವಚನ ಸಾಹಿತ್ಯ



**ದಾವಣಗೆರೆ:** ಜಗತ್ತಿನ ಇತಿಹಾಸದಲ್ಲಿ ಮನುಕುಲದ ವ್ಯಕ್ತಿತ್ವಕ್ಕೆ ಮಹತ್ವ ನೀಡಿ ಮನುಕುಲದ ಚ್ಯಾರಿತ್ರವನ್ನುಶ್ರೀಮಂತಗೊಳಿಸಿ ಸಮ ಸಮಾಜವನ್ನು ನಿರ್ಮಾಣ ಮಾಡಿದ ಏಕೈಕ ಸಾಹಿತ್ಯ ವಚನ ಸಾಹಿತ್ಯ

ವೆಂದು ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಪ್ರದಾನ ಕಾರ್ಯದರ್ಶಿಗಳಾದ ಭರಮಪ್ಪ ಮೈಸೂರು

ಅಭಿಪ್ರಾಯ ಪಟ್ಟರು.ನಗರದ ಜೆ.ಹೆಚ್. ಪಟೇಲ್ ಕಾಲೇಜಿನಲ್ಲಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತುಹಮ್ಮಿಕೊಂಡಿದ್ದ ಲಿಂ.ಶರಣೆ ಬಸಮ್ಮ ಮತ್ತು ಬುಳ್ಳಾಪುರದ ಸಿದ್ದಪ್ಪ ದತ್ತಿ ಮತ್ತು ಶರಣ ಚಿಂತನಗೋಷ್ಠಿ ಕಾರ್ಯಕ್ರಮದಲ್ಲಿ ವಚನ ಸಾಹಿತ್ಯ ಮತ್ತು ವ್ಯಕ್ತಿತ್ವ ವಿಕಸನ ಎಂಬ ವಿಷಯ ಕುರಿತುಉಪನ್ಯಾಸ ನೀಡಿದರು.

12ನೇ ಶತಮಾನದಲ್ಲಿ ಜನಸಾಮನ್ಯರು ಕರ್ಮಸಿದ್ದಾಂತದ ಫಲವಾಗಿ ಗುಲಾಮಿವ್ಯಕ್ತಿತ್ವವನ್ನು ರೂಡಿಸಿಕೊಂಡು ದಮನೀಯ ಬದುಕನ್ನು ಸಾಗಿಸುತ್ತಿದ್ದರು. ಬಸವಾದಿ ಶರಣರು ತಮ್ಮಅಮೂಲ್ಯವಾದ ವಚನಗಳ ಮೂಲಕ ಎಲ್ಲಾ ವರ್ಗದ ಜನರನ್ನು ಕರ್ಮಸಿದ್ದಾಂತದಿಂದಮುಕ್ತಗೊಳಿಸಿ ಕಾಯಕ ಸಿದ್ದಾಂತದ ಮೂಲಕ ಸ್ವಾವಲಂಬಿ ವ್ಯಕಿತ್ವವನ್ನು ರೂಪಿಸುವ ಮೂಲಕ ಶಾಂತಿಯುತ ಸಮ ಸಮಾಜವನ್ನು ನಿರ್ಮಿಸಿದರು ಎಂದು ಅಭಿಪ್ರಾಯ ಪಟ್ಟರು.

ಕಾರ್ಯಕ್ರಮದ ಉದ್ಘಾಟನೆಯನ್ನು ಕಾಲೇಜಿನ ಪ್ರಾಂಶಪಾಲರಾದ ಜ್ಯೋತಿ.ಎ.ನೆರವೇರಿಸಿದರು. ಕಾರ್ಯಕ್ರಮದ ಆಧ್ಯಕ್ಷತೆಯನ್ನು ವಹಿಸಿದ್ದ ಕೆ.ಬಿ.ಪರಮೇಶ್ವರಪ್ಪ ಜಿಲ್ಲಾ ಶರಣಸಾಹಿತ್ಯ ಪರಿಷತ್ತು 12 ನೇ ಶತಮಾನದ ಶರಣರ ಮೌಲ್ಯಗಳನ್ನು ಜನಮಾನಸದಲ್ಲಿ

ಹಲವಾರುಕಾರ್ಯಕ್ರಮಗಳ ಮೂಲಕ ಹರಡುವ ಕಾರ್ಯವನ್ನು ನಿರಂತರವಾಗಿ ಮಾಡುತ್ತಾ ಬರುತ್ತಿದೆ ಎಂದುತಿಳಿಸಿದರು. ಜಿಲ್ಲಾ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷರಾದ ಮಮತಾ ನಾಗರಾಜ ವಿಜೇತವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಮಾಡಿದರು.

ಕಾರ್ಯಕ್ರಮದಲ್ಲಿ ಪರಮೇಶ್ವರಪ್ಪ. ಎಂ. ಸಿರಿಗೆರೆ, ಬುಳ್ಳಾಪುರದ ಮಲ್ಲಿಕಾರ್ಜುನಸ್ವಾಮಿ, ಪುಷ್ಪ ಮಲ್ಲಿಕಾರ್ಜುನಸ್ವಾಮಿ, ನಿರ್ಮಲ ಶಿವಕುಮಾರ್, ಆರ್.ಸಿದ್ದೇಶಪ್ಪ, ಜಿ.ಎಂ.ಕುಮಾರಪ್ಪ, ಬಿ.ಟಿ.ಪ್ರಕಾಶ್, ವಿನೋದ ಅಜಗಣ್ಣನವರ್, ಎನ್.ಟಿ. ಸಣ್ಣಮಂಜುನಾಥ, ಮುಸ್ತಾಫ್, ಕರಿಬಸಪ್ಪ ಮುಂತಾದವರು ಭಾಗವಹಿಸಿದ್ದರು. ಚೇತನ. ಹೆಚ್. ಸರ್ವರನ್ನು ಸ್ವಾಗಿಸಿದರು, ದೀಪಾ ಚಿನ್ನಿಕಟ್ಟೆ ವಂದಿಸಿದರು. ಶೈಲಾ.ಎನ್.ಶೆಟ್ಟಿ ಕಾರ್ಯಕ್ರಮ ನಿರೂಪಿಸಿದರು.

# ನುಗ್ಗೆ ಬೇಸಾಯ ಮಾಡಿದರೆ ನುಗ್ಗಿ ಬರುತ್ತದೆ ಲಾಭ

## ನುಗ್ಗೆ ಒಂದು ಕಡಿಮೆ ಖರ್ಚಿನ ಅಧಿಕ ಲಾಭದಾಯಾಕ ಬೆಳೆ.

### ಭಾಗ್ಯ ತಳಿಯ ವಿಶೇಷ ಮಾಹಿತಿ:

1. ಲಭ್ಯವಿರುವ ತಳಿಗಳಲ್ಲಿ ಉತ್ಕೃಷ್ಟ ತಳಿ
2. ಪರ್ಯಾಯ ಹೆಸರು ಏಆಛ– 01
3. ಬಾಗಲಕೋಟೆ ತೋಟಗಾರಿಕೆ ವಿವಿ ಇಂದ ಅಭಿವೃದ್ಧಿ ಪಡಿಸಿರುವ ತಳಿ
4. ಎತ್ತರ 2.5 ಮೀಟರ್ ಇಂದ 4 ಮೀಟರ್ ಬೆಳೆಯುವ ತಳಿ
5. 2.5 ಇಂದ 3 ತಿಂಗಳ ವರೆಗೂ ಸತತವಾಗಿ ಹೂ ಬಿಟ್ಟು ಕಾಯಿ ಕೊಡುವ ತಳಿ
6. ಒಂದು ಗಿಡಕ್ಕೆ 350 ರಿಂದ 400 ಕ್ಕೂ ಹೆಚ್ಚು ಕಾಯಿ ಬಿಡುವ ತಳಿ
7. ಕಾಯಿಯ ಉದ್ದ 1.5 ಇಂದ 2 ಅಡಿ
8. ಕಾಯಿಯ ತೂಕ 150 ರಿಂದ 160 ಗ್ರಾಂ ನಷ್ಟು ಇರುತ್ತದೆ
9. ಹೆಚ್ಚು ಪ್ರೊಟೀನ್ ಹಾಗೂ ನಾರಿನ ಅಂಶ ಹೊಂದಿರುವ ತಳಿ
10. ಎಕರೆಗೆ ಅಂದಾಜು ಕರ್ಚು (ಕೂಯ್ಲು ಹಾಗೂ ಸಾಗಾಣಿಕೆ ವೆಚ್ಚ ಸೇರಿ) 55 ರಿಂದ 60 ಸಾವಿರ
11. ನಿಶ್ಚಿಳ ಲಾಭ 1 ಇಂದ 1.2 ಲಕ್ಷ
12. ಬಿತ್ತನೆ ಬೀಜದ ಇಳುವರಿ ಸುಮಾರು 80 ಕೆಜಿ
13. ಪ್ರತಿ ಕೆಜಿ ಗೆ ಅಂದಾಜು 1.5 ಇಂದ 2 ಸಾವಿರ
14 ಅತೀ ಕಡಿಮೆ ಅವಧಿಯಲ್ಲಿ ಕಾಯಿ ಬಿಡುವ ತಳಿ
15. ಬಿತ್ತನೆ ಮಾಡಿದ 120 ರಿಂದ 130 ದಿವಾಸದೊಳಗೆ ಕಾಯಿ ಬಿಡಲು ಪ್ರಾರಂಭಿಸಿ ಮುಂದಿನ 45–50 ದಿವಸಗಳ ವರೆಗೂ ಕಾಯಿ ಬಿಡುತ್ತದೆ
16. ಪ್ರತಿ ಗಿಡಕ್ಕೆ 35 ರಿಂದ 40 ಕೆಜಿ ಇಳುವರಿ ಪಡೆಯಬಹುದು
17. ಪ್ರತಿ ಕಾಯಿಯಲ್ಲಿ 15–20 ಬೀಜಗಳು ಇರುತ್ತವೆ
18. ನಾಟಿ ಮಾಡಿದ ಮೇಲೆ 1 ಅಡಿ ಎತ್ತರ ಬೆಳೆದ ಮೇಲೆ ಮುಡಿ ಚಿವುಟಬೇಕು 2–3 ಬಾರಿ ಮುಡಿ ಚಿವುಟುವುದರಿಂದ ಹೆಚ್ಚು ಇಳುವರಿ ಪಡೆಯಬಹುದು
19. ವಣ ಬೇಸಾಯವಾದಲ್ಲಿ ಜೂನ್ ಜುಲೈ ತಿಂಗಳು ನಾಟಿ ಮಾಡಲು ಸೂಕ್ತವಾದ ಸಮಯ
20. ನೀರಾವರಿ ಪ್ರದೇಶವಾದಲ್ಲಿ ವರ್ಷದ ಯಾವುದೇ ತಿಂಗಳಲ್ಲಿ ಬೇಕಾದರೂ ನಾಟಿ ಮಾಡಬಹುದು.



## ನುಗ್ಗೆ ಬೆಳೆಯ ಬೇಸಾಯ ಮಾಹಿತಿ

ನುಗ್ಗೆ ಬೆಳೆಯುವುದು ತೀರ ಕಷ್ಟದ ಕೆಲಸವಲ್ಲ. ಆದರೆ ನಿರ್ವಹಣೆ ಮಾತ್ರ ಅಚ್ಚುಕಟ್ಟಾಗಿರಬೇಕು. ರಾಸಾಯನಿಕ ಬಳಸಿ ನುಗ್ಗೆ ಬೆಳೆಯುತ್ತೇನೆ ಅಂದರೆ ಪ್ರಯೋಜನವಿಲ್ಲ. ಸಾವಯವ ಪದ್ಧತಿಯಲ್ಲಿ ಬೆಳೆದು ನೋಡಿ, ಬಂಪರ್ ಇಳುವರಿ ಗ್ಯಾರಂಟಿ. ಅಂದಹಾಗೇ, ನುಗ್ಗೆ ಬೆಳೆಯುವುದು ಹೇಗೆ ಅಂತ ತಲೆ ಕೆಡಿಸಿಕೊಳ್ಳಬೇಡಿ.

ನುಗ್ಗೆ ಬೆಳೆಯ ಬೇಕೆಂದಿರುವ ಕೃಷಿಕರೇ ಕೆಲ ಸತ್ಯ ತಿಳಿದುಕೊಳ್ಳಿ.

ರಾಸಾಯನಿಕ ಬಳಸಿ ನುಗ್ಗೆ ಕೃಷಿ ಮಾಡಲು ಆಗದು. ಚೆನ್ನಾಗಿ ಬೆಳೆ ಬರಬೇಕು, ಲಾಭ ಮಾಡಬೇಕು ಅಂದರೆ ಮೊದಲು ನುಗ್ಗೆಗೆ ಯಥೇಚ್ಚವಾಗಿ ಪೋಷಕಾಂಶಗಳು ದೊರೆಯುವಂತೆ ಮಾಡಬೇಕು.

ನುಗ್ಗೆ ತೀರ ದೊಡ್ಡ ಗಿಡವಾಗುವ ಬೆಳೆ ಅಲ್ಲ, ಆರೇಳು ಅಡಿ ಎತ್ತರಕ್ಕೆ ಪೊದೆಯಾಕಾರದಲ್ಲಿ ಬೆಳೆಸಬೇಕು, ಹೀಗಾಗಿ ಜಾಸ್ತಿ ಅಂತರ ಇಟ್ಟು ಬೆಳೆಯುವ ಅವಶ್ಯಕತೆ ಇಲ್ಲ. ಸಾಲಿನಿಂದ ಸಾಲಿಗೆ ಏಳು ಅಡಿ, ಗಿಡದಿಂದ ಗಿಡಕ್ಕೆ ಆರು ಅಡಿ ಸಾಕು. ಹೀಗೆ ನಿಮ್ಮ ಜಮೀನಿನಲ್ಲಿ ಅಳತೆ ಪ್ರಕಾರ ಗುರುತು ಮಾಡಿಕೊಂಡು ಒಂದೂವರೆ ಅಡಿ ಆಳ–ಅಗಲದ ಗುಂಡಿ ತೆಗೆಸಬೇಕು. ಗುಂಡಿಯಿಂದ ತೆಗೆದ ಮಣ್ಣು ಹಾಗೂ ಅಷ್ಟೇ ಪ್ರಮಾಣದ ಒಳ್ಳೆಯ ಕೊಟ್ಟಿಗೆ ಗೊಬ್ಬರ ಬೆರೆಸಿ ಅದೇ ಗುಂಡಿಗೆ ತುಂಬಬೇಕು. ಹೀಗೆ ರೆಡಿಯಾದ ಗುಂಡಿಯಲ್ಲಿ ಸದೃಢವಾದ ಸಸಿ ನೆಡಬೇಕು.

ನಿಮಗೆ ಗೊತ್ತೇ ಇರುವಂತೆ, ನುಗ್ಗೆಗಿಡಗಳು ಸಾರಜನಕ ಸ್ಥಿರೀಕರಣ ಮಾಡುವ ಸಾಮರ್ಥ್ಯ ಹೊಂದಿವೆ. ಇದಕ್ಕೆ ನೀವು ಒಂದೇ ಒಂದು ಕಾಳು ಯೂರಿಯಾ ಗೊಬ್ಬರ ಕೊಡುವುದು ಬೇಡ. ಪ್ರತಿ ಎರಡು ತಿಂಗಳಿಗೊಮ್ಮೆ ಬುಡದ ಸುತ್ತ ಪಾತಿ ಮಾಡಿ ನಾಲ್ಕೈದು ಬೊಗಸೆ ಎರೆಹುಳು ಗೊಬ್ಬರ ಕೊಟ್ಟರೆ ಸಾಕು. ಜೊತೆಗೆ ಜೀವಾಮೃತ ತಯಾರಿಸಿಕೊಂಡು ಪ್ರತಿ ಇಪ್ಪತ್ತು ದಿನಕ್ಕೊಮ್ಮೆ ಕಡ್ಡಾಯವಾಗಿ ಸಿಂಪಡಿಸಬೇಕು ಹಾಗೂ ಗಿಡಗಳ ಬುಡದಲ್ಲಿ ಹಾಕಬೇಕು. ಇಷ್ಟಾದರೆ ಸಾಕು, ಮತ್ಯಾವುದೇ ಮೇಲುಗೊಬ್ಬರದ ಅವಶ್ಯಕತೆ ಇಲ್ಲ.

### ಇಳುವರಿ ಹೀಗಿದ್ದರೇನೇ ಲಾಭ

* ಒಂದು ಕಾಯಿ 60–70 ಸೆಂ.ಮೀ. (ಎರಡು ಅಡಿ) ಉದ್ದ ಇರಬೇಕು
* ಒಂದು ಕಾಯಿ 100–120 ಗ್ರಾಂ. ತೂಕ ಇರಬೇಕು
* ಒಂದು ಗಿಡ ಒಂದು ವರ್ಷಕ್ಕೆ ಕಮ್ಮಿಯೆಂದರೂ 250–300 ಕಾಯಿ ಬಿಡಬೇಕು.ಸಸಿ ನಾಟಿ ಮಾಡಿದಾಗ ಯಾವುದೇ ರಾಸಾಯನಿಕ ಗೊಬ್ಬರ ಹಾಕಬೇಡಿ, ನಾಟಿಯಾದ ಮೂರು ತಿಂಗಳ ನಂತರ ಒಂದು ಎಕರೆಗೆ, 25 ಕೆ.ಜಿ ಡಿಎಪಿ, 10 ಕೆ.ಜಿ ಯೂರಿಯಾ, 7 ಕೆ.ಜಿ ಪೊಟ್ಯಾಷ್ ಗೊಬ್ಬರದ ಜೊತೆ ಸೇರಿಸಿ, ಗಿಡದ ಸುತ್ತ ರಿಂಗ್ ಮಾಡಿ ಹಾಕಿ. ನಂತರ ಮತ್ತೆ ಮೂರು ತಿಂಗಳು ಬಿಟ್ಟು ಇಷ್ಟೇ ಪ್ರಮಾಣದ ಗೊಬ್ಬರವನ್ನು ಹೀಗೇ ಕೊಡಿ.

ಇನ್ನು ಹಾಗೇ ಬಿಟ್ಟರೆ ನುಗ್ಗೆ 6–7 ಮೀಟರ್ ಎತ್ತರಕ್ಕೆ ಬೆಳೆದು ನಿಲ್ಲುತ್ತದೆ. ಹೀಗೆ ಎತ್ತರ ಬೆಳೆದರೆ ಕಾಯಿ ಕೀಳುವುದು ಕಷ್ಟ ಜೊತೆಗೆ ಇಳುವರಿಯಲ್ಲೂ ಗಣನೀಯವಾಗಿ ಕಡಿಮೆಯಾಗುತ್ತದೆ. ಸಾಧ್ಯವಾದಷ್ಟು ಗಿಡಗಳು ಗಿಡ್ಡಗೆ ಪೊದೆಯಾಕಾರವಾಗಿ ಬೆಳೆಯುವಂತೆ ನೋಡಿಕೊಳ್ಳಬೇಕು. ಒಂದು, ಒಂದೂವರೆ ಮೀಟರ್ ಬೆಳೆದಾಕ್ಷಣ ಕುಡಿ ಚಿವುಟಿ ಎತ್ತರ ಬೆಳೆಯದಂತೆ ಮಾಡಬೇಕು. ಇದರಿಂದ ಹೆಚ್ಚು ಕವಲುಗಳು ಬಂದು ಗಿಡ ಪೊದೆಯಂತಾಗಿ ಹೆಚ್ಚಿನ ಕಾಯಿ ಬಿಡುತ್ತವೆ. ನೀರಿನ ನಿರ್ವಹಣೆಯೂ ಅಷ್ಟೇ ಮುಖ್ಯ, ಪ್ರತಿ ಐದಾರು ದಿನಕ್ಕೊಮ್ಮೆ ತಪ್ಪದೇ ನೀರುಣಿಸಿ. ಆಮೇಲೆ ನುಗ್ಗೆದು ಜೊತೆಗೇ ನುಗ್ಗಿ ಬರುತ್ತದೆ ಲಾಭ.

# ದಂಪತಿ, ಕಾರು ಚಾಲಕನ ಅಪಹರಿಸಿ 1 ಕೋಟಿ ನಗದು ದೋಚಿದ್ದ 8 ಆರೋಪಿಗಳ ಬಂಧನ

**ಬೆಂಗಳೂರು:** ದಂಪತಿ ಹಾಗೂ ಕಾರು ಚಾಲಕನನ್ನು ಸಿನಿಮೀಯ ರೀತಿಯಲ್ಲಿ ಅಪಹರಿಸಿ ಹಲ್ಲೆ ಮಾಡಿ 1.1 ಕೋಟಿ ನಗದನ್ನು ದೋಚಿದ್ದ 8 ಮಂದಿ ಆರೋಪಿಗಳನ್ನು ಕ್ಷಿಪ್ರ ಕಾರ್ಯಾಚರಣೆ ನಡೆಸಿ ಹುಳಿಮಾವು ಠಾಣೆ ಪೊಲೀಸರು ಬಂಧಿಸಿದ್ದಾರೆ.ನಿನ್ನೆ ಸಂಜೆ ಆರ್‌ಆರ್‌ನಗರದ ಅಡಿಕೆ ವ್ಯಾಪಾರಿ ಮೋಹನ್ ಅವರು ತಮ ಕಾರು ಚಾಲಕ ಹೇಮಂತ್ ಅವರಿಗೆ ಎಲೆಕ್ಟ್ರಾನಿಕ್‌ಸಿಟಿಗೆ ಹೋಗಿ ಹಣ ತರುವಂತೆ ತಿಳಿಸಿದ್ದಾರೆ. ಅದರಂತೆ ಹೇಮಂತ್ ಅವರು ಸಂಜೆ 6 ಗಂಟೆ ಸಂದರ್ಭದಲ್ಲಿ ಹುಳಿಮಾವು ಠಾಣಾ ವ್ಯಾಪ್ತಿಯ ಅಕ್ಷಯನಗರದ ಅಕ್ಷಯ ಪಾರ್ಕ್ ಬಳಿ ತೆರಳಿ ಮಾಲೀಕರು ನೀಡಿದ್ದ ಮೊಬೈಲ್ ನಂಬರಿಗೆ ಕರೆ ಮಾಡಿದ್ದಾರೆ.

ನಂತರ ಕರೆ ಸ್ವಿಕರಿಸಿದ ರಿಯಲ್ ಎಸ್ಟೇಟ್ ಉದ್ಯಮಿ ಮೋಟರಾಮ್ ಅವರು ತಮ ಪತ್ನಿಯೊಂದಿಗೆ ಕಾರಿನಲ್ಲಿ ಅಲ್ಲಿಗೆ ಹೋಗಿದ್ದಾರೆ. ನಂತರ ಅವರೊಂದಿಗೆ ಸಂಭಾಷಣೆ ನಡೆಸಿ ಕಾರಿನ ಹಿಂಬದಿಯಲ್ಲಿ ಹಣ ಇರುವುದಾಗಿ ತಿಳಿಸಿದ್ದಾರೆ. ಈ ವೇಳೆ ಇಬ್ಬರು ಆರೋಪಿಗಳು ಏಕಾಏಕಿ ಕಾರಿನ ಬಳಿ ಬಂದು ನಿಮನ್ನು ತಪಾಸಣೆ ಮಾಡಬೇಕು. ಕೆಳಗೆ ಇಳಿಯಿರಿ ವಿಡಿಯೋ ಮಾಡುತ್ತೆವೆ ಎಂದು ಹೇಳಿದ್ದಾರೆ. ಒಬ್ಬ ಮೊಬೈಲ್‌ನಿಂದ ಕಾರನ್ನು ಚಿತ್ರೀಕರಿಸಿದರು. ನಂತರ ದಂಪತಿ ಅವರನ್ನು ಪ್ರಶ್ನಿಸಿದಾಗ ಅವರ ಮೇಲೆ ಹಲ್ಲೆ ನಡೆಸಿದ್ದಾರೆ.ಎಚ್ಚೆತ್ತ ದಂಪತಿ ಕಾರಿನ ಬಾಗಿಲನ್ನು ಲಾಕ್ ಮಾಡಿ ಅಲ್ಲಿಂದ ತಪ್ಪಿಸಿಕೊಂಡು ಹೋಗುವಾಗ ಬೈಕ್‌ನಲ್ಲಿ ಹಿಂಬಾಲಿಸಿದ ಆರೋಪಿಗಳು ಕಾರಿಗೆ ಗುದ್ದಿದ್ದಾರೆ. ನಂತರ ನಿರ್ಜನ ಪ್ರದೇಶಕ್ಕೆ ಬಲವಂತವಾಗಿ ಕಾರನ್ನು ಸಾಗಿಸಿ ನಿಲ್ಲಿಸಿದ್ದಾರೆ.

# ಮರಾಠ ಸಮುದಾಯದ ಅಭಿವೃದ್ಧಿ ನಿಗಮದ ಅಧ್ಯಕ್ಷರು ಇಂದು ಹರಿಹರಕ್ಕೆ

**ಹರಿಹರ:** ಕರ್ನಾಟಕ ಮರಾಠ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ನೇಮಕವಾಗಿ ಸೆ.30 ರಂದು ನಗರಕ್ಕೆ ಆಗಮಿಸುತ್ತಿರುವ ಮರಿಯೋಜಿರಾವ್ ಅವರಿಗೆ ಅದ್ದೂರಿ ಸ್ವಾಗತ ನೀಡಲಾಗುವುದು ಎಂದು ಹಿಂದುಳಿದ ವರ್ಗಗಳ ಸಮಾನ ಮನಸ್ಕರ ವೇದಿಕೆ ಕಾರ್ಯದರ್ಶಿ ವೈ, ಕೃಷ್ಣಮೂರ್ತಿ ಹೇಳಿದರು. ನಗರದ ಪಕ್ಕೀರಸ್ವಾಮಿ ಮಠದ ಬಳಿ ಸ್ವಾಗತಿಸಿ ಅಲ್ಲಿಂದ ಮರಾಠ ಗಲ್ಲಿಯ ಅವರ ನಿವಾಸದವರೆಗೂ ಮೆರವಣಿಗೆ ಮೂಲಕ ಕರೆತರಲಾಗುವುದು ಎಂದು ಭಾನುವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಕಾಂಗ್ರೆಸ್ ಪಕ್ಷದಲ್ಲಿನ ನಿಸ್ವಾರ್ಥ ಸೇವೆ ಗುರುತಿಸಿ ಅವರನ್ನು ಮರಾಠ ಸಮುದಾಯದ ಅಭಿವೃದ್ಧಿ ನಿಗಮದ ಅಧ್ಯಕ್ಷರನ್ನಾಗಿ ನೇಮಕ ಮಾಡಿದೆ ಎಂದರು. ಸಮಾನ ಮನಸ್ಕರ ವೇದಿಕೆಯ ಗೌರವಾಧ್ಯಕ್ಷ ಎಚ್.ಕೆ. ಕೊಟ್ರಪ್ಪ, ಉಪಾಧ್ಯಕ್ಷ ಪ್ರಕಾಶ್ ಕೋಳೂರು, ಚಿಕ್ಕಬಿದರಿ ಬಸವರಾಜಪ್ಪ, ಎಂ.ಎಚ್.ಭೀಮಪ್ಪ, ಅಂಜನೇಯ, ಹರೀಶ್ ಸಾವಂತ್, ಗಂಗಾಧರ್, ಬಸವರಾಜ್, ಸುರೇಶ್, ಆನಂದ್ ಜಾದವ್ ತಾಲೂಕು ಮರಾಠ ಸಮಾಜದ ಕಾರ್ಯದರ್ಶಿ ಟಿಕೋಜಿ ರಾವ್ ಇತರರಿದ್ದರು.

# ಗುರು ಕಾರುಣ್ಯವೂ ಸ್ಪರ್ಶಮಣಿ : ಅಭಿನವ ಕೊಟ್ಟೂರೇಶ್ವರ ಮಹಾಸ್ವಾಮಿಗಳು

**ಗದಗ:** ಪರಮಪೂಜ್ಯ ಪದ್ಮ ಭೂಷಣ, ಡಾ ಪಂಡಿತ ಪುಟ್ಟರಾಜ ಗವಾಯಿಗಳವರ 15 ನೇ ಪುಣ್ಯಾರಾದನೆ, ಹಾಗೂ ನಾದಶ್ರೀ ಸಂಗೀತ ಪಾಠಶಾಲೆ ವಾರ್ಷಿಕೋತ್ಸವ, ಗಾನಗಂದ ವ್ರ ಕಲಾ ಟ್ರಸ್ಟ್ ಗದಗ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರ ಇವರ ಸಹಯೋಗದಲ್ಲಿ ನಡೆಯಿತು.

ದಿವ್ಯ ಸಾನಿದ್ಯವನ್ನು ಪೂಜ್ಯ ಶ್ರೀ ಮನಿಪ್ರ ಡಾ ಕೊಟ್ಟೂರೇಶ್ವರ ಮಹಾಸಾಗರ ದಿವ್ಯ ಸಾನಿದ್ಯ ಹಾಗೂ ಪೂಜ್ಯ ಶ್ರೀ ವೀರೇಶ್ವರ ಶರಣರ ಸಮ್ಮುಖದಲ್ಲಿ ನಡೆಯಿತು.

ಕಾರ್ಯಕ್ರಮ ವನ್ನು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಪೊಲೀಸ ಇನ್ಸಪೇಕ್ಟರ ಮಾರುತಿ ಎಸ್ ಜಗದಂಡಕರ ಉದ್ಘಾಟಿಸಿ ಮಾತನಾಡಿ,ಆಟೋ ಡ್ರೈವರ್ ಆಗಿದ್ದ ನಾನು ಇಂದು ರಾಷ್ಟ್ರ ಪ್ರಶಸ್ತಿ ಪಡೆದು ಪಿ ಎಸ್ ಐ ಆಗಿ ನಿಮ್ಮ ಮುಂದೆ ನಿಂತಿದ್ದೇನೆ ಇದಕ್ಕೆ ಕಾರಣ ನನ್ನ ಲ್ಲಿದ್ದ ಸ್ಪಷ್ಟ ಗುರಿ, ಅಚಲ ನಿರ್ಧಾರ, ಹಾಗೂ ಕಠಿಣ ಶ್ರಮ ಲಕ್ಷ ಲಕ್ಷ ಖರ್ಚು ಮಾಡಿ ಮನೆ ಕಟ್ಟಿಸುವ ನೀವು ಸಾವಿರಾರು ರೂಪಾಯಿ ಸಿ ಸಿ



ಕ್ಯಾಮೆರಾ ಅಳವಡಿಸಲು ಹಿಂಜರಿಯಬೇಡಿ ಇದು ನಿಮ್ಮ ರಕ್ಷಣೆ ಅಪರಾಧ ಪತ್ತೆ ಹಚ್ಚಲು ತುಂಬಾ ಅವಶ್ಯಕವಾಗಿದೆ ಎಂದು ಹೇಳಿದರು.

ಇದೆ ವೇಳೆ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಪೊಲೀಸ ಇನ್ಸಪೇಕ್ಟರ ಮಾರುತಿ ಎಸ್ ಜಗದಂಡಕರ ಸನ್ಮಾನಿಸಲಾಯಿತು.

ಕುಮಾರ ಗುಡಿ ಭರತ ರಿಂದ ಗಾಯನ, ಕುಮಾರಿ ವರ್ಷ ಕಲಕಂಬಿ ಯವರಿಂದ ಭರತ ನಾಟ್ಯ, ಹಾಗೂ ನಾದ ಶ್ರೀ ಸಂಗೀತ ಪಾಠಶಾಲೆ ಮಕ್ಕಳಿಂದ ವಚನ ಗಾಯನ ನೃತ್ಯ ಪ್ರದರ್ಶನ ಗಳು ಆಕರ್ಷಕವಾಗಿ ನಡೆದವು,

ಪೂಜ್ಯ ಮನೀಪ್ರ ಅಭಿನವ ಡಾ ಕೊಟ್ಟೂರೇಶ್ವರ ಮಹಾಸ್ವಾಮಿಗಳು ಗುರು ಕಾರುಣ್ಯ ಎಂಬುವುದು ಸ್ಪರ್ಶ ಮಣಿಯಂತೆ ಗವಾಯಿಗಳವರ ಕಾರುಣ್ಯ ಬಿಕ್ಷಾ ಪಾತ್ರೆ ಹಿಡಿಯಬೇಕಿದ್ದ ಕೈಗಳು ಸಂಗೀತ ವಾದ್ಯ ಹಿಡಿದು ಸ್ವಾಭಿಮಾನದ ಬದುಕು ಹಿಡಿದರು ಎಂದು ಹೇಳಿದರು.

ಈ ಸಂದರ್ಭದಲ್ಲಿ ಉಮೇಶ, ದ್ರುವಕುಮಾರ,ಅಂಬಾದಾಸ, ಬಸಪ್ಪ ಗುಡಿಮನಿ, ಕಲಾವಿದ ಇದ್ದರು.

ಸಿದ್ದಲಿಂಗ ಸ್ವಾಮಿ ಗಡ್ಡದಮಠ ಸ್ವಾಗತಿಸಿದರು. ಕುಮಾರ ಶಿವಯೋಗಿ ಗಡ್ಡದಮಠ ನಿರೂಪಿಸಿದರು. ಕುಮಾರಸ್ವಾಮಿ ಹಿರೇಮಠ ವಂದಿಸಿದರು.

# ಆಶ್ರಮದಲ್ಲಿ ವಿದ್ಯಾರ್ಥಿನಿಯರಿಗೆ ಲೈಂಗಿಕ ಕಿರುಕುಳ ನೀಡಿದ್ದ ಸ್ವಾಮಿ ಚೈತನ್ಯಾನಂದ ಸರಸ್ವತಿ ಅರೆಸ್ಟ್

**ನವದೆಹಲಿ:** ಆಶ್ರಮದಲ್ಲಿ 17 ವಿದ್ಯಾರ್ಥಿನಿಯರಿಗೆ ಲೈಂಗಿಕ ಕಿರುಕುಳ ನೀಡಿ ಬಂಧನದ ಭೀತಿಯಿಂದ ತಲೆಮರೆಸಿಕೊಂಡಿದ್ದ ದೆಹಲಿಯ ಸ್ವಾಮಿ ಚೈತನ್ಯಾನಂದ ಸರಸ್ವತಿಯನ್ನು ಕೊನೆಗೂ ಪೊಲೀಸರು ಬಂಧಿಸಿದ್ದಾರೆ. ಸ್ವಾಮಿ ಚೈತನ್ಯಾನಂದ ಸರಸ್ವತಿ ವಿರುದ್ಧ ವಿದ್ಯಾರ್ಥಿನಿಯರಿಗೆ ಅಶ್ಲಿಲ ಸಂದೇಶ, ಬಲವಂತದ ದೈಹಿಕ ಸಂಪರ್ಕ ನಡೆಸಿದ ಆರೋಪಗಳಿವೆ.

ಪ್ರಕರಣ ಹೊರಬಂದ ನಂತರ ಆಶ್ರಮದಿಂದ ತಲೆಮರೆಸಿಕೊಂಡು ನಾಲ್ಕು ದಿನಗಳಿಂದ ನಾಪತ್ತೆಯಾಗಿದ್ದ ಇವರನ್ನು ಉತ್ತರಪ್ರದೇಶದ ಆಗ್ರದಲ್ಲಿ ಬಂಧಿಸಿರುವದೆಹಲಿ ಪೊಲೀಸರು, ನ್ಯಾಯಾಧೀಶರ ಮುಂದೆ ಹಾಜರುಪಡಿಸಿ ಹೆಚ್ಚಿನ ವಿಚಾರಣೆಗಾಗಿ ತಮ ವಶಕ್ಕೆ ಪಡೆದಿದ್ದಾರೆ.

ದೆಹಲಿಯ ಶಾರದಾ ಇನ್ಸಿಟ್ಯೂಟ್ ಆಫ್ ಇಂಡಿಯನ್ ಮ್ಯಾನೇಜೆಂಟ್‌ನ ನಿರ್ವಹಣಾ ಸಮಿತಿಯ ಸದಸ್ಯರಾಗಿರುವ ಆರೋಪಿ ವಿರುದ್ಧ 2009 ಮತ್ತು 2016 ರಲ್ಲಿ ಸಹ ಎರಡು ಲೈಂಗಿಕ ಕಿರುಕುಳದ ದೂರು ದಾಖಲಾಗಿದ್ದವು.

ಸ್ವಾಮೀಜಿ, ವಿದ್ಯಾರ್ಥಿಗಳನ್ನು ತಮ ಕೋಣೆಗೆ ಕರೆಸಿಕೊಂಡು ಉಚಿತ ವಿದೇಶ ಪ್ರವಾಸಗಳ ಆಮಿಷವೊಡ್ಡಿ ಲೈಂಗಿಕ ಕ್ರಿಯೆಗೆ ಒತ್ತಾಯಿಸುತ್ತಿದ್ದರು. ಮಹಿಳಾ ಹಾಸ್ಟೆಲ್‌ನಲ್ಲಿ ರಹಸ್ಯವಾಗಿ ಕ್ಯಾಮೆರಾಗಳನ್ನು ಅಳವಡಿಸಿದ್ದರು ಎಂದು ಆರೋಪಿಸಲಾಗಿದೆ. ಈ ಬಗ್ಗೆ ಆರೋಪಗಳು ಹೊರಬಿದ್ದ ನಂತರ, ಆಶ್ರಮದ ಆಡಳಿತ ಮಂಡಳಿ ಚೈತನ್ಯಾನಂದರನ್ನು ಅವರ ಹುದ್ದೆಯಿಂದ ಹೊರಹಾಕಿತ್ತು.

ವಿದ್ಯಾರ್ಥಿನಿಯರ ದೂರು ಏನು?

ಸ್ವಾಮಿ ಚೈತನ್ಯಾನಂದ ಸರಸ್ವತಿ ಪಾರ್ಥ ಸಾರಥಿ, ಇಡಬ್ಲ್ಯೂಎಸ್ ವಿದ್ಯಾರ್ಥಿವೇತನದಡಿ ಪಿಜಿಡಿಎಂ ಕೋರ್ಸ್‌ಗಳನ್ನು ಕಲಿಯುತ್ತಿರುವ ಮಹಿಳಾ ವಿದ್ಯಾರ್ಥಿಗಳಿಗೆ ಅಶ್ಲಿಲ ಭಾಷೆಯನ್ನು ಬಳಸಿ ನಿಂದಿಸುತ್ತಿದ್ದರು ಮತ್ತು ವಾಟ್ಸಪ್‌ನಲ್ಲಿ ಅಶ್ಲಿಲ ಸಂದೇಶಗಳನ್ನು ಕಳಿಸುತ್ತಿದ್ದರು. ಅಲ್ಲದೇ ದೈಹಿಕ ಸಂಪರ್ಕಕ್ಕೂ ಪ್ರಯತ್ನಿಸಿದ್ದರು. ಸಂಸ್ಥೆಯಲ್ಲಿನ ಕೆಲ ಮಹಿಳಾ ಅಧ್ಯಾಪಕರು ಹಾಗೂ ಆಡಳಿತಾಧಿಕಾರಿಗಳು ಅವರ ಬೇಡಿಕೆ ಈಡೇರಿಸುವಂತೆ ವಿದ್ಯಾರ್ಥಿನಿಯರ ಮೇಲೆ ಒತ್ತಡ ಹೇರುತ್ತಿದ್ದರು. ಇದರಿಂದಾಗಿ ಸಾಕಷ್ಟು ಮಾನಸಿಕ ಹಾಗೂ ದೈಹಿಕ ಹಿಂಸೆ ಅನುಭವಿಸಿದ್ದಾರೆ ಎಂದು ವಿದ್ಯಾರ್ಥಿನಿಯರು ದೂರಿನಲ್ಲಿ ತಿಳಿಸಿದ್ದರು.

## ಕಟ್ಟಡದ ಎತ್ತರವನ್ನು 21ರಿಂದ 15 ಮೀಟರ್‌ಗೆ ಪರಿಷ್ಕರಿಸಿದ ರಾಜ್ಯ ಸರ್ಕಾರ

# 4 ಅಂತಸ್ತು ಕಟ್ಟಡಕ್ಕೆ ಫೈರ್ ಎನ್‌ಒಸಿ ಕಡ್ಡಾಯ

### ರೂ 734 ಕೋಟಿ ಮೌಲ್ಯದ ಆಸ್ತಿ ನಷ್ಟ

**ಅಗ್ನಿಶಾಮಕ ಇಲಾಖೆಗೆ 2022-23ರಲ್ಲಿ 2.87 ಲಕ್ಷ ಕರೆಗಳು ಬಂದಿದ್ದು, 404.44 ಕೋಟಿ ರೂ. ಆಸ್ತಿ ನಷ್ಟವಾಗಿದೆ. ಆ ಪೈಕಿ 76 ಮಂದಿ ಮೃತಪಟ್ಟಿದ್ದರೆ, 123 ಮಂದಿ ರಕ್ಷಣೆ ಮಾಡಲಾಗಿದೆ. 221 ಜನರು ರಕ್ಷಣೆ ಮಾಡಲಾಗಿದೆ 201 ಮಂದಿ ಗಾಯಗೊಂಡಿದ್ದಾರೆ ತುರ್ತು ವಾಹನಗಳೂ ಸ್ಥಳಕ್ಕೆ ದೌಡಹಿಸುವಷ್ಟರಲ್ಲಿ 2023-24 ನೇ ಸಾಲಿನಲ್ಲಿ 1344 ಜನರು ಪ್ರಾಣ ಕಳಿದುಕೊಂಡರು 2024-25 1522 ಮಂದಿ ಮೃತಪಟ್ಟಿದ್ದಾರೆ 2.38 ಲಕ್ಷ ಕರೆಗಳು ಬಂದಿದ್ದು, 330.26 ಕೋಟಿರೂ. ಆಸ್ತಿ ನಷ್ಟವಾಗಿದೆ. 48 ಮಂದಿ ಮೃತಪಟ್ಟಿದ್ದಾರೆ. 121 ಜನರ ರಕ್ಷಣೆ ಮಾಡಲಾಗಿದೆ. 201 ಮಂದಿ ಗಾಯಗೊಂಡಿದ್ದಾರೆ. ತುರ್ತು ವಾಹನಗಳು ಸ್ಥಳಕ್ಕೆ ದೌಡಾಯಿಸುವಷ್ಟರಲ್ಲಿ 2023-24 0 1,344 ಣಚಿಭಿಟಿರಿಜ 2024-25ನೇ ಸಾಲಿನಲ್ಲಿ 1,252 ಮಂದಿ ಮೃತಪಟ್ಟಿದ್ದಾರೆ. ಒಟ್ಟು ಎರಡು ವರ್ಷದಲ್ಲಿ ರಾಜ್ಯದ ವಿವಿಧ ಜಿಲ್ಲೆಯಲ್ಲಿ ಸಾವಿನ ಸಂಖ್ಯೆ ಎರಡೂವರೆ ಸಾವಿರ ದಾಟಿದ್ದು, 734 ಕೋಟಿ ರೂ. ಮೌಲ್ಯದ ಆಸ್ತಿ**

**ಬೆಂಗಳೂರು:** ರಾಜ್ಯದಲ್ಲಿ ಕಟ್ಟಡ ಅಗ್ನಿ ಅವಘಡ ಪ್ರಕರಣ ಹೆಚ್ಚುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿರುವ ಸರ್ಕಾರ ನಿರಾಕ್ಷೇಪಣಾ ಪತ್ರ (ಎನ್ ಒಸಿ) ನಿಯಮ ಪರಿಷ್ಕರಿಸಿದೆ. ಅಗ್ನಿ ಶಾಮಕ, ತುರ್ತು ಸೇವೆಗಳ ಇಲಾಖೆ ನಿಯಮದಂತೆ 21 ಮೀಟರ್ ಎತ್ತರದ ಕಟ್ಟಡಗಳಿಗೆ ಎನ್‌ಒಸಿ ಕಡ್ಡಾಯವಾಗಿತ್ತು. ಇನ್ಮುಂದೆ 15 ಮೀಟರ್ ಎತ್ತರದ ಕಟ್ಟಡಗಳಿಗೂ (ಅಂದಾಜು 4 ಅಂತಸ್ತು) ಎನ್‌ಒಸಿ ಕಡ್ಡಾಯವಾಗಿದೆ. ಶೈಕ್ಷಣಿಕ ಕಟ್ಟಡ, ಆಸ್ಪತ್ರೆ, ವಸತಿ, ವಾಣಿಜ್ಯ, ಕೈಗಾರಿಕೆ, ಗೋದಾಮಿನ ಉಪಯೋಗಕ್ಕಾಗಿ ಬಹುಮಹಡಿಯ 15 ಮೀಟರ್ ಎತ್ತರದ ಕಟ್ಟಡಗಳಿಗೆ ಕಡ್ಡಾಯವಾಗಿ ನಿರಾಕ್ಷೇಪಣಾ ಪತ್ರ ಪಡೆಯುವ ನಿಯಮ ಅನ್ವಯವಾಗಲಿದೆ.

**ಪರಿಶೀಲನಾ ವರದಿ ಸಲ್ಲಿಕೆ:** ಜಿಲ್ಲಾ ಮಟ್ಟದಲ್ಲಿ ಅಗ್ನಿಶಾಮಕ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿನ ಬಹುಮಹಡಿ ಕಟ್ಟಡ ಪರಿಶೀಲಿಸಿ ನಿಗದಿತ ನಮೂನೆಯಲ್ಲಿ ಸಂಬಂಧಪಟ್ಟ ಪ್ರಾದೇಶಿಕ ಅಗ್ನಿಶಾಮಕ ಅಧಿಕಾರಿಗಳಿಗೆ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ. ಪ್ರಾದೇಶಿಕ ಆಯುಕ್ತರು ಸಲ್ಲಿಸುವ ನಿರಾಕ್ಷೇಪಣಾ ವರದಿ ಪರಿಶೀಲಿಸಿ ಸಂಬಂಧಪಟ್ಟ




ಕಟ್ಟಡ ಮಾಲೀಕರಿಗೆ ನಿಗದಿತ ಶುಲ್ಕವನ್ನು ಸರ್ಕಾರಕ್ಕೆ

### 2 ವರ್ಷ 2,596 ಸಾವು

**ರಾಜ್ಯದಲ್ಲಿ ಅಗ್ನಿ ದುರಂತದಿಂದ ಕಳೆದ ಎರಡು ವರ್ಷದಲ್ಲಿ 2,595 ಜನರು ಮೃತಪಟ್ಟಿದ್ದಾರೆ. ವಾಣಿಜ್ಯ ಕಟ್ಟಡ, ಮನೆ, ಕಾರ್ಖಾನೆ, ಗೋದಾಮು ಸೇರಿದಂತೆ ವಿವಿಧ ಕಡೆ ಸಂಭವಿಸುತ್ತಿರುವ ದುರ್ಘಟನೆಯಿಂದ ಪ್ರತಿ ವರ್ಷ 1,200 ರಿಂದ 1,300 ಜನರು ಮೃತಪಡುತ್ತಿದ್ದಾರೆ.**

ಪಾವತಿಸಲು ಕ್ರಮ ಕೈಗೊಳ್ಳುವಂತೆ ಆದೇಶದಲ್ಲಿ ತಿಳಿಸಲಾಗಿದೆ. ರಾಷ್ಟ್ರೀಯ ಕಟ್ಟಡ ಸಂಹಿತೆ 2016 ಆದೇಶನ್ವಯ 21 ಮೀಟರ್ ನಲ್ಲಿ ಅಂದಾಜು 5 ಅಂತಸ್ತಿನ ಕಟ್ಟಡ ನಿರ್ಮಾಣಕ್ಕೆ ಅಗ್ನಿಶಾಮಕ ಇಲಾಖೆಯಿಂದ ಎನ್‌ಒಸಿ ಪಡೆಯಲಾಗುತ್ತಿತ್ತು. ಆದರೆ, ಆದರೆ 15 ಮೀಟರ್ ಕಡ್ಡಾಯಗೊಳಿಸಿರುವುದರಿಂದ 4 ಅಂತಸ್ತಿನ ಕಟ್ಟಡಗಳಿಗೆ ನಿರಾಕ್ಷೇಪಣಾ

## ಕೃಷ್ಣಾ-ಭೀಮಾ ನದಿ ತೀರದಲ್ಲಿ ಪ್ರವಾಹ ಸ್ಥಿತಿ, ರಕ್ಷಣೆ ಪರಿಹಾರ ಕಾರ್ಯ ಕೈಗೊಳ್ಳಲು ಸಿಎಂ ಸೂಚನೆ



**ಕಲಬುರಗಿ:** ಭೀಮನದಿ ತೀರ ಹಾಗೂ ಬೆಣ್ಣೆತೋರಾದಲ್ಲಿ ಪ್ರವಾಹದ ಪರಿಸ್ಥಿತಿ ಉದ್ಭವಿಸಿರುವ ಹಿನ್ನೆಲೆಯಲ್ಲಿ ತೀವ್ರ ನಿಗಾವಹಿಸಿ, ಅಗತ್ಯ ರಕ್ಷಣಾ ಮತ್ತು ಪರಿಹಾರ ಕಾರ್ಯಗಳನ್ನು ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಂದಾಯ ಸಚಿವರು ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲೆಯಲ್ಲಿ ಸುರಿದ ನಿರಂತರ ಮಳೆ ಹಾಗೂ ಕೃಷ್ಣ ನದಿಯ ಮಹಾರಾಷ್ಟ್ರದ ಉಜನಿ ಹಾಗೂ ನೀರ ಜಲಾಶಯದಿಂದ ಹೆಚ್ಚಿನ ಪ್ರಮಾಣದ ನೀರನ್ನು ಹೊರಬಿಟ್ಟಿರುವುದರಿಂದ ಪ್ರವಾಹ ಸ್ಥಿತಿ ಎದುರಾಗಿದೆ.

ಈ ಹಿನ್ನೆಲೆಯಲ್ಲಿ ಕಂದಾಯ ಸಚಿವರಾದ ಕೃಷ್ಣಬೈರೇಗೌಡ, ಮತ್ತು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಹಾಗೂ ಕಲ್ಬುರ್ಗಿ ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿಗಳು ಅಗತ್ಯ ರಕ್ಷಣಾ, ಪರಿಹಾರ ಕಾರ್ಯಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿದ್ದಾರೆ.

ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಸಿಇಒ ಗಳು ಪ್ರವಾಹ ಪೀಡಿತ ಪ್ರದೇಶಗಳಿಗೆ ಖುದ್ದು ಭೇಟಿ ನೀಡಿ ತುರ್ತು ಕ್ರಮ ಕೈಗೊಳ್ಳಬೇಕು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ತಕ್ಷಣ ಜಿಲ್ಲೆಗೆ ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕಿಸಿ ಸೂಕ್ತ ಕ್ರಮ ಕೈಗೊಳ್ಳಲು ಜಿಲ್ಲಾಡಳಿತಕ್ಕೆ ಸೂಚನೆಗಳನ್ನು ನೀಡಬೇಕೆಂದು ನಿರ್ದೇಶನ ನೀಡಿದ್ದಾರೆ.

ಗ್ರಾಮೀಣಾಭಿವೃದ್ಧಿ ಇಲಾಖೆ ಕಾರ್ಯದರ್ಶಿಗಳು, ಜಲ ಸಂಪನೂಲ ಇಲಾಖೆಯ ಅಪರ ಮುಖ್ಯಕಾರ್ಯದರ್ಶಿಗಳು ಸ್ಥಳಕ್ಕೆ ಭೇಟಿ ನೀಡಬೇಕು, ಮಾನವ ಮತ್ತು ರಾಸುಗಳ, ಜಾನವಾರುಗಳ ಪ್ರಾಣಹಾನಿ ಆಗದಂತೆ ಎಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದ್ದಾರೆ.

ಸಂತ್ರಸ್ಥರಿಗೆ ಆಹಾರ ಕೇಂದ್ರಗಳು, ಜಾನವಾರುಗಳಿಗೆ ಅಗತ್ಯ ಮೇವಿನ ವ್ಯವಸ್ಥೆ ಜೊತೆಗೆ ಜನಜಾನುವಾರು ಪ್ರಾಣಕ್ಕೆ ಕುತ್ತು ಉಂಟಾಗದಂತೆ ಅಗತ್ಯ ವ್ಯವಸ್ಥೆಗಳನ್ನು ಕೈಗೊಳ್ಳಬೇಕೆಂದು ಸಿಎಂ ಮುನ್ನೆಚ್ಚರಿಕೆ ನೀಡಿದ್ದಾರೆ.

## ಹೆಚ್.ಎಂ. ಶಿವಣ್ಣ ಹಾಗು ಸಾಹಿತಿ ಡಾ. ಎಸ್. ಎಲ್. ಭೈರಪ್ಪ ಅವರ ನಿಧನಕ್ಕೆ ಶ್ರದ್ಧಾಂಜಲಿ




**ಹಾಸನ:** ಅನನ್ಯ ಟ್ರಸ್ಟ್ ವತಿಯಿಂದ ಇಲ್ಲಿನ ಹೇಮಾವತಿ ನಗರದಲ್ಲಿರುವ ರಚನಾ ನಿಲಯದಲ್ಲಿ ಸ್ವಾತಂತ್ರ್ಯ ಹೋರಾಟಗಾರ ಹೆಚ್. ಎಂ. ಶಿವಣ್ಣ ಹಾಗು ಸಾಹಿತಿ ಡಾ. ಎಸ್. ಎಲ್. ಭೈರಪ್ಪ ಅವರ ನಿಧನಕ್ಕೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಸ್ತ್ರಿ ರೋಗ ಮತ್ತು ಪ್ರಸೂತಿ ತಜ್ಞೆ ಡಾ. ರಂಗಲಕ್ಷ್ಮಿ ಅವರು ಮಾತನಾಡಿ, ನುಗ್ಗೆಹಳ್ಳಿ ಹೋಬಳಿ ಸಂತೇಶಿವರ ಗ್ರಾಮದ ಭೈರಪ್ಪನವರು ತಮ ಬರಹಗಳ ಮೂಲಕ ಜಿಲ್ಲೆಯ ಕೀರ್ತಿಯನ್ನು ವಿಶ್ವಮಟ್ಟಕ್ಕೆ ಹೆಚ್ಚಿಸಿದ್ದಾರೆ. ಉಪನ್ಯಾಸಕರಾಗಿ ಬದುಕು ಕಟ್ಟಿಕೊಂಡಿದ್ದ ಅವರು ಗುಜರಾತ್, ದೆಹಲಿ, ಮೈಸೂರಿನಲ್ಲಿ ಕೆಲಸ ಮಾಡಿದ್ದರೂ ಹುಟ್ಟೂರಿನ ಬಗ್ಗೆ ಅತೀವ ಪ್ರಿತಿ ಹೊಂದಿದ್ದರು ಎಂಬುದನ್ನು ಗೃಹಭಂಗ ಕಾದಂಬರಿ ಹಾಗು ಆತಕಥೆ ಭಿತ್ತಿ ಅದನ್ನು ಸಾಕ್ಷಿಕರಿಸುತ್ತದೆ. ಓದುಗರನ್ನು ತಮೆಡೆಗೆ ಸೆಳೆಯುವ ಕಲೆ ಅವರಿಗೆ ಕರಗತವಾಗಿತ್ತು. ಆದ್ದರಿಂದಲೇ ಕಾದಂಬರಿಗಳು ದಾಖಲೆ ಮಟ್ಟದಲ್ಲಿ ಮಾರಾಟವಾಗುತ್ತಿದ್ದವು. ಕನ್ನಡದಲ್ಲಿ ಮತ್ತೊಬ್ಬ ಅಂತಹ ಲೇಖಕರನ್ನು ನಾವು ಕಾಣಲು ಸಾಧ್ಯವಿಲ್ಲವೆಂದರು.

ಅನನ್ಯ ಟ್ರಸ್ಟ್ ಅಧ್ಯಕ್ಷೆ ಕೆ.ಟಿ. ಜಯಶ್ರಿ ಅವರು ಮಾತನಾಡಿ, ಸ್ವಾತಂತ್ರ್ಯ ಹೋರಾಟಗಾರ ಹೆಚ್. ಎಂ. ಶಿವಣ್ಣ ಹಾಗು ಸಾಹಿತಿ ಎಸ್.ಎಲ್. ಭೈರಪ್ಪ ಅವರ ಅಗಲಿಕೆಗೆ ತುಂಬಲಾರದ ನಷ್ಟವುಂಟು ಮಾಡಿದೆ. ಶಿವಣ್ಣ ಅವರು 90ರ ಇಳಿ ವಯಸ್ಸಿನಲ್ಲೂ ಸಕ್ರಿಯರಾಗಿದ್ದರು. ಸ್ಕೌಟ್, ಗೈಡ್ ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಿದ್ದರು. ನಗರದಲ್ಲಿ ನಡೆಯುವ ಸಭೆ ಸಮಾರಂಭಗಳಲ್ಲಿ ತಪ್ಪದೇ ಹಾಜರಾಗುತ್ತಿದ್ದರು. ಯುವಕರಿಗೆ ದೇಶ ಪ್ರೇಮದ ಕುರಿತು ಮಾಡುತ್ತಿದ್ದ ಭಾಷಣ ಪ್ರೇರಣಾದಾಯಕವಾಗಿತ್ತು ಎಂದರು.

ಎಸ್.ಎಲ್. ಭೈರಪ್ಪ ಅವರ ಸಾಹಿತ್ಯ ಕೃಷಿಗೆ ಹೋಲಿಕೆ ಯಾರಿಂದಲೂ ಸಾಧ್ಯವಿಲ್ಲ. ಪ್ರಸ್ತುತ ದಿನಗಳಲ್ಲಿ ಒಂದೆರಡು ಪುಸ್ತಕ ಬರೆದು ತಾವು ದೊಡ್ಡ ಸಾಹಿತಿ ಎಂದು ಕರೆಸಿಕೊಳ್ಳುವ ಪರಿಸ್ಥಿತಿಯಲ್ಲಿ ಭೈರಪ್ಪನವರು ಎಂದಿಗೂ ಪ್ರಚಾರದ ಹಿಂದೆ ಬಿದ್ದವರಲ್ಲ. ಉತ್ಸವ ಮೂರ್ತಿಯಾಗದೆ ಮೂಲ ಮೂರ್ತಿಯಾಗಿ ನಿರಂತರ ಬರವಣಿಗೆಯಲ್ಲಿ ತೊಡಗಿದ್ದರು. ಯಾವುದೇ ಟೀಕೆಗಳಿಗೆ ಕಿವಿಗೊಡದೆ ನೇರ ಬರವಣಿಗೆ ಮೂಲಕ ಅಪಾರ ಓದುಗ ಬಳಗ ಸೃಷ್ಟಿಸಿಕೊಂಡಿದ್ದಾರೆ. ಪ್ರಶಸ್ತಿಗಳ ಹಿಂದೆ ಬೀಳದೆ ಬಡ ಮಕ್ಕಳ ಶಿಕ್ಷಣಕ್ಕೆ ಆರ್ಥಿಕ ಸಹಾಯ ಮಾಡಿದ ಭೈರಪ್ಪ ಮಾದರಿಯಾಗಿದ್ದಾರೆಂದರು.

ಸ್ತ್ರಿ ರೋಗ ಮತ್ತು ಪ್ರಸೂತಿ ತಜ್ಞೆ ಡಾ ಎ. ಸಾವಿತ್ರಿ, ಲೇಖಕಿ ಸೀತಮ ವಿವೇಕ್, ಟ್ರಸ್ಟ್ ಸದಸ್ಯರಾದ ಜಗದಾಂಬ, ಲಕ್ಷ್ಮಿ, ಶಶಿಕಲಾ, ಕಾಂಚನ ಮಾಲಾ, ಸುಮನಾ, ಜಯಪ್ರಕಾಶ್ ಮತ್ತಿತರರಿದ್ದರು.

## ಸತ್ತಂಗ ಪ್ರವಚನದಿಂದ ಮನಃ ಪರಿವರ್ತನೆ

**ಚಳ್ಳಕೆರೆ:** ಸಂಗದಿಂದ ಸಂಪಾದಿಸುವ ಭಕ್ತಿ ಬದುಕಿಗೆ ದೊಡ್ಡ ಶಕ್ತಿಯಾಗಿ ಕಾಪಾಡುತ್ತದೆ ಎಂದು ಶಾರದಾಶ್ರಮದ ಮಾತಾಜಿ ತ್ಯಾಗಮಯಿ ಹೇಳಿದರು. ನಗರದ ಲಯನ್ಸ್ ಕ್ಲಬ್‌ನಲ್ಲಿ ನವರಾತ್ರಿ ಪ್ರಯುಕ್ತ ಭಾನುವಾರ ಶಾರದಾಶ್ರಮದ ಭಕ್ತ ಮಂಡಳಿ ಆಯೋಜಿಸಿದ್ದ ಸತ್ತಂಗ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿ, ಇದು ಪ್ರವಚನ ರೂಪದಲ್ಲಿ ಮನಃ ಪರಿವರ್ತನೆ ಮಾಡುತ್ತದೆ ಎಂದರು. ನವರಾತ್ರಿ ಪೂಜೆಯಲ್ಲಿ ದೇವಿಯನ್ನು ಶೈಲಪುತ್ರಿ, ಬ್ರಹ್ಮಚಾರಿಣಿ, ಚಂದ್ರಘಂಟ, ಕೂಷ್ಮಾಂಡಾ, ಸ್ಕಂದ ಮಾತೆ, ಕಾತ್ಯಾಯಿನಿ, ಕಾಲರಾತ್ರಿ, ಮಹಾಗೌರಿ, ಸಿದ್ಧಿಧಾತ್ರಿಯಾಗಿ ಸ್ಮರಿಸಿ ಆರಾಧನೆ ಮಾಡುತ್ತೇವೆ. ಜತೆಗೆ ಮಹಾಕಾಳಿ, 'ಮಹಾಲಕ್ಷ್ಮಿ, ಮಹಾಸರಸ್ವತಿ ಎಂತಲೂ ಪೂಜಿಸುತ್ತೇವೆ. 10 ತಲೆ ರಾವಣನೆಂಬ ಅಸುರನನ್ನು ಶ್ರೀ ರಾಮಚಂದ್ರ ಸಂಹರಿಸಿದ ವಿಶೇಷ ದಿನವೆಂದು ವಿಜಯದಶಮಿಯಂದು ಪೂಜೆ ಸಲ್ಲಿಸುತ್ತೇವೆ ಎಂದು ತಿಳಿಸಿದರು. ಇದೇ ವೇಳೆ ಮಹಿಳಾ ಭಕ್ತರಿಂದ ಸಾಮೂಹಿಕವಾಗಿ ಶ್ರೀದೇವಿ ವಿಸ್ತುತಿ ಪಾರಾಯಣ ಮತ್ತು ದೇವಿ ಭಜನೆ ನಡೆಯಿತು

## ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದ ಅಗ್ನಿ ಅವಘಡ

**ದಾವಣಗೆರೆ :** ನಗರದ ಹೊಂಡದ ರಸ್ತೆಯ ಮೀನು ಮಾರುಕಟ್ಟೆ ಪಕ್ಕದ ಮನೆಯೊಂದರಲ್ಲಿ ಭಾನುವಾರ ಮಧ್ಯಾಹ್ನ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಅಗ್ನಿ ಅವಘಡ ಸಂಭವಿಸಿದ್ದು, ಒಳಗೆ ಸಿಕ್ಕಿ ಹಾಕಿಕೊಂಡಿದ್ದ ತಾಯಿ ಮತ್ತು ಮಗಳನ್ನು ಅಗ್ನಿಶಾಮಕ ಸಿಬ್ಬಂದಿ ರಕ್ಷಿಸಿದ್ದಾರೆ. ಎರಡನೇ ಮಹಡಿಯಲ್ಲಿದ್ದ ಮನೆಯಲ್ಲಿ ಸಿಬ್ಬಂದಿ ಏಣಿಯನ್ನು ಬಳಸಿ, ಮನೆಯೊಳಗೆ ಸಿಲುಕಿಕೊಂಡಿದ್ದ ತಾಯಿ ಮತ್ತು ಮಗಳನ್ನು ಕಿಟಕಿಯ ಮೂಲಕ ಹೊರಗೆ ಕರೆತಂದರು. ಹೊಗೆ ಸೇವಿಸಿದ್ದರಿಂದ ಅಸ್ವಸ್ಥಗೊಂಡಿದ್ದ ಇಬ್ಬರಿಗೂ ಆರೈಕೆ ಮಾಡಲಾಯಿತು.ಬೆಂಕಿ ಕಾಣಿಸಿಕೊಂಡು ಹೊಗೆ ಆವರಿಸಿದೆ. ದಾವಣಗೆರೆಯ ಹೊಂಡದ ಮನೆಯಲ್ಲಿದ್ದ ಗೀತಾ ಮತ್ತು ಮಧು ರಸ್ತೆಯಲ್ಲಿ ಅಗ್ನಿ ಅವಘಡ ಎಂಬುವರು ಹೊರಗೆ ಬರಲು ಆಗದೇ ಸಂಭವಿಸಿದ ಮನೆಯಿಂದ ಕಿಟಕಿಯ ನಿಂತುಕೊಂಡಿದ್ದರು. ಮಹಿಳೆಯನ್ನು ರಕ್ಷಿಸುತ್ತಿರುವ ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ಠಾಣೆಯ ಅಗ್ನಿಶಾಮಕ ಸಿಬ್ಬಂದಿ.ಘಟನೆಯಲ್ಲಿ ಗೃಹಬಳಕೆಯ ವಸ್ತುಗಳು, ಮಕ್ಕಳ ಪುಸ್ತಕ, ದಾಖಲಾತಿಗಳು ಸುಟ್ಟಿವೆ.ಪ್ರಾದೇಶಿಕ ಅಗ್ನಿಶಾಮಕ ಅಧಿಕಾರಿ ಎಂ.ಎನ್. ನಾಗೇಶ, ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಮಹಾಲಿಂಗಪ್ಪ ಲಂಗೋಟಿ, ಅಗ್ನಿಶಾಮಕ ಠಾಣಾಧಿಕಾರಿ ಫಕೀರಪ್ಪ ಕೆ. ಉಪ್ಪಾರ ಹಾಗೂ ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

## ಇಬ್ಬರು ಕಳವು ಆರೋಪಿಗಳ ಬಂಧನ

**ಮೊಳಕಾಲ್ಮೂರು:** ಮನೆ ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಆರೋಪಿಗಳಿಬ್ಬ ರನ್ನು ಪತ್ತೆ ಹಚ್ಚಿರುವ ಪೊಲೀಸರು ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಮೊಳಕಾಲ್ಮೂರಿನ ಹಲವಡೆ 2023ರಲ್ಲಿ ಹಗಲಿನಲ್ಲೇ ಮನೆಗೆ ನುಗ್ಗಿ ಚಿನ್ನಾಭರಣ, ನಗದು ಕಳವು ಮಾಡಿದ್ದ ಆರೋಪಿತರಾದ ಕೂಡ್ಲಿಗಿಯ ಚಿರತಗುಂಡ ಗ್ರಾಮದ ನಾಗರಾಜ, ಮುತ್ತಿಗಾರಹಳ್ಳಿಯ ರಾಜ ಎಂಬುವರನ್ನು ಬಂಧಿಸಿ 40 ಗ್ರಾಂ. ಬಂಗಾರ, 35 ಸಾವಿರ ರೂ. ನಗದು ವಶಪಡಿಸಿಕೊಂಡಿದ್ದಾರೆ.

# ಒಡೆದ ನಾಲೆ; ನೀರು ಪೋಲು

### ನೀರಾವರಿ ಇಲಾಖೆ ನಿರ್ಲಕ್ಷ್ಯವೇ ಕಾರಣ: ರೈತರ ಆರೋಪ

**ಸಾಸ್ವೆಹಳ್ಳಿ:** ಸಮೀಪದ ಕ್ಯಾಸಿನಕೆರೆ ಪಶು ವೈದ್ಯಕೀಯ ಆಸ್ಪತ್ರೆ ಹಿಂಭಾಗ ಭದ್ರಾ ನಾಲೆಯ ಅಕ್ಕಡಕ್ ಬುಧವಾರ ರಾತ್ರಿ ಒಡೆದಿದ್ದು, ನೀರು ಹಳ್ಳದ ಮೂಲಕ ನದಿ ಸೇರುತ್ತಿದೆ. ನೀರಾವರಿ ಇಲಾಖೆಯ ನಿರ್ಲಕ್ಷ್ಯವೇ ಇದಕ್ಕೆ ಕಾರಣ ಎಂದು ರೈತರು ಆರೋಪಿಸಿದ್ದಾರೆ.

ಮಾರ್ಚ್ ತಿಂಗಳಲ್ಲಿ ಭದ್ರಾವತಿ ತಾಲ್ಲೂಕಿನ ದಿಗ್ಗೇನಹಳ್ಳಿಯಲ್ಲಿ ಅಕ್ವಡಕ್ ಒಡೆದು ಅಪಾರ ಪ್ರಮಾಣದ – ನೀರು ಪೋಲಾಗಿತ್ತು. ತಿಂಗಳ ನಂತರ ಅದನ್ನು ಸರಿಪಡಿಸಲಾಗಿತ್ತು. ಆಗ ಕೊನೆ ಭಾಗದ ಜಮೀನುಗಳಿಗೆ ಸರಿಯಾದ ಸಮಯದಲ್ಲಿ ನೀರು ಸಿಗದೆ ಭತ್ತದ ಇಳುವರಿ ಕುಂಠಿತಗೊಂಡಿತ್ತು. ಇದರಿಂದ ಕೃಷಿಕರಿಗೆ ನಷ್ಟ ಉಂಟಾಗಿತ್ತು. ಈಗಲೂ ಅದೇ ಪರಿಸ್ಥಿತಿ ನಿರ್ಮಾಣ ಆಗಿದೆ ಎನ್ನುತ್ತಾರೆ ಭಾರತೀಯ ಕಿಸಾನ್ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಕೆ.ಸಿ. ತಿಪ್ಪೇಶ್.

*50 ವರ್ಷಗಳಷ್ಟು ಹಳೆಯದಾದ ಈ ನಾಲೆಯನ್ನು ಬೇಸಿಗೆ ಕಾಲದಲ್ಲಿ ದುರಸ್ತಿ ಮಾಡಿದ್ದರೆ ರೈತರಿಗೆ ನಷ್ಟ ಉಂಟಾಗುತ್ತಿರಲಿಲ್ಲ. ಕ್ಯಾಸಿನಕೆರೆ, ಕುಳಗಟ್ಟೆ, ಹನುಮನಹಳ್ಳಿ, ಸಾಸ್ವೆಹಳ್ಳಿ,



ಸಾಸ್ಥೆಹಳ್ಳಿ ಸಮೀಪದ ಕ್ಯಾಸಿನಕೆರೆ ಪಶು ವೈದ್ಯಕೀಯ ಆಸ್ಪತ್ರೆ ಹಿಂಭಾಗ ಭದ್ರಾ ನಾಲೆಯ ಅಕ್ವಡಕ್ ಒಡೆದು ನೀರು ಹಳ್ಳದಲ್ಲಿ ಹರಿಯುತ್ತಿರುವುದು

ಹಿರೇಬಾಸೂರು, ಬೆನಕನಹಳ್ಳಿ, ಕಮ್ಮಾರಗಟ್ಟೆ ಸೇರಿ ಹಲವು ಗ್ರಾಮಗಳ ರೈತರು ಈಗ ತಾನೇ ಭತ್ತ ನಾಟಿ ಮಾಡಿದ್ದಾರೆ. ನಾಲೆ ನೀರು ಸರಿಯಾಗಿ ಸಿಗದಿದ್ದರೆ ಎಳೆಯ ಸಸಿಗಳು ಒಣಗುತ್ತವೆ. ಆಗ ರೈತರ ಜೀವನ ಕಷ್ಟವಾಗುತ್ತ-ದೆ' ಎಂದು ಕೃಷಿಕ ಮಲ್ಲೇಶಚಾರ್ ನೋವಿನಿಂದ ನುಡಿದರು.

'ಶಾಸಕರು ಲಕ್ಷಾಂತರ ರೂಪಾಯಿ ಅನುದಾನ ನೀಡಿ ನಾಲೆಯ ಹೂಳು ತೆಗಿಸಿದರು. ಈ ಸಂದರ್ಭದಲ್ಲಿ ಅಧಿಕಾರಿಗಳು ಇತ್ತ ಗಮನ ಹರಿಸಿದ್ದರೆ ದುರಸ್ತಿಯಾಗಿ ರೈತರಿಗೆ ನೀರು ಸಿಗುತ್ತಿತ್ತು. ಅಧಿಕಾರಿಗಳು ಸಾರ್ವಜನಿಕರ ಹಣವನ್ನು ಅನಗತ್ಯ ಕೆಲಸಗಳಿಗೆ ಬಳಸುತ್ತಿರುವುದು ಬೇಸರದ ಸಂಗತಿ' ಎಂದು ಕ್ಯಾಸಿನಕೆರೆ ರೈತಪರಮೇಶ್ವರಪ್ಪ ದೂರಿದರು.

## ಉತ್ತರ ಪ್ರದೇಶದಲ್ಲೊಂದು ಮರ್ಯಾದಾ ಹತ್ಯೆ

**ಮುಜಫರ್‌ನಗರ:** ಉತ್ತರ ಪ್ರದೇಶದ ಶಾಮ್ಲಿ ಜಿಲ್ಲೆಯಲ್ಲೊಂದು ಮರ್ಯಾದಾ ಹತ್ಯಾ ಪ್ರಕರಣ ನಡೆದಿದೆ.ಕುಟುಂಬದ ಹೆಸರಿಕೆ ಕಳಂಕ ತಂದ ಆರೋಪದ ಮೇಲೆ ಅಪ್ರಾಪ್ತ 17 ವರ್ಷದ ಬಾಲಕಿಯನ್ನು ಆಕೆಯ ತಂದೆ ಮತ್ತು ಸಹೋದರ ಗುಂಡಿಕ್ಕಿ ಕೊಂದಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.ಉತ್ತರ ಪ್ರದೇಶದ ಶಾಮ್ಲಿ ಜಿಲ್ಲೆಯ ಕಂಧ್ಲಾ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿರುವ ಅಂಬೆಹ್ತಾ ಗ್ರಾಮದಲ್ಲಿ ಈ ಘಟನೆ ನಡೆದಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಎನ್ ಪಿ ಸಿಂಗ್ ಸುದ್ದಿಗಾರರಿಗೆ ತಿಳಿಸಿದ್ದಾರೆ.12 ನೇ ತರಗತಿಯ ವಿದ್ಯಾರ್ಥಿನಿ ಮುಸ್ಕಾನ್ ಎಂದು ಗುರುತಿಸಲಾದ ಸಂತ್ರಸ್ತೆಯನ್ನು ಆಕೆಯ ತಂದೆ ಜುಲ್ಫಾಮ್ ಮತ್ತು 15 ವರ್ಷದ ಸಹೋದರ ತಮ್ಮ ಮನೆಯ ಮೇಲಿನ ಮಹಡಿಗೆ ಕರೆದೊಯ್ದು, ಅಲ್ಲಿ ಆಕೆಯನ್ನು ಪಿಸ್ತೂಲಿನಿಂದ ಗುಂಡು ಹಾರಿಸಿ ಕೊಂದಿದ್ದಾರೆ ಎಂದು ಸಿಂಗ್ ತಿಳಿಸಿದ್ದಾರೆ.ಭಾರತೀಯ ನ್ಯಾಯ ಸಂಹಿತಾದ ಸಂಬಂಧಿತ ವಿಭಾಗಗಳ ಅಡಿಯಲ್ಲಿ ಜುಲ್ಫಾಮ್ ಮತ್ತು ಅವರ ಅಪ್ರಾಪ್ತ ಮಗನ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಎಸ್‌ಪಿ ಹೇಳಿದರು.ಇಬ್ಬರನ್ನೂ ಬಂಧಿಸಲಾಗಿದೆ ಮತ್ತು ಅಪರಾಧದಲ್ಲಿ ಬಳಸಲಾದ ಆಯುಧವನ್ನು ವಶಪಡಿಸಿಕೊಳ್ಳಲಾಗಿದೆ.ಕುಟುಂಬದ ಹೆಸರಿಗೆ ಕಳಂಕ ತಂದಿದ್ದಕ್ಕಾಗಿ ತನ್ನ ಮಗಳನ್ನು ಕೊಂದಿದ್ದಾಗಿ ಆರೋಪಿ ತಂದೆ ಒಪ್ಪಿಕೊಂಡಿದ್ದಾನೆ ಎಂದು ಸಿಂಗ್ ಹೇಳಿದರು.ಸ್ಥಳೀಯರ ಪ್ರಕಾರ, ಮುಸ್ಕಾನ್ ಆ ಪ್ರದೇಶದ ಹುಡುಗನೊಂದಿಗೆ ಸಂಬಂಧ ಹೊಂದಿದ್ದಳು, ಅದನ್ನು ಅವಳ ಕುಟುಂಬ ವಿರೋಧಿಸಿತು. ನಿನ್ನೆ ಸಂಜೆ, ಆಕೆಯ ತಂದೆ ಆಕೆ ಫೋನ್‌ನಲ್ಲಿ ಚಾಟ್ ಮಾಡುವುದನ್ನುನೋಡಿದಾಗ ಕೋಪಗೊಂಡು ಆಕೆಯ ಕೊಲೆ ಮಾಡಲಾಗಿದೆ. ಶವವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಎಂದು ಎಸ್ಪಿ ಹೇಳಿದರು.

# ನೆರೆಪೀಡಿತ ಪ್ರದೇಶಗಳಲ್ಲಿ ಕಾಳಜಿ ಕೇಂದ್ರ ತೆರೆಯಲು ಎಚ್‌ಡಿಕೆ ಆಗ್ರಹ

**ಬೆಂಗಳೂರು:** ಕಲ್ಯಾಣ ಕರ್ನಾಟಕ ಭಾಗದ ನೆರೆಪೀಡಿತ ಪ್ರತೀ ತಾಲ್ಲೂಕಿನಲ್ಲಿ ಕಾಳಜಿ ಕೇಂದ್ರಗಳನ್ನು ತೆರೆಯಬೇಕು ಮತ್ತು ಎಲ್ಲಾ ತುರ್ತು ಸೌಲಭ್ಯಗಳು ಜನರಿಗೆ ಸುಲಭವಾಗಿ ಲಭ್ಯವಾಗುವಂತೆ ನೋಡಿಕೊಳ್ಳಬೇಕೆಂದು ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಒತ್ತಾಯಿಸಿದ್ದಾರೆ.

ಈ ಸಂಬಂಧ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ಕೇಂದ್ರ ಸರ್ಕಾರವು ಕರ್ನಾಟಕದ ಪರವಾಗಿ ದೃಢವಾಗಿ ನಿಲ್ಲುತ್ತದೆ ಎಂದು ಕೇಂದ್ರ ಸಚಿವನಾಗಿ ಖಚಿತ ಭರವಸೆ ನೀಡುಣಜಿಣಇನೆ. ನಮ ಜನರ ಕ್ಷೇಮ ಮತ್ತು ಅವರ ಸುರಕ್ಷಿತ ಜೀವನೋಪಾಯಕ್ಕಾಗಿ ಕಾಳಜಿ ವಹಿಸಿ ಸಾಧ್ಯವಿರುವ ಎಲ್ಲ ಸಹಕಾರವನ್ನೂ ಕೇಂದ್ರವು ನೀಡಲಿದೆ ಎಂದು ಅವರು ಹೇಳಿದ್ದಾರೆಕಲ್ಯಾಣ ಕರ್ನಾಟಕದ ಕಲಬುರಗಿ,

ವಿಜಯಪುರ, ಬೀದರ್, ರಾಯಚೂರು ಮತ್ತು ಕೊಪ್ಪಳ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಭಾರೀ ಪ್ರವಾಹ ಉಂಟಾಗಿ ಜನರು ಅತೀವ ಸಂಕಷ್ಟಕ್ಕೆ ಸಿಲುಕಿರುವ ಸಮಯದಲ್ಲಿ ಪ್ರತಿಯೊಬ್ಬರ



ಜೀವ ರಕ್ಷಣೆ, ಅವರಿಗೆ ಅಗತ್ಯ ಸೌಕರ್ಯ ಕಲ್ಪಿಸುವುದು ಸರ್ಕಾರದ ಆದ್ಯ ಕರ್ತವ್ಯ. ಅವರ ಕ್ಷೇಮಕ್ಕಾಗಿ ಪ್ರಾರ್ಥಿಸುತ್ತೇನೆ ಎಂದಿದ್ದಾರೆ.

ಆಹಾರ, ಕುಡಿಯುವ ನೀರು, ಉಡುಪು, ಹೊದಿಕೆ ಮತ್ತು ತುರ್ತು ಔಷಧಿಗಳ ಸಾಕಷ್ಟು ದಾಸ್ತಾನನ್ನು ವಿಳಂಬವಿಲ್ಲದೆ ಅಷ್ಟೂ ಜಿಲ್ಲೆಗಳಿಗೂ ತಲುಪಿಸಬೇಕು.

ಸಿಬ್ಬಂದಿ ರಕ್ಷಣಾ ಪ್ರಯತ್ನಗಳನ್ನು ತೀವ್ರಗೊಳಿಸಿ ವೃದ್ಧರು, ಮಕ್ಕಳು ಮತ್ತು ಮಹಿಳೆಯರ ರಕ್ಷಣೆಗೆ ಹೆಚ್ಚು ಮುತುವರ್ಜಿ ವಹಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

ವಿದ್ಯಾರ್ಥಿಗಳ ಬಗ್ಗೆಯೂ ವಿಶೇಷ ಗಮನ ಹರಿಸಬೇಕು. ಶಾಲೆ, ಹಾಸ್ಟೆಲ್ ಮತ್ತು ಶಿಕ್ಷಣ ಸಂಸ್ಥೆಗಳನ್ನು ತಕ್ಷಣವೇ ತಾತ್ಕಾಲಿಕ ಪರಿಹಾರ-ಆರೋಗ್ಯ ಕೇಂದ್ರಗಳನ್ನಾಗಿ ಪರಿವರ್ತಿಸಿ ನೆರೆಪೀಡಿತ ಕುಟುಂಬಗಳು, ಚಿಕ್ಕ ಮಕ್ಕಳು ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆಯಲು ಸೂಕ್ತ ವ್ಯವಸ್ಥೆ ಮಾಡಬೇಕು ಎಂದಿದ್ದಾರೆ.

**ವಿಜಯಪುರ, ಬೀದರ್, ರಾಯಚೂರು ಮತ್ತು ಕೊಪ್ಪಳ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಭಾರೀ ಪ್ರವಾಹ ಉಂಟಾಗಿ ಜನರು ಅತೀವ ಸಂಕಷ್ಟಕ್ಕೆ ಸಿಲುಕಿರುವ ಸಮಯದಲ್ಲಿ ಪ್ರತಿಯೊಬ್ಬರ ಜೀವ ರಕ್ಷಣೆ, ಅವರಿಗೆ ಅಗತ್ಯ ಸೌಕರ್ಯ ಕಲ್ಪಿಸುವುದು ಸರ್ಕಾರದ ಆದ್ಯ ಕರ್ತವ್ಯ.ಅವರ ಕ್ಷೇಮಕ್ಕಾಗಿ ಪ್ರಾರ್ಥಿಸುತ್ತೇನೆ ಎಂದಿದ್ದಾರೆ.**

**ಆಹಾರ, ಕುಡಿಯುವ ನೀರು, ಉಡುಪು, ಹೊದಿಕೆ ಮತ್ತು ತುರ್ತು ಔಷಧಿಗಳ ಸಾಕಷ್ಟು ದಾಸ್ತಾನನ್ನು ವಿಳಂಬವಿಲ್ಲದೆ ಅಷ್ಟೂ ಜಿಲ್ಲೆಗಳಿಗೂ ತಲುಪಿಸಬೇಕು. ಸಿಬ್ಬಂದಿ ರಕ್ಷಣಾ ಪ್ರಯತ್ನಗಳನ್ನು ತೀವ್ರಗೊಳಿಸಿ ವೃದ್ಧರು, ಮಕ್ಕಳು ಮತ್ತು ಮಹಿಳೆಯರ ರಕ್ಷಣೆಗೆ ಹೆಚ್ಚು ಮುತುವರ್ಜಿ ವಹಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.**

ಜನರ ಪ್ರಾಣ ನಷ್ಟದ ಜೊತೆಗೆ ಈ ಜಿಲ್ಲೆಗಳಲ್ಲಿ ತೀವ್ರ ಬೆಳೆನಷ್ಟ ಮತ್ತು ಹಾನಿ ಸಂಭವಿಸಿದೆ. ರೈತರ ಸ್ಥಿತಿ ಹೃದಯವಿದ್ರಾವಕವಾಗಿದ್ದು, ಅವರಿಗೆ ಸೂಕ್ತ-ಸಕಾಲಿಕ ಪರಿಹಾರ ಒದಗಿಸಬೇಕು.

ಇದರಿಂದ ಅವರು ತಮ ಜೀವನೋಪಾಯವನ್ನು ಮರಳಿ ಪಡೆಯಲು ಸಾಧ್ಯವಾಗುತ್ತದೆ. ಪಶು-ಪ್ರಾಣಿಗಳು ಅತೀವ ಸಂಕಷ್ಟಕ್ಕೆ ತುತ್ತಾಗಿವೆ. ವಿಶೇಷವಾಗಿ ಕೃಷಿ ಸಮುದಾಯದ ಜೀವನಾಡಿಯಾಗಿರುವ ಜಾನುವಾರುಗಳಿಗೆ ಮೇವು, ಆಶ್ರಯ ಮತ್ತು ವೈದ್ಯಕೀಯ ಆರೈಕೆ ಒದಗಿಸಲು ತುರ್ತು ಕ್ರಮ ಕೈಗೊಳ್ಳಬೇಕು.

ಜನಾರೋಗ್ಯ, ಪಶು ಆರೋಗ್ಯ ತಂಡಗಳನ್ನು ಸದಾ ಸನ್ನದ್ಧ ಸ್ಥಿತಿಯಲ್ಲಿಡಬೇಕು ಎಂದು ಅವರು ಸಲಹೆ ಮಾಡಿದ್ದಾರೆ.

ಗೌರಿ ಗಣೇಶ ಹಬ್ಬದ ಸಮಯದಲ್ಲಿ ಬೀದರ್, ವಿಜಯಪುರ, ಯಾದಗಿರಿ ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ಭಾರೀ ಮಳೆ ಸುರಿದು ಈಗಾಗಲೇ ಸಂಕಷ್ಟಕ್ಕೆ ತುತ್ತಾಗಿವೆ. ಆಯುಧ ಪೂಜೆ,

ದಸರಾ, ದೀಪಾವಳಿಯ ಸಮಯದಲ್ಲಿ ಜನರು ಮತ್ತೆ ತೊಂದರೆ ಅನುಭವಿಸುವಂತೆ ಆಗಬಾರದು. ಆದ್ದರಿಂದ ಪರಿಹಾರ ಕಾರ್ಯಗಳು ನಿರಂತರವಾಗಿ ಮುಂದುವರಿಯಬೇಕು ಎಂದು ಅವರು ಹೇಳಿದ್ದಾರೆ.

ಪರಿಸ್ಥಿತಿಯನ್ನು ಅವಲೋಕಿಸಲು ಮತ್ತು ಪರಿಹಾರ ಕ್ರಮಗಳ ತ್ವರಿತ ಸಮನ್ವಯವನ್ನು ಖಚಿತಪಡಿಸಿಕೊಳ್ಳಲು ನಾನು ಖುದ್ದಾಗಿ ಕಲಬುರಗಿ, ಯಾದಗಿರಿ, ವಿಜಯಪುರ,

ಬೀದರ್ ಮತ್ತು ರಾಯಚೂರು ಜಿಲ್ಲಾಧಿಕಾರಿಗಳೊಂದಿಗೆ ದೂರವಾಣಿಯಲ್ಲಿ ಮಾತುಕತೆ ನಡೆಸಿ ಪರಿಹಾರ ಕಾರ್ಯ, ಆಗಿರುವ ನಷ್ಟದ ಬಗ್ಗೆ ಮಾಹಿತಿ ಪಡೆದು ತುರ್ತು ಕ್ರಮ ವಹಿಸುವಂತೆ ಸೂಚಿಸಿದ್ದೇನೆ ಎಂದು ಕುಮಾರಸ್ವಾಮಿ ತಿಳಿಸಿದ್ದಾರೆ.

## ಕನ್ನಡದ ಹೆಸರಾಂತ ನಾಟಕಕಾರ, ರಂಗಭೂಮಿ ಕಲಾವಿದ ಯಶವಂತ ಸರದೇಶಪಾಂಡೆ ನಿಧನ



**ದಾವಣಗೆರೆ:** ವೃತ್ತಿ ರಂಗಭೂಮಿ ರಂಗಾಯಣ ದಾವಣಗೆರೆಯ ಮೊದಲ ನಿರ್ದೇಶಕರಾಗಿ ಕಾರ್ಯನಿರ್ವಹಿಸಿದ್ದ ಹಿರಿಯ ರಂಗಕರ್ಮಿಗಳು,ನಟರು ಹಾಗೂ ನಿರ್ದೇಶಕರಾಗಿದ್ದ ಶ್ರೀ ಯಶವಂತ ಸರದೇಶಪಾಂಡೆ ರವರು ಇಂದು ನಿಧನರಾಗಿದ್ದು. ಅವರ ನಿಧನಕ್ಕೆ ಶ್ರೀ ಮಲ್ಲಿಕಾರ್ಜುನ ಕಡಕೋಳ ನಿರ್ದೇಶಕರು, ವೃತ್ತಿ ರಂಗಭೂಮಿ ರಂಗಾಯಣ ದಾವಣಗೆರೆ,ರವಿಚಂದ್ರ ವಿಶೇಷಾಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಸಂತಾಪ ಸೂಚಿಸಿ, ಭಗವಂತ ಅವರ ಆತ್ಮಕ್ಕೆ ಶಾಂತಿಯನ್ನು ನೀಡಲೆಂದು ಕೋರಿದರು.

## ವಿಜಯದಶಮಿ ಆಚರಣೆಯ ಮೆರವಣಿಗೆ, ತಾತ್ಕಾಲಿಕ ವಾಹನ ಮಾರ್ಗ ಬದಲಾವಣೆ.

**ದಾವಣಗೆರೆ :** ದಾವಣಗೆರೆ ನಗರದಲ್ಲಿ ಆಚರಿಸುವ ವಿಜಯದಶಮಿ ಹಬ್ಬದ ಮೆರವಣಿಗೆ ಸಂಬಂಧ ಸಾರ್ವಜನಿಕರಿಗೆ ಮತ್ತು ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ಹಾಗೂ ಈ ವೇಳೆ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಕೆಳಕಂಡಂತೆ ವಾಹನ ಸಂಚಾರ ಮಾರ್ಗ ಬದಲಾವಣೆ ಮಾಡಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಆದೇಶಿಸಿರುತ್ತಾರೆ. ಅಕ್ಟೋಬರ್ 2 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಮಾತ್ರ ಕೆಳಕಂಡಂತೆ ಬದಲಾವಣೆ.

1. ಜಗಳೂರು ಕಡೆಯಿಂದ ಬರುವ ಎಲ್ಲಾ ಭಾರಿ ಮತ್ತು ಲಘು ಸರಕು ಸಾಗಾಣಿಕೆ ವಾಹನಗಳು ಬೇತೂರು ಹಳ್ಳದ ಸಮೀಪ ಇರುವ ರಿಂಗ್ ರಸ್ತೆ ಮೂಲಕ ಟಿಪ್ಪು ಸರ್ಕಲ್ ಮುಖಾಂತರ ಚಲಿಸಿ ನಂತರ ಆಖ್ತರ್ ರಜಾ ಸರ್ಕಲ್, ಆರ್,ಟಿ.ಓ ಸರ್ಕಲ್, ಸಂಗೊಳ್ಳಿ ರಾಯಣ್ಣ ಸರ್ಕಲ್ ಮಾರ್ಗವಾಗಿ ಹಳೇ ಪಿ.ಬಿ ರಸ್ತೆ ಮುಖಾಂತರ ಸಂಚರಿಸುವುದು. ಪ್ರಯಾಣಿಕ ವಾಹನಗಳಾದ ಕೆ.ಎಸ್.ಆರ್.ಟಿ.ಸಿ ಮತ್ತು ಖಾಸಗಿ ಬಸ್ ಗಳು ಬೇತೂರು ರಸ್ತೆಯಲ್ಲಿ ನೂತನವಾಗಿ ನಿರ್ಮಿಸಿರುವ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣಕ್ಕೆ ಬಂದು ಪ್ರಯಾಣಿಕರನ್ನು ಇಳಿಸಿ, ಹತ್ತಿಸಿಕೊಂಡು ಅಲ್ಲಿಂದಲೇ ವಾಪಾಸ್ ಹೊರಡುವುದು. ಹಾಗೂ ಆ ದಿನ ಕೆ.ಆರ್.ರಸ್ತೆಯಲ್ಲಿರುವ ಖಾಸಗಿ ಬಸ್ ನಿಲ್ದಾಣಕ್ಕೆ ಶೋಭಾಯಾತ್ರೆ ಮೆರವಣಿಗೆ ಮುಗಿಯುವರೆಗೂ ಯಾವುದೇ ಬಸ್ ಗಳು ಕಾರ್ಯ ನಿರ್ವಹಿಸದಿರುವುದು.
2. ಹರಪನಹಳ್ಳಿ ಕಡೆಯಿಂದ ಕಂಚಿಕೆರೆ ಮಾಗಾನಹಳ್ಳಿ ಮಾರ್ಗವಾಗಿ ದಾವಣಗೆರೆ ನಗರಕ್ಕೆ ಬರುವ ಎಲ್ಲಾ ಭಾರಿ ಮತ್ತು ಲಘು ಸರಕು ಸಾಗಾಣಿಕ ವಾಹನಗಳು

ಮಾಗಾನಹಳ್ಳಿ ರಸ್ತೆಯ ಹಳ್ಳದ ಹತ್ತಿರ ಇರುವ ಚೌಡಮ್ಮ ದೇವಸ್ಥಾನ ಕ್ರಾಸ್ ನಿಂದ ಬೂದಾಳ್ ರಸ್ತೆ ಕಡೆಗೆ ಚಲಿಸಿ ನಂತರ ಆರ್.ಟಿ.ಓ ಸರ್ಕಲ್ ಸಂಗೊಳ್ಳಿ ರಾಯಣ್ಣ ಸರ್ಕಲ್ ಮಾರ್ಗವಾಗಿ ಹಳೇ ಪಿ.ಬಿ ರಸ್ತೆಯಲ್ಲಿ ಸಂಚರಿಸುವುದು. ಅದೇ ರೀತಿ ಕೆ.ಎಸ್. ಆರ್.ಟಿ.ಸಿ ಮತ್ತು ಖಾಸಗಿ ಬಸ್ ಗಳು ಟಿಪ್ಪು ಸರ್ಕಲ್ ನಿಂದ ರಿಂಗ್ ರಸ್ತೆ ಮೂಲಕ ಬೇತೂರು ರಸ್ತೆಯಲ್ಲಿ ನೂತನವಾಗಿ ನಿರ್ಮಿಸಿರುವ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣಕ್ಕೆ ಬಂದು, ಇಲ್ಲಿಂದಲೇ ವಾಪಾಸ್ ಹೊರಡುವುದು.

3. ಮಾಗಾನಹಳ್ಳಿ ರಸ್ತೆಯ ಟಿಪ್ಪು ಸರ್ಕಲ್ ಕಡೆಯಿಂದ ಅರಳೀಮರ ಸರ್ಕಲ್ ನಂತರ ಕೆ.ಆರ್. ರಸ್ತೆ ಮುಖಾಂತರ ಅಶೋಕ ಎಲ್.ಸಿ ಗೇಟ್ ಕಡೆಗೆ ಹಾಗೂ ಅಶೋಕ ಎಲ್.ಸಿ ಗೇಟ್ ಕಡೆಯಿಂದ ಅರಳೀಮರ ಸರ್ಕಲ್ ನಂತರ ಟಿಪ್ಪು ಸರ್ಕಲ್ ಹಾಗೂ ವೆಂಕಟೇಶ್ವರ ಸರ್ಕಲ್ ಕಡೆಗೆ ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 04.00 ಗಂಟೆಯವರಿಗೆ ಯಾವುದೇ ಭಾರಿ ಹಾಗೂ ಲಘು ಸರಕು ಹಾಗೂ ಪ್ರಯಾಣಿಕ ವಾಹನಗಳು ಸಂಚರಿಸದಂತೆ ನಿಷೇಧ ಮಾಡಿದೆ.
4. ಅಗ್ನಿ ಶಾಮಕಠಾಣೆ ಪ್ಲೈ ಓವರ್ ಕಡೆಯಿಂದ ಎ.ಪಿ.ಎಂ.ಸಿ ಲಿಂಕ್ ರಸ್ತೆ ಮೂಲಕ ವೆಂಕಟೇಶ್ವರ ಸರ್ಕಲ್ ಕಡೆಗೆ ಬರುವ ಎಲ್ಲಾ ಭಾರಿ ಮತ್ತು ಲಘು ಸರಕು ಸಾಗಾಣಿಕೆ ವಾಹನಗಳು ಮತ್ತು ಪ್ರಯಾಣಿಕ ವಾಹನಗಳು ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 04.00 ಗಂಟೆಯವರಿಗೆ ಮಟ್ಟಿಕಲ್ ಮುಖಾಂತರ ವೆಂಕಟೇಶ್ವರ ಸರ್ಕಲ್ ಕಡೆಗೆ ಬಾರದೇ ಖಾಸಗಿ ಬಸ್ಸುಗಳು ಹಳೇ ಪಿ.ಬಿ ರಸ್ತೆಯಲ್ಲಿ ಬರುವ ಖಾಸಗಿ ಬಸ್ ನಿಲ್ದಾಣದಿಂದ ಮತ್ತು ಕೆ.ಎಸ್. ಆರ್.ಟಿ.ಸಿ ಬಸ್ಸುಗಳ

ು ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಿಂದ ಡಿ.ಸಿಎಂ ಅಂಡರ್ ಬ್ರಿಡ್ಜ್ ಮೂಲಕ ಆವರಗೆರೆ ಮಾರ್ಗವಾಗಿ ಬಾಡಾ ಕ್ರಾಸ್ ಮೂಲಕ ಎನ್.ಹೆಚ್ ರಸ್ತೆಯಲ್ಲಿ ಸಂಚರಿಸುವುದು.

5. ವೆಂಕಟೇಶ್ವರ ಸರ್ಕಲ್ ನಿಂದ ಎ.ಪಿ.ಎಂ.ಸಿ ಪ್ಲೈ ಓವರ್ ವರೆಗೆ ವೆಂಕಟೇಶ್ವರ ಸರ್ಕಲ್ ನಿಂದ ಅರಳೀಮರ ಸರ್ಕಲ್ ವರೆಗೆ ಕೆ.ಆರ್ ರಸ್ತೆ ಗಣೇಶ ಗುಡಿ ಕ್ರಾಸ್ ನಿಂದ ಹಾಸಬಾವಿ ಸರ್ಕಲ್ ವರೆಗೆ , ಹಾಸಬಾವಿ ಸರ್ಕಲ್ ನಿಂದ ಗ್ಯಾಸ್ ಕಟ್ಟೆ ಸರ್ಕಲ್ ವರೆಗೆ, ಗ್ಯಾಸ್ ಕಟ್ಟೆ ಸರ್ಕಲ್ ನಿಂದ ಕಾಳಿಕದೇವಿ ರಸ್ತೆಯವರಿಗೆ , ಕಾಳಿಕದೇವಿ ರಸ್ತೆಯಿಂದ ಹಗೇದಿಬ್ಬ ಸರ್ಕಲ್ ಮಾರ್ಗವಾಗಿ ದುರ್ಗಾಂಬಿಕಾ ದೇವಸ್ಥಾನದವರೆಗೆ, ದುರ್ಗಾಂಬಿಕಾ ದೇವಸ್ಥಾನದಿಂದ ಹೊಂಡದ ಸರ್ಕಲ್ ಮಾರ್ಗವಾಗಿ ಅರುಣ ಎಲ್.ಸಿ ಗೇಟ್ ವರೆಗೆ ಯಾವುದೇ ರೀತಿಯ ಭಾರಿ ಮತ್ತು ಲಘು ವಾಹನಗಳು ಸಂಚರಿಸದಂತೆ ಹಾಗೂ ಯಾವುದೇ ರೀತಿಯ ವಾಹನಗಳು ನಿಲುಗಡೆಯಾಗದಂತೆ ನಿಷೇಧಿಸಿದೆ.

ದಿನಾಂಕ: 02.10.2025 ರಂದು ಮಧ್ಯಾಹ್ನ 02.00 ಗಂಟೆಯಿಂದ ರಾತ್ರಿ 09.00 ಗಂಟೆಯವರಿಗೆ ಮಾತ್ರ ಈ ಕೆಳಕಂಡಂತೆ ವಾಹನ ಸಂಚಾರ ಮಾರ್ಗ ಬದಲಾವಣೆ ಮಾಡಲಾಗಿದೆ.

1. ಹರಿಹರ ಕಡೆಯಿಂದ ಬಾತಿ ಮೂಲಕ ಹಳೆ ಪಿ.ಬಿ. ರಸ್ತೆ ಮಾರ್ಗವಾಗಿ ಬರುವ ಎಲ್ಲಾ ಭಾರಿ ವಾಹನಗಳು ಅಂದರೆ ಸರಕು ಲಾರಿಗಳು,

ಕೆ.ಎಸ್.ಆರ್.ಟಿ.ಸಿ ಮತ್ತು ಖಾಸಗಿ ಬಸ್ ಗಳು ಹರಿಹರ ನಗರದಿಂದ ದಾವಣಗೆರೆ ಕಡೆಗೆ ಬರುವ ಹಳೇ ಪಿ.ಬಿ ರಸ್ತೆಗೆ ಬಾರದೇ ಹರಿಹರದಿಂದ ನೇರವಾಗಿ ಶಿವಮೊಗ್ಗ ಬೈಪಾಸ್ ಮುಖಾಂತರ ಹೊಸ ಎನ್.ಹೆಚ್–48 ರಸ್ತೆ ಮೂಲಕ ಬಾಡಾ ಕ್ರಾಸ್ ಮುಖಾಂತರ ಅವರಗೆರೆ ಮಾರ್ಗವಾಗಿ ದಾವಣಗೆರೆ ನಗರಕ್ಕೆ ಬಂದು ಸರಕು ಲಾರಿಗಳು ಡಿಸಿಎಂ ಅಂಡರ್ ಪಾಸ್ ಹತ್ತಿರದ ದನದ ಮಾರ್ಕೆಟ್ ಕ್ರಾಸ್ ಮುಖಾಂತರ ಎಪಿಎಂಸಿಗೆ ಹೋಗುವುದು. ಕೆ.ಎಸ್.ಆರ್.ಟಿ.ಸಿ ಬಸ್ ಗಳು ಮೇಲ್ಕಂಡ ಮಾರ್ಗದಲ್ಲಿ ಬಾಡಾ ಕ್ರಾಸ್ ಮುಖಾಂತರ ಅವರಗೆರೆ ಮಾರ್ಗವಾಗಿ ನೂತನ ಕೆ.ಎಸ್. ಆರ್.ಟಿ.ಸಿ ಬಸ್ ನಿಲ್ದಾಣಕ್ಕೆ ಬಂದು ನಂತರ ಅದೇ ಮಾರ್ಗವಾಗಿ ವಾಪಸ್ಸು ಬೆಂಗಳೂರು,
ಬೆಳಗಾವಿ ಕಡೆಗೆ ಹೋಗುವುದು. ನಂತರ ಖಾಸಗಿ ಬಸ್ ಗಳು ಮೇಲ್ಕಂಡ ಮಾರ್ಗದಲ್ಲಿ ಬಂದು ಹಳೇ ಪಿ.ಬಿ. ರಸ್ತೆಯ ಖಾಸಗಿ ಬಸ್ ನಿಲ್ದಾಣಕ್ಕೆ ಬಂದು ಜನರನ್ನು ಇಳಿಸಿ, ಹತ್ತಿಸಿಕೊಂಡು ವಾಪಾಸ್ ಅದೇ ಮಾರ್ಗದಲ್ಲಿ ಸಂಚರಿಸುವುದು.

2. ಚಿತ್ರದುರ್ಗದ ಕಡೆಯಿಂದ ಬರುವ ಎಲ್ಲಾ ಭಾರಿ ಮತ್ತು ಲಘು ಸರಕು ಸಾಗಾಣಿಕ ವಾಹನಗಳು ಡಿಸಿಎಂ ಅಂಡರ್ ಪಾಸ್ ಹತ್ತಿರದ ದನದ ಮಾರ್ಕೆಟ್ ಕ್ಲಾಸ್ ಮುಖಾಂತರ ಎಪಿಎಂಸಿಗೆ ಹೋಗುವುದು. ಕೆ.ಎಸ್.ಆರ್.ಟಿ.ಸಿ
ಬಸ್ ಗಳು ಮೇಲ್ಕಂಡ ಮಾರ್ಗದಲ್ಲಿ ಬಾಡಾ ಕ್ರಾಸ್ ಮುಖಾಂತರ ಅವರಗೆರೆ ಮಾರ್ಗವಾಗಿ ನೂತನ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣಕ್ಕೆ ಬಂದು ನಂತರ ಅದೇ ಮಾರ್ಗವಾಗಿ ವಾಪಸ್ಸು ಬೆಂಗಳೂರು, ಬೆಳಗಾವಿ ಕಡೆಗೆ ಹೋಗುವುದು. ಖಾಸಗಿ ಬಸ್ ಗಳು ಮೇಲ್ಕಂಡ ಮಾರ್ಗದಲ್ಲಿ ಖಾಸಗಿ ಬಸ್ ನಿಲ್ದಾಣಕ್ಕೆ ಬಂದು ಜನರನ್ನು ಇಳಿಸಿ, ಹತ್ತಿಸಿಕೊಂಡು ವಾಪಾಸ್ ಅದೇ ಮಾರ್ಗದಲ್ಲಿ ಸಂಚರಿಸುವುದು.

3. ಹಳೇ ಪಿ.ಬಿ ರಸ್ತೆಯ ಸಂಗೊಳ್ಳಿ ರಾಯಣ್ಣ ಸರ್ಕಲ್ ನಿಂದ ಎಂ.ಜಿ.ಸರ್ಕಲ್ ವರೆಗೆ ಯಾವುದೇ ರೀತಿಯ ಭಾರಿ ಮತ್ತು ಲಘು ಸರಕು ಸಾಗಾಣಿಕ ವಾಹನಗಳು ಮತ್ತು ಭಾರಿ ಮತ್ತು ಲಘು ಪ್ರಯಾಣಿಕರ ವಾಹನಗಳು ಸಂಚರಿಸದಂತೆ ನಿಷೇಧಿಸಿದೆ.

# "ಬಿಗ್ ಬಾಸ್ ಗೆ ಬೆಣ್ಣೆನಗರಿ ಬಾಡಿ ಬಿಲ್ಡರ್ ಕರಿಬಸಪ್ಪ ಎಲ್ ಎಂ"






ಬಿಗ್ ಬಾಸ್ ಒಂದಲ್ಲಾ ಒಂದು ಸದ್ದು ಮಾಡುತ್ತಲೇ ಇದೆ, ಈ ಬಾರಿಯೂ ಬಿಗ್ ಬಾಸ್ ಸಖತ್ ಜೋಷ್ ನೊಂದಿಗೆ ಆರಂಭವಾಗಿದೆ. ವಿಶೇಷ ಎಂದರೆ ದಾವಣಗೆರೆಯ ಟೈಗರ್ ಎಂದೇ ಖ್ಯಾತಿಯಾದ ಎಲ್ ಎಂ ಹನುಮಂತಪ್ಪ ಅವರ ಸಹೋದರ ಎಲ್ ಎಂ ಕರಿಬಸಪ್ಪ ಅವರು ಬಿಗ್ ಬಾಸ್ ಗೆ ಆಯ್ಕೆಯಾಗಿರುವುದು. ಬಾಲ್ಯದಿಂದಲೇ ಕಠಿಣ ಪರಿಶ್ರಮದಿಂದ ಬೆಳದ ಕರಿಬಸಪ್ಪ ಅಂತಾರಾಷ್ಟ್ರೀಯ ಮಟ್ಟದಲ್ಲಿ ಬಾಡಿ ಬಿಲ್ಡರ್ ಸ್ಪರ್ಧೆಯಲ್ಲಿ ಭಾಗವಹಿಸಿ ಜನಮನ್ನಣೆಗಳಿಸಿದ್ದಾರೆ. ದಾವಣಗೆರೆಯಲ್ಲಿ ಹುಟ್ಟಿಬೆಳೆದ ಇವರು ಬೆಂಗಳೂರಿನಲ್ಲಿ ತನ್ನ ಸ್ವಂತ ಪರಿಶ್ರಮದಿಂದ ಬದುಕು ಕಟ್ಟಿಕೊಂಡಿದ್ದಾರೆ. 53 ನೇ ವಯಸ್ಸಲ್ಲಿಯೂ ಯುವಕರಿಗೂ ನಾಚುವಂತ ಆರೋಗ್ಯ ದೇಹವನ್ನು ಹೊಂದಿದ್ದಾರೆ. ತನ್ನ ದೇಹದಿಂದಲೇ ರಾಷ್ಟ್ರಮಟ್ಟದ ಪ್ರಶಸ್ತಿಗಳು ಗೆದ್ದುಕೊಂಡು ಇಂದು ಅವರ ಸಾಧನೆ ಬಿಗ್ ಬಾಸ್ ಮನೆವರೆಗೂ ತಂದು ನಿಲ್ಲಿಸಿದೆ.

ಸಾಮಾಜಿಕ ಜಾಲತಾಣಗಳಲ್ಲಿ ಈಗಾಗಲೇ ಪ್ರಖ್ಯಾತಿ ಹೊಂದಿರುವ ಕರಿಬಸಪ್ಪ ಅವರು ಪೊಲೀಸರಿಗೆ ಜಿಮ್ ತರಬೇತಿ ನೀಡುತ್ತಿದ್ದಾರೆ. ಈ ಮೂಲಕ ಪೊಲೀಸರಿಗೆ ದೇಹದ ಆರೋಗ್ಯ ಕುರಿತು ವಿಶೇಷವಾಗಿ ತರಬೇತಿ ನೀಡುವ ಮೂಲಕ ಇಲಾಖೆಯಲ್ಲೂ ಅವಿನಾಭಾವ ಸಂಬಂಧ ಹೊಂದಿದ್ದಾರೆ. ಕರಿಬಸಪ್ಪ ಅವರ ವಿಶೇಷ ಗುಣಗಳೆಂದರೆ ಸದಾ ಅವರು ಮತ್ತೊಬ್ಬರನ್ನು ಖುಷಿಪಡಿಸುತ್ತಾರೆ, ಬೇರೆಯವರಿಗೆ ಒಳ್ಳೆಯದನ್ನೇ ಬಯಸುತ್ತಾರೆ. ತಮ್ಮ ಸಾಮಾಜಿಕ ಜಾಲತಾಣಗಳ ಮೂಲಕ ಮತ್ತೊಬ್ಬರಿಗೆ ಸ್ಫೂರ್ತಿಯಾಗಿದ್ದಾರೆ.

**ಬಾಲ್ಯಜೀವನ**

ತಂದೆ ಪೌರಕಾರ್ಮಿಕರಾಗಿದ್ದ ಸಂದರ್ಭದಲ್ಲಿ ಎಲ್ ಎಂ ಕರಿಬಸಪ್ಪ ಅವರು ತಂದೆಯೊಂದಿಗೆ ನಿತ್ಯ ಮುಂಜಾನೆ ಪೌರ ಕಾರ್ಮಿರಾಗಿಯೂ ಕೆಲಸ ಮಾಡಿದ್ದಾರೆ. ಪೌರ ಕಾರ್ಮಿಕ ಕೆಲಸ ಮಾಡಿ ಶಾಲಾ–ಕಾಲೇಜುಗೆ ಹೋಗಿ ಕಷ್ಟದ ಜೀವನದಲ್ಲಿ ತನ್ನ ವಿದ್ಯಾಭ್ಯಾಸ ಮಾಡಿದ್ದಾರೆ. ಕಡು ಬಡತನದಲ್ಲಿ ಅರಳಿದ ಪ್ರತಿಭೆ ಎಂದರೂ ತಪ್ಪಾಗುವುದಿಲ್ಲ. ತನ್ನ ಕಠಿಣ ಪರಿಶ್ರಮದಿಂದ ದೇಹ ದಾರ್ಢ್ಯ ಮೂಲಕ ಗುರುತಿಸಿಕೊಂಡಿದ್ದಾರೆ. ರಾಜ್ಯದ ನಾನಾ ಭಾಗದ ಸುಮಾರು 20 ಕ್ಕೂ ಅಧಿಕ ದೇಹ ದಾರ್ಢ್ಯ ಸ್ಪರ್ಧಿಗಳಿಗೆ ತರಬೇತಿ ನೀಡಿ ರಾಷ್ಟ್ರಮಟ್ಟದಲ್ಲಿ ಗುರುತಿಸುವಂತೆ ಮಾಡಿದ ಹೆಗ್ಗಳಿಗೆ ಇವರಿಗೆ ಸಲ್ಲುತ್ತದೆ.

**"ಇಸ್ಲಾಂಬಾದ್ ಲ್ಲಿ ರಾಷ್ಟ್ರಗೀತಿ"**

ಕಾರ್ಗಿಲ್ ಯುದ್ಧ ಬಳಿಕ ಸ್ನೇಹಕ್ಕಾಗಿ ಇಸ್ಲಾಂಬಾದ್ ನಲ್ಲಿ ನಡೆದ ಇಂಡೋ–ಪಾಕ್ ದೇಹ ದಾರ್ಢ್ಯ ಸ್ಪರ್ಧೆಯಲ್ಲಿ ವಿಜೇತರಾಗಿ ಅಲ್ಲಿ ರಾಷ್ಟ್ರಗೀತೆ ಹಾಡಿಸಿದಂತವರು ಕರಿಬಸಪ್ಪ ನವರು, ಈ ಎಲ್ಲಾ ಸಾಧನೆಗಳಿಗೆ ಕಾರಣ ದಾವಣಗೆರೆಯ ಬೀರಲಿಂಗೇಶ್ವರ ವ್ಯಾಯಾಮ ಶಾಲೆ, ಹೀಗಾಗಿ ಕರಿಬಸಪ್ಪ ಅವರು ದಾವಣಗೆರೆಗೆ ಬಂದರೆ ಮೊದಲು ಬೀರಲಿಂಗೇಶ್ವರ ವ್ಯಾಯಾಮಾ ಶಾಲೆಗೆ ಮೊದಲು ಭೇಟಿ ನಮಸ್ಕರಿಸಿ ನಂತರ ಮನೆಗೆ ಹೋಗುತ್ತಾರೆ. ಇದು ಅವರಲ್ಲಿರುವ ಒಳ್ಳೆ ಸಂಸ್ಕೃತಿ ಎಂದರೂ ತಪ್ಪಲ್ಲ. ನಂತರ ಇವರ ಅಭಿಮಾನಿಗಳು, ಸ್ನೇಹಿತರು ಮತ್ತು ಹಿತೈಷಿಗಳೊಂದಿಗೆ ವಿಶೇಷವಾಗಿ ಕಾಲಕಳೆಯುತ್ತಾರೆ, ರಂಜಿಸುವ ಮೂಲಕ ಪ್ರೀತಿಗೆ ಪಾತ್ರರಾಗುತ್ತಾರೆ. ಕೇವಲ ಬಾಡಿ ಬಿಲ್ಡರ್ ಮಾತ್ರ ಅಲ್ಲ ಸೂಪರ್ ಡ್ಯಾನ್ಸರ್ ಕೂಡ ಹೌದು, ಹಾಡು ಹೇಳುವ ಮೂಲಕ ನೃತ್ಯ ಮಾಡಿ ಎಲ್ಲರ ಪ್ರೀತಿಗಳಿಸಿದ್ದಾರೆ. ಇದೀಗ ಬಿಗ್ ಬಾಸ್ ಗೆ ಆಯ್ಕೆಯಾಗಿರುವುದಕ್ಕೆ ಅವರ ಸಹೋದರ ಪುತ್ರ ಮಹಾನಗರ ಪಾಲಿಕೆ ಸದಸ್ಯರು ಮತ್ತು ಕಾಂಗ್ರೆಸ್ ಮುಖಂಡರಾದ ಸಾಗರ್ ಎಲ್ ಎಂ ಹೆಚ್ ಕೂಡ ಸಂತಸ ವ್ಯಕ್ತಪಡಿಸಿದ್ದು, ಅವರ ಸಾಧನೆ ಪರಿಶ್ರಮ ಇಲ್ಲಿಯವರೆಗೂ ತಂದು ನಿಲ್ಲಿಸಿದೆ, ಅವರ ಬಿಗ್ ಬಾಸ್ ಮನೆಯಲ್ಲೂ ಒಳ್ಳೆ ಹೆಸರು ಮಾಡಲಿ ಎಂದು ಶುಭ ಕೋರಿದ್ದಾರೆ, ಅಷ್ಟೇಅಲ್ಲಾ, ಇಡೀ ದಾವಣಗೆರೆ ಜಿಲ್ಲೆ ಜನರು ಸಹ ಎಲ್ ಎಂ ಕರಿಬಸಪ್ಪ ಅವರಿಗೆ ಆಲ್ ದಿ ಬೆಸ್ಟ್ ತಿಳಿಸಿದ್ದಾರೆ.

# ಪಶುವೈದ್ಯರು ಇನ್ನೂ ಹೆಚ್ಚಿನ ಅಧ್ಯಯನ ಮಾಡಿ ಸಾಹಿತ್ಯ ಲೋಕಕ್ಕೆ ಹತ್ತಿರವಾದರೆ ಸಮಾಜಕ್ಕೆ ಉತ್ತಮ ಕೊಡುಗೆ ನೀಡಬಹುದು – ಟಿ.ಪಿ.ಅಶೋಕ್



**ಶಿವಮೊಗ್ಗ:** ಮೂಕಪ್ರಾಣಿಗಳ ವೈದ್ಯರಾದ ಪಶುವೈದ್ಯರು ದಿನನಿತ್ಯ ಪಶುಗಳು ಮತ್ತು ಮನುಷ್ಯರ ಜೊತೆ ಬೆರೆಯುವುದರಿಂದ ಇವರ ಸಾಹಿತ್ಯವು ಅತ್ಯಂತ ಶ್ರೇಷ್ಠ ಮಟ್ಟಕ್ಕೆ ಬೆಳೆಯವ ಮಟ್ಟದ್ದು ಮತ್ತು ಈ ಕುರಿತು ಪಶುವೈದ್ಯರು ಇನ್ನೂ ಹೆಚ್ಚಿನ ಅಧ್ಯಯನ ಮಾಡಿ ಸಾಹಿತ್ಯ ಲೋಕಕ್ಕೆ ಹತ್ತಿರವಾದರೆ ಸಮಾಜಕ್ಕೆ ಉತ್ತಮ ಕೊಡುಗೆ ನೀಡಬಹುದು ಎಂದು ವಿಮರ್ಶಕರು ಹಾಗೂ ಸಾಹಿತಿ ಟಿ.ಪಿ.ಅಶೋಕ್ ಹೇಳಿದರು.

ಅವರು ಸೆ. 27 ರಂದು ಕನ್ನಡ ಪಶುವೈದ್ಯಕೀಯ ಸಾಹಿತ್ಯ ಪರಿಷತ್ (ರಿ), ಕರ್ನಾಟಕ, ಕರ್ನಾಟಕ ಪಶುವೈದ್ಯಕೀಯ ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ ಮತ್ತು ಪಶುವೈದ್ಯಕೀಯ ಮಹಾವಿದ್ಯಾಲಯ, ಶಿವಮೊಗ್ಗ ಇವರ ಸಹಯೋಗದಲ್ಲಿ ಪಶುವೈದ್ಯಕೀಯ ಮಹಾವಿದ್ಯಾಲಯ, ಶಿವಮೊಗ್ಗದಲ್ಲಿ ಕನ್ನಡ ಪಶುವೈದ್ಯಕೀಯ ಸಾಹಿತ್ಯ ಪರಿಷತ್ ವತಿಯಿಂದ 2 ದಿನಗಳ ರಾಜ್ಯಮಟ್ಟದ "ಕನ್ನಡ ಭಾಷೆ, ಸಾಹಿತ್ಯ ಮತ್ತು ಪಶುವೈದ್ಯಕೀಯ ವಿಜ್ಞಾನ" ವಿಷಯದ ಬಗ್ಗೆ ಹಮ್ಮಿಕೊಂಡಿದ್ದ ಸಾಹಿತ್ಯ ಕಮ್ಮಟ–2025ವನ್ನು ಉದ್ಘಾಟಿಸಿ ಮಾತನಾಡಿದರು.ಡಾ: ಎನ್.ಬಿ.ಶ್ರೀಧರ ಇವರ ನವಕರ್ನಾಟಕ ಪ್ರಕಾಶನದ ಕೃತಿ "ಪಶುವೈದ್ಯನ ಪಯಣ: ಪಶುವೈದ್ಯಕೀಯ ವೃತ್ತಿಯ ಅನುಭವಗಳು" ಇದನ್ನು ಬಿಡುಗಡೆ ಮಾಡಲಾಯಿತು.ಪಶುವೈದ್ಯಕೀಯ ಮಹಾವಿದ್ಯಾಲಯದ ಪ್ರಭಾರಿ ಡೀನ್, ಡಾ ತಿರುಮಲೇಶ್ ಮಾತನಾಡುತ್ತಾ ಕನ್ನಡ ಭಾಷೆಯ ಗರಿಮೆ, ಪಶುವೈದ್ಯಕೀಯ ವೃತ್ತಿಯವರು ಇದನ್ನು ಅಳವಡಿಸಿಕೊಳ್ಳುವ ವಿಧಾನಗಳ ಮಹತ್ವ ತಿಳಿಸಿದರು.ಕನ್ನಡ ಪಶುವೈದ್ಯಕೀಯ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಡಾ: ಎಸ್. ಬಿ.ರವಿಕುಮಾರ್ ಮಾತನಾಡಿ ಪಶುವೈದ್ಯರಿಗೆ ದಿನನಿತ್ಯದ ವೃತ್ತಿಯ ಜೀವನದಲ್ಲಿ ಜನ ಮತ್ತು ಪಶುಗಳ ನಿಕಟ ಸಂಪರ್ಕವಿರುವುದರಿಂದ ಸಾಹಿತ್ಯಕ್ಕೆ ವಸ್ತುಗಳು ಲಭ್ಯತೆ ಸುಲಭ, ಹೆಚ್ಚಿನ ಪಶುವೈದ್ಯರು ಬರವಣಿಗೆಯಲ್ಲಿ ತೊಡಗಿಸಿಕೊಂಡು ವೃತ್ತಿಯ ಕುರಿತು ಜನಮಾನಸ ತಲುಪಬೇಕೆಂದರು. ಸಮಾರಂಭದಲ್ಲಿ ಶಿವಮೊಗ್ಗದ ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕರಾದ ಡಾ:ಬಾಬುರತ್ನ, ಪಶುವೈದ್ಯಕೀಯ ಸಾಹಿತಿ ಡಾ: ರಮಾನಂದ ಕಾರ್ಯಕ್ರಮದ ಸಂಘಟಕರಾದ ಡಾ: ಎನ್.ಬಿ.ಶ್ರೀಧರ ಮತ್ತು ಡಾ: ರವಿಕುಮಾರ್,ಪಿ. ಇವರು ಹಾಗೂ ರಾಜ್ಯದ ವಿವಿಧ ಭಾಗಗಳಿಂದ ಬಂದ 48 ಪಶುವೈದ್ಯಾಧಿಕಾರಿಗಳು ಮತ್ತು ಪಶುವೈದ್ಯಕೀಯ ಮಹಾವಿದ್ಯಾಲಯ, ಶಿವಮೊಗ್ಗದ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು ಭಾಗವಹಿಸಿದ್ದರು.ಈ ಸಮಾವೇಶದಲ್ಲಿ ಒಟ್ಟು 11 ವಿವಿಧ ವಿಚಾರಗೋಷ್ಠಿಗಳಿದ್ದು "ಪಶುವೈದ್ಯಕೀಯ ವಿದ್ಯಾರ್ಥಿ ಗೋಷ್ಠಿ" ಈ ಕಾರ್ಯಕ್ರಮದ ವಿಶೇಷವಾಗಿತ್ತು. ಡಾ: ಅರುಣ್ ಖರಾಟೆಯವರ ಚಿತ್ರಕಲಾ ಪ್ರದರ್ಶನ ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿತ್ತು.

# ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ : ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ಚಿತ್ರದುರ್ಗ:** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಮುಸಲ್ಮಾನರು, ಜೈನ್, ಆಂಗ್ಲೋ ಇಂಡಿಯನ್ಸ್, ಬೌದ್ದರು, ಸಿಖ್ಖರು, ಹಾಗೂ ಪಾರ್ಸಿ ಸೇರಿದಂತೆ ವಿವಿಧ ಅಲ್ಪಸಂಖ್ಯಾತ ಜನಾಂಗದವರಿಗೆ ಹಲವು ಯೋಜನೆಯಡಿ ಸಾಲ ಸೌಲಭ್ಯ ನೀಡಲು ಅರ್ಜಿ ಆಹ್ವಾನಿಸಲಾಗಿದೆ.
ಶ್ರಮ ಶಕ್ತಿ ಸಾಲ, ಸ್ವಾವಲಂಬಿ ಸಾರಥಿ, ವೃತ್ತಿ ಪ್ರೋತ್ಸಹ, ವಿದೇಶಿ ವ್ಯಾಸಂಗ ಸಾಲ, ಸಾಂತ್ವಾನ, ಮಹಿಳಾ ಸ್ವ ಸಹಾಯ ಗುಂಪುಗಳಿಗೆ ಸಹಾಯಧನ, ವ್ಯಾಪಾರ ಅಥವಾ ಉದ್ಯಮಿಗಳಿಗೆ ನೇರಸಾಲ ಯೋಜನೆಗಳಡಿ ಬ್ಯಾಂಕ್ ಗಳ ಸಹಯೋಗದೊಂದಿಗೆ ಸಾಲ ಸೌಲಭ್ಯ ನೀಡಲಾಗುವುದು.ಅರ್ಜಿ ಸಲ್ಲಿಸುವವರು ರಾಜ್ಯದ ಖಾಯಂ ನಿವಾಸಿಯಾಗಿದ್ದು, ಮತೀಯ ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿರಬೇಕು. ಶ್ರಮಶಕ್ತಿ ಸಾಲ ಯೋಜನೆಗೆ ರೂ.3,50,000/– ವೃತ್ತಿ ಪ್ರೋತ್ಸಾಹ ಯೋಜನೆಗೆ ನಗರ ಪ್ರದೇಶದವರಿಗೆ ರೂ.10,3,000/– ಗ್ರಾಮೀಣ ಪ್ರದೇಶದವರಿಗೆ ರೂ.8,00,000/– ಹಾಗೂ ಇತರೆ ಯೋಜನೆಗೆ ರೂ.6,00,000/– ಕುಟುಂಬದ ವಾರ್ಷಿಕ ಆದಾಯ ಮಿತಿ ಹೊಂದಿರಬೇಕು. 18 ರಿಂದ 55 ವರ್ಷದೊಳಗಿರಬೇಕು. ಆಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿ, ವಾಸದ ದೃಢೀಕರಣ ಪತ್ರ ಹಾಗೂ ಪಡಿತರ ಚೀಟಿಯನ್ನು ಹೊಂದಿರುವುದರ ಜೊತೆಗೆ, ಐ.ಎಫ್.ಎಸ್.ಸಿ ಕೋಡ್ ಹೊಂದಿರುವ ಬ್ಯಾಂಕ್‍ಗಳಲ್ಲಿ ಬ್ಯಾಂಕ್ ಖಾತೆ 18 ರಿಂದ 55 ವರ್ಷದೊಳಗಿರಬೇಕು. ಆಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿ, ವಾಸದ ದೃಢೀಕರಣ ಪತ್ರ ಹಾಗೂ ಪಡಿತರ ಚೀಟಿಯನ್ನು ಹೊಂದಿರುವುದರ ಜೊತೆಗೆ, ಐ.ಎಫ್.ಎಸ್.ಸಿ ಕೋಡ್ ಹೊಂದಿರುವ ಬ್ಯಾಂಕ್‍ಗಳಲ್ಲಿ ಬ್ಯಾಂಕ್ ಖಾತೆ ಇರಬೇಕು. ಅರ್ಜಿದಾರರ ಕುಟುಂಬದ ಯಾವುದೇ ಸದಸ್ಯರು ಕೇಂದ್ರ ಅಥವಾ ರಾಜ್ಯ ಸರ್ಕಾರಿ ನೌಕರರಾಗಿರಬಾರದು. ನಿಗದ ವಿವಿಧ ಯೋಜನೆಗಳಡಿಯಲ್ಲಿ ಈಗಾಗಲೆ ಸಾಲಸೌಲಭ್ಯ ಪಡೆದಿರಬಾರದು.ಅರ್ಜಿ ಸಲ್ಲಿಸಲು ಅಕ್ಟೋಬರ್ 16 ಕೊನೆಯ ದಿನವಾಗಿದೆ. ವ್ಬ್ ಸೈಟ್ www.kmdconline.karnataka.gov.in ಮೂಲಕ ಅರ್ಜಿ ಸಲ್ಲಿಸಿ, ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಪ್ರತಿಯನ್ನು ನಿಗಮ ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಕಚೇರಿ ಸಂಪರ್ಕಿಸುವಂತೆ ತಿಳಿಸಿದೆ.

# 22ನೇ ವರ್ಷದ ಸರ್ವಸದಸ್ಯರ ಮಹಾಸಭೆ

**ತುಮಕೂರು:** ನಗರದ ಶ್ರೀ ಸಿದ್ಧಗಂಗಾ ಕಲಾ ವಿಜ್ಞಾನ ಮತ್ತು ವಾಣಿಜ್ಯ ಕಾಲೇಜಿನ ಹಳೆಯ ವಿದ್ಯಾರ್ಥಿಗಳ ಸಂಘದ 22ನೇ ವರ್ಷದ ಸರ್ವ ಸದಸ್ಯರ ಮಹಾಸಭೆ ಹಾಗೂ ಸನ್ಮಾನ ಸಮಾರಂಭವನ್ನು ದಿನಾಂಕ:28–09–2025ನೇ ಭಾನುವಾರ ಕಾಲೇಜಿನ ಆವರಣದಲ್ಲಿರುವ ಡಾ॥ ಶ್ರೀ.ಶ್ರೀ.ಶಿವಕುಮಾರಸ್ವಾಮೀಜಿಗಳ ಸಭಾಂಗಣದಲ್ಲಿ ಬೆಳಿಗ್ಗೆ:10–30 ಗಂಟೆಗೆ ಸಂಘದ ಅಧ್ಯಕ್ಷರಾದ ಡಾ॥ ಟಿ.ಬಿ.ನಿಜಲಿಂಗಪ್ಪ ರವರ ಅಧ್ಯಕ್ಷತೆಯಲ್ಲಿ ಏರ್ಪಡಿಸಲಾಗಿದೆ. ಮುಖ್ಯ ಅತಿಥಿಗಳಾಗಿ ಶ್ರೀ ಸಿದ್ಧಗಂಗಾ ಕಲಾ ವಿಜ್ಞಾನ ಮತ್ತು ವಾಣಿಜ್ಯ ಕಾಲೇಜಿನ ನಿವೃತ್ತ ಪ್ರಾಂಶುಪಾಲರಾದ ಪ್ರೊ. ಆರ್.ಎ.ಪೀರ್ ಸಾಬ್ ಗೋಲ್,ಗುಬ್ಬಿ ಪ್ರಥಮದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ॥ಪ್ರಸನ್ನ,ನಿವೃತ್ತ ಪ್ರಾಂಶುಪಾಲರಾದ ಡಾ॥ಎಸ್.ಕೆ.ನಂದೀಶಯ್ಯ,ನಿವೃತ್ತ ಮುಖ್ಯ ಅಗ್ನಿಶಾಮಕದಳದ ಅಧಿಕಾರಿ ಟಿ.ಆರ್.ಪುಟ್ಟಯ್ಯ,ಹೆಚ್.ಡಿ.ಎಫ್.ಸಿ ಬ್ಯಾಂಕ್ ನ ರಿಲೇಷನ್ ಶಿಪ್ ವ್ಯವಸ್ಥಾಪಕರಾದ ವಿಜಯ್.ಟಿ.ಆರ್. ಆಗಮಿಸುತ್ತಿದ್ದು, ಈ ಸಂದರ್ಭದಲ್ಲಿ ವಿವಿಧ ವಿಭಾಗಗಳಲ್ಲಿ, ವಿವಿಧ ವಿಷಯಗಳಲ್ಲಿ ಅತಿಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ, ಉತ್ತಮ ಸಾಧನೆಗೈದ ಎನ್.ಎಸ್.ಎಸ್, ಎನ್.ಸಿ.ಸಿ, ಕ್ರೀಡಾ ವಿಜೇತ ವಿದ್ಯಾರ್ಥಿಗಳನ್ನು, ರ್‍ಯಾಂಕ್ ವಿಜೇತರಿಗೆ ನಗದು ಮತ್ತು ನೆನಪಿನ ಕಾಣಿಕೆ ನೀಡಿ ಸಂಘದ ವತಿಯಿಂದ ಗೌರವಿಸಲಾಗುವುದು. ಹಳೆಯ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಾಗಿ ಹಳೆಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಕೋರಿದ್ದಾರೆ.

## ಬ್ಯಾಂಕಿಂಗ್, ಕೇಂದ್ರ ಸರ್ಕಾರದ ಹುದ್ದೆಗಳ ನೇಮಕಾತಿಗೆ ತರಬೇತಿ

**ಚಿತ್ರದುರ್ಗ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ವತಿಯಿಂದ ಪದವಿಯನ್ನು ಪೂರೈಸಿದ ಅಭ್ಯರ್ಥಿಗಳಿಗೆ ಕೆ.ಎಸ್.ಒ.ಯು ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರವು ಬ್ಯಾಂಕಿಂಗ್ ಹಾಗೂ ಕೇಂದ್ರ ಸರ್ಕಾರಿ ಹುದ್ದೆಗಳ ನೇಮಕಾತಿ ಪರೀಕ್ಷೆಗಳಿಗೆ 50 ದಿನಗಳ ವಿಶೇಷ ತರಬೇತಿ ಕಾರ್ಯಕ್ರಮ ಆಯೋಜಿಸಿದೆ.
ಅಭ್ಯರ್ಥಿಗಳಿಗೆ ಈ 50 ದಿನಗಳ ಸ್ಪರ್ಧಾತ್ಮಕ ತರಬೇತಿಯಲ್ಲಿ ಪರೀಕ್ಷೆಗಳನ್ನು ಯಶಸ್ವಿಯಾಗಿ ಎದುರಿಸಲು ಅಗತ್ಯವಾದ ಜ್ಞಾನ ಹಾಗೂ ಕೌಶಲ್ಯವನ್ನು ಒದಗಿಸುತ್ತದೆ. ಯಾವುದೇ ಪದವಿ ಪೂರ್ಣಗೊಳಿಸಿದ ಆಸಕ್ತ ಅಭ್ಯರ್ಥಿಗಳು ತರಬೇತಿಯನ್ನು ಪಡೆಯಲು ನೋಂದಣಿ ಮಾಡಿಕೊಳ್ಳಬೇಕು.

ನೋಂದಾವಣೆಯನ್ನು ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ ಕಛೇರಿ ಸಮಯದಲ್ಲಿ ನೋಂದಾಯಿಸಲು ಸೆ. 30 ಕೊನೆಯ ದಿನವಾಗಿರುತ್ತದೆ.ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08212515944 ಅಥವಾ 9964760090 ಗೆ ಕರೆ ಮಾಡಿ ಸಮಪರ್ಕಿಸಬಹುದು.

# ಶ್ರಮದಾನ ಮೂಲಕ ಸ್ವಚ್ಛತೆಯ ಸಂದೇಶ– ಜಿ.ಪಂ ಸಿಇಓ ಡಾ.ಎಸ್.ಆಕಾಶ್

**ಚಿತ್ರದುರ್ಗ:** ಅಕ್ಟೋಬರ್ 02 ರ ಗಾಂಧಿ ಜಯಂತಿ ಪ್ರಯುಕ್ತ ಸ್ವಚ್ಚತಾ ಹೀ ಸೇವಾ ಅಭಿಯಾನದಡಿ ಶ್ರಮದಾನ ಮಾಡುವ ಮೂಲಕ ಸ್ವಚ್ಚತೆಯ ಸಂದೇಶ ಸಾರಲಾಗುತ್ತಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಎಸ್.ಆಕಾಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಮದಕರಿಪುರ ಗ್ರಾಮದಲ್ಲಿ ಗುರುವಾರ "ಸ್ವಚ್ಚತಾ ಹೀ ಸೇವಾ– ಸ್ವಚ್ಛತೆಯೇ ಸೇವೆ" ಪಾಕ್ಷಿಕ ಅಭಿಯಾನದಡಿ ಗ್ರಾಮ ಪಂಚಾಯತ್,

ತಾಲೂಕು ಪಂಚಾಯತ್ ಹಾಗೂ ಮದಕರಿಪುರ ಗ್ರಾಮ ಪಂಚಾಯತ್ ಹಾಗೂ ಚಿತ್ರದುರ್ಗ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕದ ಸಹಯೋಗದಲ್ಲಿ ಆಯೋಜಿಸಿದ್ದ ಸ್ವಚ್ಛತೋತ್ಸವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.ತಾಲೂಕು ಪಂಚಾಯತ್ ಹಾಗೂ ಮದಕರಿಪುರ ಗ್ರಾಮ ಪಂಚಾಯತ್ ಹಾಗೂ ಚಿತ್ರದುರ್ಗ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕದ ಸಹಯೋಗದಲ್ಲಿ ಆಯೋಜಿಸಿದ್ದ ಸ್ವಚ್ಛತೋತ್ಸವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಎರಡು ವಾರಗಳ ಕಾಲ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್‍ಗಳಲ್ಲಿ ಸ್ವಚ್ಛತೆ ಜತೆಗೆ ವಿವಿಧ ರೀತಿಯ ಕಾರ್ಯಕ್ರಮಗಳನ್ನು ನಡೆಸಲು ಕ್ರಮ ಕೈಗೊಳ್ಳಲಾಗಿದೆ. ಈ ಮೂಲಕ ಸ್ವಚ್ಛತೆಯ ಬಗ್ಗೆ ಗಟ್ಟಿಯಾದ ಸಂದೇಶ ನೀಡುವುದು ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.

ಏಕ್ ದಿನ್, ಏಕ್ ಘಂಟಾ, ಏಕ್ ಸಾಥ್ ಎಂಬ ಘೋಷ ವಾಕ್ಯದೊಂದಿಗೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಗುರುವಾರ ಶ್ರಮದಾನ ಕಾರ್ಯಕ್ರಮ ನಡೆಸಲಾಯಿತು. ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಸಿ.ಎಸ್.ಗಾಯತ್ರಿ ಅವರು ಸ್ವಚ್ಚತೆ ಬಗ್ಗೆ ಪ್ರತಿಜ್ಞಾವಿಧಿ ಬೋಧಿಸಿದರು.ಜಿಲ್ಲಾ ಪಂಚಾಯತ್ ಸಹಾಯಕ ಯೋಜನಾಧಿಕಾರಿ ಸುಮ, ಚಿತ್ರದುರ್ಗ ತಾಲ್ಲೂಕು ಪಂಚಾಯತ್ ಸಹಾಯಕ ನಿರ್ದೇಶಕಿ (ಪಂಚಾಯತ್ ರಾಜ್) ಆರ್.ರೂಪಕುಮಾರಿ, ಮದಕರಿಪುರ ಗ್ರಾಮ ಪಂಚಾಯತ್ ಅಧ್ಯಕ್ಷೆ ಭವ್ಯ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಜಿ.ನಾಗರಾಜ್, ಎನ್ ಎಸ್ ಎಸ್ ಸಹ ಅಧಿಕಾರಿ ತಿಪ್ಪೇಸ್ವಾಮಿ, ಸ್ವಚ್ಛ ಭಾರತ್ ಮಿಷನ ಜಿಲ್ಲಾ ಸಮಾಲೋಚಕರು ಸೇರಿದಂತೆ ಗ್ರಾಮ ಪಂಚಾಯತ್ ಸದಸ್ಯರು, ಸಿಬ್ಬಂದಿ, ವಿದ್ಯಾರ್ಥಿನಿಯರು ಶ್ರಮದಾನದಲ್ಲಿ ಪಾಲ್ಗೊಂಡಿದ್ದರು


ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಗೋಪ್ಪೆನಹಳ್ಳಿ ಗ್ರಾಮ ಪಂಚಾಯಿತಿ ಕಾರ್ಯಾಲಯ

ಚನ್ನಗಿರಿ ತಾಲೂಕು ದಾವಣಗೆರೆ ಜಿಲ್ಲೆ

ಸಂಖ್ಯೆ:ಗ್ರಾಪಂ/ಇ–ಟೆಂಡರ್ ಪ್ರಕಟಣೆ/02/2025–26 ದಿನಾಂಕ:–30/09/2025

ಟೆಂಡರ್ ಪ್ರಕಟಣೆ ಇ–ಪ್ರಕ್ಯೂರ್ ಮೆಂಟ್ ಮೂಲಕ

ಕರ್ನಾಟಕ ರಾಜ್ಯಪಾಲರ ಪರವಾಗಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯಿತಿ ಗೋಪ್ಪೆನಹಳ್ಳಿ ಚನ್ನಗಿರಿ ತಾಲ್ಲೂಕು ಇವರು ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿನ 15 ನೇ ಹಣಕಾಸು ಯೋಜನೆಯ ಮತ್ತು ಗ್ರಾಮ ವಿಕಾಸ ಯೋಜನೆಯ 2025–26 ನೇ ಸಾಲಿನ ನೋಂದಾಯಿತ ಅರ್ಹ ಹಾಗೂ ಇ–ಟೆಂಡರ್‍ಗಾಗಿ ಇ–ಪ್ರಕ್ಯೂರ್‍ಮೆಂಟ್ ಸೆಲ್‍ನಲ್ಲಿ ನೋಂದಾಯಿಸಲ್ಪಟ್ಟ ಸಾಮಾಗ್ರಿ ಸರಬರಾಜುದಾರರಿಂದ ಇಲಾಖಾ ನಿಯಮಾವಳಿಯ ಮೇರೆಗೆ ಇ–ಪ್ರಕ್ಯೂರ್‍ಮೆಂಟ್ ಮುಖಾಂತರ ಐಟಂವಾರು ಟೆಂಡರ್‍ಗಳನ್ನು Standard Tender Documents for E-procurement For Goods ನಮೂನೆಯಲ್ಲಿ ಆಹ್ವಾನಿಸಲಾಗಿದೆ.

| ಕ್ರ.ಸಂ | ವಿವರ |
|---|---|
| 01 | RDPR/2025-26/IND11465 (15 ನೇ ಹಣಕಾಸು ಯೋಜನೆಯ 2025-26 ಸಾಲಿನ ) |
| 02 | RDPR/2025-26/IND11480(15 ನೇ ಹಣಕಾಸು ಯೋಜನೆಯ 2025-26 ಸಾಲಿನ) |
| 03 | RDPR/2025-26/BD/WORK_INDENT19159(Construction of Gram Panchayat Office Building in Goppenahalli G P Channagiri Taluk)( ಗ್ರಾಮ ವಿಕಾಸ ಯೋಜನೆಯ 2025–26 ನೇ ಸಾಲಿನ) |

ಈ ಟೆಂಡರ್ ಬಿಡ್ ಮಾಡುವ ಕೊನೆಯ ದಿನಾಂಕ:, ತಾಂತ್ರಿಕ ಆರ್ಥಿಕ ಬಿಡ್ ತೆರೆಯುವ ದಿನಾಂಕವನ್ನು ಮತ್ತು ಪ್ರಕ್ರಿಯೆಯು ತಾಂತ್ರಿಕ ತೊಂದರೆ ಮತ್ತು ಇತರೆ ವಿಷಯಗಳಿಂದ ರದ್ದತಿಯಾದರೆ ಮತ್ತೊಮ್ಮೆ ಪತ್ರಿಕ ಪ್ರಕಟಣೆ ಮಾಡಲಾಗುವುದಿಲ್ಲ ಹೆಚ್ಚಿನ ಮಾಹಿತಿಗಾಗಿ ಅಧಿಕೃತ ಪೋರ್ಟಲ್ www.kppp.karnataka.gov.in ನೋಡಿಕೊಳ್ಳುವುದು. ಕಛೇರಿ ವೇಳೆಯಲ್ಲಿ ಗ್ರಾಮ ಪಂಚಾಯಿತಿಯನ್ನು ಸಂಪರ್ಕಿಸುವುದು.

ಸಹಿ/–
ಅಧ್ಯಕ್ಷರು
ಗ್ರಾಮ ಪಂಚಾಯಿತಿ ಕಾರ್ಯಾಲಯ
ಗೋಪ್ಪೆನಹಳ್ಳಿ

ಸಹಿ/–
ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು
ಗ್ರಾಮ ಪಂಚಾಯಿತಿ ಕಾರ್ಯಾಲಯ
ಗೋಪ್ಪೆನಹಳ್ಳಿ

# ದಾವಣಗೆರೆಯ ಸಿಟಿ ಸೆಂಟ್ರಲ್ ಹಾಸ್ಪಿಟಲ್‌ನಲ್ಲಿ ಅ.2ಕ್ಕೆ ಎಂಆರ್‌ಐ, ಸಿಟಿ ಸ್ಕ್ಯಾನ್ ಯಂತ್ರಗಳ ಉದ್ಘಾಟನೆ

**ದಾವಣಗೆರೆ.ಸೆ.29:** ದಾವಣಗೆರೆಯ ಸಿಟಿ ಸೆಂಟ್ರಲ್ ಹಾಸ್ಪಿಟಲ್ ಪ್ರೈ. ಲಿಮಿಟೆಡ್‌ನಲ್ಲಿ ಅಕ್ಟೋಬರ್ 2ರಂದು ನೂತನವಾದ ಎಂಆರ್‌ಐ ಮತ್ತು ಸಿ.ಟಿ. ಸ್ಕ್ಯಾನ್ ಯಂತ್ರಗಳ ಉದ್ಘಾಟನಾ ಸಮಾರಂಭ ನಡೆಯಲಿದೆ ಎಂದು ಆಸ್ಪತ್ರೆಯ ವ್ಯವಸ್ಥಾಪಕ ಶ್ರೀ ನಂದನ್ ರಾವ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಪಿ.ಜೆ.ಬಡಾವಣೆಯ ಅಕ್ಕಮಹಾದೇವಿ ರಸ್ತೆಯಲ್ಲಿರುವ ಸಿಟಿ ಸೆಂಟ್ರಲ್ ಹಾಸ್ಪಿಟಲ್‌ನಲ್ಲಿ ಸಿಮೆನ್ಸ್ ಕಂಪನಿಯ ನೂತನ 1.5 ಟೆಸ್ಲಾ ಸಾಮರ್ಥ್ಯದ ಎಂ.ಆರ್.ಐ ಹಾಗೂ ಅದೇ ಕಂಪನಿಯ 32 ಕ್ರೈಸ್ ಸಾಮರ್ಥ್ಯದ ಸಿ.ಟಿ. ಸ್ಕ್ಯಾನ್ ಯಂತ್ರಗಳನ್ನು ಅಳವಡಿಸಲಾಗಿದೆ. ಈ ಉಪಕರಣಗಳ ಉದ್ಘಾಟನಾ ಸಮಾರಂಭವನ್ನು ಅಕ್ಟೋಬರ್ 2ರ ಗುರುವಾರದಂದು ಮಧ್ಯಾಹ್ನ 12.30ಕ್ಕೆ ಆಸ್ಪತ್ರೆಯ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ಈ ಉದ್ಘಾಟನೆಯನ್ನು ಜಿಲ್ಲಾಧಿಕಾರಿ ಡಾ.ಜಿ.ಎಂ. ಗಂಗಾಧರ ಸ್ವಾಮಿ ನೆರವೇರಿಸಲಿದ್ದು ಮುಖ್ಯ ಅತಿಥಿಗಳಾಗಿ ಜಿಲ್ಲಾ ಪೋಲೀಸ್ ಅಧೀಕ್ಷಕಿ ಉಮಾ ಪ್ರಶಾಂತ್, ಹಿರಿಯ ರೇಡಿಯಾಲಜಿಸ್ಟ್ ಡಾ.ಎಸ್.ಆರ್.ಹೆಗಡೆ, ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ್ ಶೆಟ್ಟಿ ಆಗಮಿಸಲಿದ್ದಾರೆ. ಅಧ್ಯಕ್ಷತೆಯನ್ನು ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಡಾ.ಹೆಚ್.ಎಲ್.ಸುಬ್ಬರಾವ್ ವಹಿಸಲಿದ್ದಾರೆ ಎಂದು ಹೇಳಿದರು.

# 'ಎಐ' ಅವಕಾಶದ ಅಲೆ, ಅದರ ಮೇಲೆ ಸವಾರಿ ಮಾಡಿ

## ಬಿಐಇಟಿ 43ನೇ ಪದವಿ ಪ್ರದಾನ ಸಮಾರಂಭದಲ್ಲಿ ರಾಪಿಡೋ ಸಂಸ್ಥೆ ಸಿಟಿಒ ಶ್ರೀವತ್ಸ ಕಟ್ಟಾ

**ದಾವಣಗೆರೆ:** ಇಂಟರ್ನೆಟ್, ಮೊಬೈಲ್ ಅಥವಾ ಈಗಿನ ಕೃತಕ ಬುದ್ಧಿಮತ್ತೆ (ಎಐ) ಆಗಿರಲಿ, ಈ ಕ್ರಾಂತಿಯ ಅಲೆಗಳನ್ನು ತಡೆಯಲು ಸಾಧ್ಯವಿಲ್ಲ. ಬದಲಿಗೆ, ಯಶಸ್ವಿ ಭವಿಷ್ಯಕ್ಕಾಗಿ ಅದರ ಮೇಲೆ ಸವಾರಿ ಮಾಡಲು ಕಲಿಯಬೇಕು ಎಂದು ರಾ_ಪಿಡೋ ಸಂಸ್ಥೆಯ ಸಿಟಿಒ ಶ್ರೀವತ್ಸ ಕಟ್ಟಾ ಯುವ ಪದವೀಧರರಿಗೆ ಕರೆ ನೀಡಿದರು.

ನಗರದ ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯದ 43ನೇ ಪದವಿ ಪ್ರದಾನ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಪ್ರಸ್ತುತ ಪದವೀಧರರು ಎದುರಿಸುತ್ತಿರುವ ಎಐ ಕ್ರಾಂತಿಯನ್ನು ಒಂದು ಅವಕಾಶದ ಅಲೆ ಎಂದು ಬಣ್ಣಿಸಿದರು.

ನಾವು ಪದವಿ ಪಡೆದಾಗ ಇಂಟರ್ನೆಟ್ ಬಗ್ಗೆ ಇಂತಹದ್ದೇ ಗೊಂದಲವಿತ್ತು. ಅದು ಅನೇಕ ಉದ್ಯೋಗಗಳನ್ನು ನಾಶ ಮಾಡಿದರೂ, ಲಕ್ಷಾಂತರ ಹೊಸ ಉದ್ಯೋಗಗಳನ್ನು ಸೃಷ್ಟಿಸಿತು. ಸ್ಮಾರ್ಟ್‌ಫೋನ್‌ಗಳು ಜಗತ್ತನ್ನೇ ನಮ್ಮ ಜೇಬಿಗೆ ತಂದವು. ಅದೇ ರೀತಿ, ಎಐ ಕೂಡ ಒಂದು ಅವಕಾಶದ ಅಲೆಯಾಗಿದೆ ಎಂದರು. ಕೃತಕ ಬುದ್ಧಿಮತ್ತೆ ಹೆಚ್ಚು ಕೆಲಸ ಮಾಡಬಹುದು, ಆದರೆ ಸಮಸ್ಯೆಗಳನ್ನು ಪರಿಹರಿಸುವ ಮತ್ತು ಜನರನ್ನು ನಡೆಸಿಕೊಳ್ಳುವ ನಿರ್ಧಾರವನ್ನು ನಿಮ್ಮ ಮಾನವೀಯತೆ ಮತ್ತು ಸಹಾನುಭೂತಿ ಮಾತ್ರ ನಿರ್ಧರಿಸಲು ಸಾಧ್ಯ. ನಿಮ್ಮ ಮಾನವೀಯತೆಯನ್ನು



ಹೊರಗುತ್ತಿಗೆ ನೀಡಬೇಡಿ ಎಂದರು. ಅನುಕೂಲಕರ ಜೀವನದಿಂದ ಹೊರಬಂದು, ಭಾರತದಲ್ಲಿ ಉದ್ಯಮಶೀಲತೆ ಬೆಳೆಯುತ್ತಿದ್ದ ಸಮಯದಲ್ಲಿ ರಿಸ್ಕ್ ತೆಗೆದುಕೊಂಡು ರಾಪಿಡೋ ಪ್ರಾರಂಭಿಸಿದ ತಮ್ಮ ಸ್ವಂತ ಪ್ರಯಾಣವನ್ನು ಹಂಚಿಕೊಂಡ ಶ್ರೀವತ್ಸ, 'ನೀವು ಎಷ್ಟು ಜನರ ಜೀವನವನ್ನು ಸ್ಪರ್ಶಿಸುತ್ತೀರಿ ಎಂಬುದು ನಿಜವಾದ ಯಶಸ್ಸು' ಎಂದು ತಿಳಿಸಿದರು.

ನಿಮ್ಮ ದಾರಿ ನಿಮ್ಮದೇ, ಅದನ್ನು ಇತರರೊಂದಿಗೆ ಎಂದಿಗೂ ಹೋಲಿಸಬೇಡಿ. ಸರಿಯಾದ ಮನೋಭಾವದಿಂದ ಮುಂದುವರಿಯಿರಿ, ನೀವು ಖಂಡಿತಾ ಗುರಿ ತಲುಪುತ್ತೀರಿ ಎಂದು ಯುವಪೀಳಿಗೆಗೆ ಸಲಹೆ ನೀಡಿದರು.

ನೀವು ರೋಮಾಂಚಕ ಮತ್ತು ಅನಿರೀಕ್ಷಿತ ಜಗತ್ತಿಗೆ ಕಾಲಿಡುತ್ತಿದ್ದೀರಿ. ನಿರಂತರವಾಗಿ ಕಲಿಯಿರಿ, ಕುತೂಹಲದಿಂದಿರಿ, ದೊಡ್ಡ ಕನಸುಗಳನ್ನು ಕಾಣಿರಿ, ಹೊಂದಿಕೊಳ್ಳಿ ಮತ್ತು ಸಹಾನುಭೂತಿಯಿಂದ ನಿರ್ಮಿಸಿ. ಎಲ್ಲಕ್ಕಿಂತ ಹೆಚ್ಚಾಗಿ, ನಿಮ್ಮ ಯಶಸ್ಸನ್ನು ನೀವು ಸ್ಪರ್ಶಿಸಿದ ಜೀವನಗಳಿಂದ ಅಳೆಯಿರಿ, ನಿಮ್ಮ ಸ್ಥಾನಮಾನದಿಂದಲ್ಲ ಎಂದು 2025ರ ಪದವೀಧರರನ್ನುದ್ದೇಶಿಸಿ ಕಿವಿ ಮಾತು ಹೇಳಿದರು.

ಸ್ವಪ್ರ ಇಂಜಿನೀಯರಿಂಗ್ ಪ್ರೈ.ಲಿ., ವ್ಯವಸ್ಥಾಪಕ ನಿರ್ದೇಶಕ ಅರವಿಂದ ಬೆಳ್ಳೂಡಿ ಮಾತನಾಡಿ, ವಿದ್ಯಾರ್ಥಿಗಳು ದೊಡ್ಡ ಕನಸು ಕಾಣಬೇಕು ಮತ್ತು ಗುರಿ ಇಡಬೇಕು ಎಂದು ಸಲಹೆ ನೀಡಿದರು. ದೇಶದ ಭವಿಷ್ಯದ ನಾಯಕರಾದ ವಿದ್ಯಾರ್ಥಿಗಳು ಸ್ವಂತ ಉದ್ಯಮ ನಡೆಸುವ ಉದ್ಯಮಶೀಲತೆಯ ಮನಸ್ಥಿತಿ ಹೊಂದಿರಬೇಕು ಎಂದು ಕರೆ ನೀಡಿದರು.

ಶ್ರಮ, ಶಿಸ್ತು ಮತ್ತು ವಿನಮ್ರತೆ ಯಶಸ್ಸಿನ ಮೂಲವಾಗಿದೆ. ನಿಮ್ಮ ಜ್ಞಾನವನ್ನು ಸಮಾಜಕ್ಕೆ ಕೊಡುಗೆ ನೀಡಲು ಬಳಸಿ, ನಿಮ್ಮ ಕುಟುಂಬ, ಕಾಲೇಜು ಮತ್ತು ದೇಶಕ್ಕೆ ಹೆಮ್ಮೆ ತರುವಂತೆ ಬದುಕಿರಿ. ಪ್ರಾಮಾಣಿಕವಾಗಿ ಕೆಲಸ ಮಾಡಿ, ಸತ್ಯವಂತರಾಗಿರಿ, ವಿನಮ್ರರಾಗಿರಿ. ಆಗ ಯಶಸ್ಸು ನಿಮ್ಮನ್ನು ಹಿಂಬಾಲಿಸುತ್ತದೆ ಎಂದು ಪದವೀಧರರಿಗೆ ಮಾರ್ಗದರ್ಶನ ನೀಡಿದರು.

ಬಿಐಇಟಿ ನಿರ್ದೇಶಕ ಪ್ರೊ.ವೈ. ವೃಷಭೇಂದ್ರಪ್ಪ, ಪ್ರಾಂಶುಪಾಲ ಡಾ.ಹೆಚ್.ಬಿ. ಅರವಿಂದ್, ಡಾ. ಕುಮಾರಪ್ಪ ಸೇರಿದಂತೆ ಉಪನ್ಯಾಸಕರ ವರ್ಗದವರು ಉಪಸ್ಥಿತರಿದ್ದರು.

ಜಿ.ವೈ. ಸುನಿತಾ ಅತಿಥಿಗಳನ್ನು ಸ್ವಾಗತಿಸಿದರು. ಡಾ. ಪ್ರಕಾಶ್ ಕೆ.ಎಂ. ಮತ್ತು ರಾಧಿಕಪ್ರಿಯ ನಿರೂಪಿಸಿದರು. ಕು.ಅಂಕಿತಾ ಪ್ರಾರ್ಥಿಸಿದರು. ಕಾರ್ಯಕ್ರಮ ಆರಂಭಕ್ಕೂ ಮುನ್ನ ಸಾಹಿತಿ ಎಲ್. ಎಲ್. ಭೈರಪ್ಪ ಅವರ ನಿಧನಕ್ಕೆ ಮೌನಾಚರಣೆ ಮಾಡಲಾಯಿತು.

# ಸಮೀಕ್ಷೆ ಮುಂದೂಡಲು ಸಿಎಂಗೆ ಸಿ.ಟಿ.ರವಿ ಆಗ್ರಹ

**ಬೆಂಗಳೂರು,ಸೆ.28–** ಪೂರ್ವ ತಯಾರಿ ಹಾಗೂ ಸೂಕ್ತ ತರಬೇತಿ ಅಗತ್ಯ



ಇರುವುದರಿಂದ ಶೈಕ್ಷಣಿಕ, ಸಾಮಾಜಿಕ ಸಮೀಕ್ಷೆಯನ್ನು ಕೆಲ ದಿನಗಳ ಮಟ್ಟಿಗೆ ಮುಂದೂಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಒತ್ತಾಯಿಸಿದ್ದಾರೆ.

ಈ ಸಂಬಂಧ ಸಿಎಂ ಸಿದ್ದರಾಮಯ್ಯನವರಿಗೆ ಸುದೀರ್ಘ ಪತ್ರ ಬರೆದಿರುವ ಸಿ.ಟಿ.ರವಿ, ರಾಜ್ಯಾದ್ಯಂತ ನಡೆಸುತ್ತಿರುವ ಸಮೀಕ್ಷೆ ಸಾಕಷ್ಟು ಗೊಂದಲದಿಂದ ಕೂಡಿ-ದೆ. ಸಮೀಕ್ಷೆದಾರರಿಗೆ ಸೂಕ್ತವಾದ ತರಬೇತಿ, ಪೂರ್ವ ಸಿದ್ದತೆ ಇಲ್ಲದೇ ಇರುವುದರಿಂದ ಗೊಂದಲಕ್ಕೆ ಒಳಗಾಗಿದ್ದಾರೆ. ಹೀಗಾಗಿ ಮುಂದೂಡಬೇಕೆಂದು ಮನವಿ ಮಾಡಿದ್ದಾರೆ.

ಗಣತಿದಾರರು ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಅನೇಕ ಕಡೆ ನೆಟ್‌ವರ್ಕ್ ಸಿಗದೆ ಗೊಂದಲಕ್ಕೆ ಸಿಲುಕಿದ್ದಾರೆ. ಅಲ್ಲದೆ ಅವರು ಕೆಲವು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಪರಿಹರಿಸುವ ಬದಲು ನೀವು ಅವರಿಗೆ ಬೆದರಿಕೆ ಹಾಕುತ್ತಿದ್ದೀರಿ. ಇದರಿಂದ ನಿಮ ಕನಸಿನ ಕೂಸು ಬಡವಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ. ಹಿಂದುಳಿದ ವರ್ಗಗಳ ಆಯೋಗದಿಂದ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯು ಈಗಾಗಲೇ ಆರಂಭವಾಗಿದ್ದು, ಸಮೀಕ್ಷೆಯ ಸಂದರ್ಭದಲ್ಲಿ, ಈಗಾಗಲೇ ಹೆಚ್ಚುವರಿ ಜವಾಬ್ದಾರಿಗಳ ಹೊರೆಯಿಂದ ಬಳಲಿರುವ ಶಿಕ್ಷಕರು, ಇನ್ನಷ್ಟು ತೀವ್ರ ಸವಾಲುಗಳನ್ನು ಎದುರಿಸುತ್ತಿರುವುದು ಗಮನಕ್ಕೆ ಬಂದಿದೆ. ಕೆಲವೆಡೆ ಗಣತಿದಾರರಿಗೆ ಸ್ಥಳ ನಿಯುಕ್ತಿ ಸೇರಿದಂತೆ ಸಮೀಕ್ಷೆಯ ಮಾಹಿತಿ ಸಂಗ್ರಹಿಸಲು ನಿಗದಿಪಡಿಸಿರುವ ಅಪ್ಲಿಕೇಷನ್ ಸರಿಯಾಗಿ ಕಾರ್ಯ ನಿರ್ವಹಿಸದಿರುವುದು ಮತ್ತು ಗುಡ್ಡಗಾಡು ಪ್ರದೇಶದಲ್ಲಿ ನೆಟ್ವರ್ಕ್ ಸರಿಯಾಗಿ ಲಭ್ಯವಾಗದೆ ಇರುವುದರಿಂದ ಗಣತಿದಾರ ಶಿಕ್ಷಕರು ಸಮಸ್ಯೆಗೀಡಾಗಿದ್ದಾರೆ. ಸಮೀಕ್ಷೆಗೆ ಸರಿಯಾದ ಪೂರ್ವ ತಯಾರಿ. ಯೋಜನೆ ಮತ್ತು ತಾಂತ್ರಿಕ ವ್ಯವಸ್ಥೆ ರೂಪಿಸುವಲ್ಲಿ ವಿಫಲವಾಗಿರುವ ಶಂಕೆ ಮೂಡುತ್ತಿದೆ. ಪ್ರಾಯೋಗಿಕವಾಗಿ ಟ್ರಯಲ್ ನಡೆಸಿ, ಅದರ ಅನುಭವದ ಮೇಲೆ ಸಂಪೂರ್ಣ ಸಮೀಕ್ಷಾ ಕಾರ್ಯವನ್ನು ವಿಸ್ತರಿಸಬೇಕಾಗಿತ್ತು. ಆದ-ರೆ ಇಲ್ಲಿ ಇದ್ಯಾವುದನ್ನೂ ಮಾಡದೆ ಇರೋದು ಕಂಡುಬಂದಿದೆ. ಸಮೀಕ್ಷೆ ಸಂದರ್ಭದಲ್ಲಿ ಗಣತಿದಾರರು ಎದುರಿಸುತ್ತಿರುವ ಸವಾಲುಗಳು ತೀವ್ರ ಗಂಭೀರವಾಗಿದ್ದು , ಈ ಸವಾಲುಗಳನ್ನು ಬಗೆಹರಿಸಿ ಎಂದು ಕೋರಿದ್ದಾರೆ.

# ಪಾಕ್ ಭಯೋತ್ಪಾದಕರ ವಿರುದ್ಧ ಹೋರಾಡುವುದು ಭಾರತದ ಆದ್ಯತೆಯಾಗಿದೆ : ಸಚಿವ ಎಸ್.ಜೈಶಂಕರ್

**ವಾಷಿಂಗ್ಟನ್:** ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಭಾರತದ ವಿದೇಶಾಂಗ ಸಚಿವ ಎಸ್.ಜೈಶಂಕರ್ ಭಾಷಣ ಮಾಡಿದರು. ಪಾಕಿಸ್ತಾನವನ್ನು ಹೆಸರಿಸದೆಯೇ, ಭಾರತದ ನೆರೆಯ ರಾಷ್ಟ್ರ ಭಯೋತ್ಪಾದನೆಯ ಜಾಗತಿಕ ಕೇಂದ್ರವಾಗಿದೆ ಎಂದು ಹೇಳಿದ್ದಾರೆ.

ಪಹಲ್ಗಾಮ್‌ನಲ್ಲಿ ಕ್ರೂರ ಭಯೋತ್ಪಾದಕ ದಾಳಿ ನಡೆದಿದೆ ಎಂದು ಭಾರತದ ವಿದೇಶಾಂಗ ಸಚಿವರು ಕಿಡಿಕಾರಿದ್ದಾರೆ. ಭಯೋತ್ಪಾದಕ ಅಡಗುತಾಣಗಳ ವಿರುದ್ಧ ಭಾರತ ಕ್ರಮ ಕೈಗೊಂಡಿದೆ. ಭಯೋತ್ಪಾದಕರ ಮೂಲಸೌಕರ್ಯಗಳನ್ನು ನಾಶಮಾಡುವುದು ಅತ್ಯಗತ್ಯ. ಭಯೋತ್ಪಾದಕರ ವಿರುದ್ಧ ಹೋರಾಡುವುದು ಯಾವಾಗಲೂ ಭಾರತದ ಆದ್ಯತೆಯಾಗಿದೆ ಎಂದು ಅವರು ಹೇಳಿದ್ದಾರೆ.

ಭಯೋತ್ಪಾದಕ ನೆಲೆಗಳು ದೊಡ್ಡ ಪ್ರಮಾಣದಲ್ಲಿ ಕಾರ್ಯನಿರ್ವಹಿಸುತ್ತಿವೆ, ಭಯೋತ್ಪಾದಕರನ್ನು ಬಹಿರಂಗವಾಗಿ ವೈಭವೀಕರಿಸಲಾಗುತ್ತದೆ ಮತ್ತು ಭಯೋತ್ಪಾದಕರಿಗೆ ಹಣಕಾಸು ಒದಗಿಸುವುದನ್ನು ನಿಲ್ಲಿಸಬೇಕು ಎಂದು ಅವರು ಹೇಳಿದರು. ಜೈಶಂಕರ್ ತಮ್ಮ ಭಾಷಣದಲ್ಲಿ ಭಾರತ ಎಂಬ ಪದದ ಬದಲಿಗೆ ಭಾರತ್ ಎಂಬ ಪದವನ್ನು ಬಳಸಿದ್ದಾರೆ.

ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಸುಧಾರಣೆಗೆ ಜೈಶಂಕರ್ ಕರೆ ನೀಡಿದರು, ವಿಶ್ವಸಂಸ್ಥೆಯ ಸದಸ್ಯರ ಸಂಖ್ಯೆ ನಾಲ್ಕು ಪಟ್ಟು ಹೆಚ್ಚಾಗಿದೆ ಮತ್ತು ಸಂಸ್ಥೆಯ ಕೆಲಸ ಮತ್ತು ವ್ಯಾಪ್ತಿ ಗಮನಾರ್ಹವಾಗಿ ವಿಸ್ತರಿಸಿದೆ ಎಂದು ಹೇಳಿ ಈಗ ಶಾಶ್ವತ ಸದಸ್ಯರ ಸಂಖ್ಯೆಯನ್ನು ಹೆಚ್ಚಿಸಬೇಕು ಎಂದಿದ್ದಾರೆ.

ವಿದೇಶಾಂಗ ಸಚಿವ ಎಸ್. ಜೈಶಂಕರ್ ಪಾಕಿಸ್ತಾನವನ್ನು ಜಾಗತಿಕ ಭಯೋತ್ಪಾದನೆಯ ಕೇಂದ್ರ ಎಂದು ಕರೆದಾಗ ವಿಶ್ವಸಂಸ್ಥೆಯ ಸಾಮಾನ್ಯ



ಸಭೆಯು ಅಪರೂಪದ ಕ್ಷಣಕ್ಕೆ ಸಾಕ್ಷಿಯಾಯಿತು. ಅವರ ನೇರ ಮತ್ತು ದಿಟ್ಟ ಹೇಳಿಕೆಯನ್ನು ಇಡೀ ಸಾಮಾನ್ಯ ಸಭೆಯ ಸಭಾಂಗಣದಿಂದ ಜೋರಾದ ಕರತಾಡನ ಮೂಲಕ ಸ್ವಾಗತಿಸಲಾಗಿದೆ.ಈ ಪ್ರತಿಕ್ರಿಯೆಯು ವಿಶ್ವಸಂಸ್ಥೆಯ ವೇದಿಕೆಯಲ್ಲಿ ಭಯೋತ್ಪಾದನೆಯ ಬಗ್ಗೆ ಭಾರತದ ದೀರ್ಘಕಾಲದ ನಿಲುವನ್ನು ಪ್ರತಿಬಿಂಬಿಸುತ್ತದೆ, ಇದನ್ನು ಇತರ ಸದಸ್ಯ ರಾಷ್ಟ್ರಗಳು ಬೆಂಬಲಿಸಿವೆ.

ಶನಿವಾರ ಪಾಕಿಸ್ತಾನವನ್ನು ಗುರಿಯಾಗಿಸಿಕೊಂಡು ಮಾತನಾಡಿದ ಜೈಶಂಕರ್, ಭಾರತ ಸ್ವಾತಂತ್ರ್ಯದ ನಂತರ ಭಯೋತ್ಪಾದನೆಯ ಸವಾಲನ್ನು ಎದುರಿಸುತ್ತಿದೆ, ಆದರೆ ಅದರ ನೆರೆಯ ರಾಷ್ಟ್ರ ಜಾಗತಿಕ ಭಯೋತ್ಪಾದನೆಯ ಕೇಂದ್ರಬಿಂದುವಾಗಿದೆ ಎಂದು ಹೇಳಿದ್ದಾರೆ. ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ 80 ನೇ ಅಧಿವೇಶನದ ಸಾಮಾನ್ಯ ಚರ್ಚೆಯನ್ನುದ್ದೇಶಿಸಿ ಮಾತನಾಡಿದ ಜೈಶಂಕರ್, ಪಹಲ್ಗಾಮ್ ದಾಳಿಯು ಪಾಕಿಸ್ತಾನದ ಗಡಿಯಾಚೆಗಿನ ಬರ್ಬರತೆಗೆ ಇತ್ತೀಚಿನ ಉದಾಹರಣೆಯಾಗಿದೆ ಎಂದು ಕಿಡಿಕಾರಿದ್ದಾರೆ. ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ವೇದಿಕೆಯಿಂದ ವಿಶ್ವನಾಯಕರನ್ನುದ್ದೇಶಿಸಿ ಮಾತನಾಡಿದ ಜೈಶಂಕರ್, ಭಾರತದ ಜನರಿಂದ ಶುಭಾಶಯಗಳು ಎಂದು ತಮ್ಮ ಭಾಷಣವನ್ನು ಪ್ರಾರಂಭಿಸಿದಶಕಗಳಿಂದ, ಪ್ರಮುಖ ಅಂತರರಾಷ್ಟ್ರೀಯ ಭಯೋತ್ಪಾದಕ ದಾಳಿಗಳಿಗೆ ಪಾಕಿಸ್ತಾನವನ್ನು ದೂಷಿಸಲಾಗುತ್ತಿದೆ ಎಂದು ಅವರು ಸ್ಪಷ್ಟವಾಗಿ ಹೇಳಿದ್ದಾರೆ.

ಭಾರತ ಸ್ವಾತಂತ್ರ್ಯದಿಂದಲೂ ಭಯೋತ್ಪಾದನೆಯ ಸವಾಲನ್ನು ಎದುರಿಸುತ್ತಿದೆ, ಏಕೆಂದರೆ ಅದರ ನೆರೆಯ ರಾಷ್ಟ್ರ ಜಾಗತಿಕ ಭಯೋತ್ಪಾದನೆಯ ಕೇಂದ್ರವಾಗಿದೆ ಎಂದು ಅವರು ವಿಶ್ವಸಂಸ್ಥೆಯ ಸಾಮಾನ್ಯ ಸಭೆ ಸಭಾಂಗಣದಲ್ಲಿ ಪ್ರೇಕ್ಷಕರ ಚಪ್ಪಾಳೆಯೊಂದಿಗೆ ಈ ಹೇಳಿಕೆ ನೀಡಿದ್ದಾರೆ. ಪಾಕಿಸ್ತಾನಿ ಪ್ರಜೆಗಳು ಸಹ ವಿಶ್ವಸಂಸ್ಥೆಯ ಭಯೋತ್ಪಾದಕರ ಪಟ್ಟಿಯಲ್ಲಿದ್ದಾರೆ ನಮ್ಮ ನೆರೆ-ಯ ರಾಷ್ಟ್ರದ ಗಡಿಯಾಚೆಗಿನ ಕ್ರೌರ್ಯದ ಇತ್ತೀಚಿನ ಉದಾಹರಣೆಯೆಂದರೆ ಈ ವರ್ಷದ ಏಪ್ರಿಲ್‌ನಲ್ಲಿ ಪಹಲ್ಗಾಮ್‌ನಲ್ಲಿ ಮುಗ್ಧ ಪ್ರವಾಸಿಗರನ್ನು ಕೊಂದಿರುವುದು ಎಂದು ಅವರು ಹೇಳಿದ್ದಾರೆ.

ಭಯೋತ್ಪಾದನೆಯ ವಿರುದ್ಧ ತನ್ನ ಜನರನ್ನು ರಕ್ಷಿಸುವ ಹಕ್ಕನ್ನು ಭಾರತ ಚಲಾಯಿಸಿದೆ ಮತ್ತು ಭಯೋತ್ಪಾದನೆಯ ಮಾಸ್ಟರ್ ಮೈಂಡ್‌ಗಳು ಮತ್ತು ಅಪರಾಧಿಗಳನ್ನು ನ್ಯಾಯಕ್ಕೆ ತಂದಿದೆ ಎಂದು ಜೈಶಂಕರ್ ಹೇಳಿದ್ದಾರೆ. ಭಯೋತ್ಪಾದನೆಯನ್ನು ಪ್ರಾಯೋಜಿಸುವ ದೇಶಗಳನ್ನು ಬೆಂಬಲಿಸುವವರು ಅವರು ಭಯೋತ್ಪಾದಕ ರಿಂದಲೇ ತೀವ್ರ ಪರಿಣಾಮ ಎದುರಿಸಲಿದ್ದಾರೆ ಎಂದು ಭಾರತ ಎಚ್ಚರಿಸಿದೆ.

# ಬೆಂಗಳೂರು-ಮುಂಬೈ ನಡುವೆ ಸೂಪರ್ ಫಾಸ್ಟ್ ರೈಲಿಗೆ ಸಮ್ಮತಿ

**ಬೆಂಗಳೂರು:** ಬೆಂಗಳೂರು ಮತ್ತು ಮುಂಬೈ ನಡುವೆ ಹೊಸ ಸೂಪರ್‌ಫಾಸ್ಟ್



ರೈಲಿಗೆ ಕೇಂದ್ರ ರೈಲ್ವೆ ಸಚಿವಾಲಯವು ಅನುಮೋದನೆ ನೀಡಿದೆ ಎಂದು ಸಂಸದ ತೇಜಸ್ವಿ ಸೂರ್ಯ ತಿಳಿಸಿದ್ದಾರೆ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಈ ಬಗ್ಗೆ ಮಾಹಿತಿ ಕೊಂಡಿರುವ ಅವರು ಈ ಅನುಮೋದನೆಯಿಂದ ಎರಡೂ ನಗರಗಳ ನಾಗರಿಕರ 30 ವರ್ಷಗಳ ಬೇಡಿಕೆಯನ್ನು ಈಡೇರಿಸಲಾಗಿದೆ. ಎಂದಿದ್ದಾರೆ

ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು "ಬೆಂಗಳೂರು ಮತ್ತು ಮುಂಬೈ ನಡುವೆ ನಾವು ಶೀಘ್ರದಲ್ಲೇ ಸೂಪರ್‌ಫಾಸ್ಟ್ ರೈಲನ್ನು ಪ್ರಾರಂಭಿಸುವುದಾಗಿ ತಿಳಿಸಿದ್ದು, ಎರಡೂ ನಗರಗಳು ಪ್ರಮುಖ ಆರ್ಥಿಕ ಕೇಂದ್ರಗಳಾಗಿದ್ದು ಅವುಗಳ ನಿಲ್ದಾಣಗಳಲ್ಲಿನ ಸಾಮರ್ಥ್ಯದ ವಿಸ್ತರಣೆಯಿಂದಾಗಿ ಈ ಹೊಸ ರೈಲು ಓಡಾಟ ಸಾಧ್ಯವಾಗಿದೆ" ಎಂದು ಅವರು ತಮಗೆ ಮಾಹಿತಿ ನೀಡಿದ್ದಾರೆ ಎಂದು ಸಂಸದ ತೇಜಸ್ವಿ ಸೂರ್ಯ ತಿಳಿಸಿದ್ದಾರೆ.

ಬೆಂಗಳೂರು ಮತ್ತು ಮುಂಬೈ ಭಾರತದ ಎರಡು ಪ್ರಮುಖ ಆರ್ಥಿಕ ಕೇಂದ್ರಗಳಾಗಿದ್ದರೂ, ಈ ಎರಡೂ ನಗರಗಳು ಕೇವಲ ಒಂದೇ ಒಂದು ರೈಲಿನಿಂದ ಸಂಪರ್ಕ ಹೊಂದಿದ್ದವು. ಆ ರೈಲು ಉದ್ಯಾನ ಎಕ್ಸ್‌ಪ್ರೆಸ್ ಆಗಿದ್ದು, ಈ ಪ್ರಯಾಣವನ್ನು ಪೂರ್ಣಗೊಳಿಸಲು 24 ಗಂಟೆಗಳಿಗಿಂತ ಹೆಚ್ಚು ಸಮಯ ತೆಗೆದುಕೊಳ್ಳುತ್ತಿತ್ತು.

30 ವರ್ಷಗಳಿಂದ ಬಾಕಿ ಉಳಿದಿದ್ದ ಬೇಡಿಕೆಯಾಗಿದೆ. ಕಳೆದ ಮೂರು ದಶಕಗಳಲ್ಲಿ ಎರಡೂ ನಗರಗಳ ಬೆಳವಣಿಗೆಯ ಹೊರತಾಗಿಯೂ, ಬೆಂಗಳೂರು ಮತ್ತು ಮುಂಬೈ ನಡುವೆ ಕೇವಲ ಒಂದು ಸೂಪರ್‌ಫಾಸ್ಟ್ ರೈಲು ಮಾತ್ರ ಇತ್ತು. ಕಳೆದ ವರ್ಷವೊಂದರಲ್ಲೇ 26 ಲಕ್ಷಕ್ಕೂ ಹೆಚ್ಚು ಜನರು ಈ ಎರಡು ನಗರಗಳ ನಡುವೆ ವಿಮಾನದಲ್ಲಿ ಪ್ರಯಾಣಿಸಿದ್ದಾರೆ. ಈ ಹೊಸ ಸೇವೆಯು ಲಕ್ಷಾಂತರ ನಾಗರಿಕರಿಗೆ ಪ್ರಯಾಣವನ್ನು ಹೆಚ್ಚು ಕೈಗೆಟುಕುವ ದರದಲ್ಲಿ ಅನುಕೂಲಕರವಾಗಿಸಲಿದೆ" ಎಂದು ಸೂರ್ಯ ಹೇಳಿದ್ದಾರೆ.

ಈ ಹೊಸ ರೈಲು ಪ್ರಯಾಣದ ದಟ್ಟಣೆಯನ್ನು ಗಣನೀಯವಾಗಿ ಕಡಿಮೆ ಮಾಡುತ್ತದೆ ಮತ್ತು ವಿಮಾನ ಹಾಗೂ ಬಸ್‌ಗಳಿಗೆ ಆರಾಮದಾಯಕವಾದ ಪರ್ಯಾಯವನ್ನು ಒದಗಿಸುತ್ತದೆ. ಅಲ್ಲದೆ, ಇದು ಎರಡು ಮಹಾನಗರಗಳ ನಡುವಿನ ಆರ್ಥಿಕ ಮತ್ತು ಸಾಮಾಜಿಕ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುತ್ತದೆ.

# ಅಂತರಂಗ ಬಹಿರಂಗ ಶುದ್ಧಿಯೇ ವೀರಶೈವ ಧರ್ಮದ ಗುರಿ : ಶ್ರೀ ರಂಭಾಪುರಿ ಜಗದ್ಗುರು

**ಬಸವಕಲ್ಯಾಣ:** ಧರ್ಮ ಮತ್ತು ಆಧ್ಯಾತ್ಮಿಕತೆ ಬದುಕಿನ ಉನ್ನತಿಗೆ ಆಶಾಕಿರಣ. ವೀರಶೈವ ಧರ್ಮ ಕೊಟ್ಟ ಸಂಸ್ಕಾರ ಸಂಸ್ಕೃತಿ ಬಲು ದೊಡ್ಡದು. ಸಂವೇದನಾಶೀಲ ಜೀವನಕ್ಕೆ ವೀರಶೈವ ಧರ್ಮದ ಕೊಡುಗೆ ಅಪಾರ. ಅಂತರಂಗ ಮತ್ತು ಬಹಿರಂಗ ಇವೆರಡನ್ನು ಶುದ್ಧಿಗೊಳಿಸುವುದೇ ವೀರಶೈವ ಲಿಂಗಾಯತ ಧರ್ಮದ ಮೂಲ ಗುರಿಯಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದಲ್ಲಿ ಆಶೀರ್ವಚನ ನೀಡುತ್ತಿದ್ದರು.

ಮಾನವನ ಉಸಿರಾಟಕ್ಕೆ ಗಾಳಿ ಎಷ್ಟು ಮುಖ್ಯವೋ ಅಷ್ಟೇ ಜೀವನದ ಉಜ್ವಲ ಭವಿಷ್ಯಕ್ಕೆ ಧರ್ಮ ಆಶಾ ಕಿರಣವಾಗಿದೆ. ಆಚಾರ್ಯರ ಮತ್ತು ಶರಣ ಸತ್ಪುರುಷರ ಮಾರ್ಗದರ್ಶನ ಜೀವನದ ಶ್ರೇಯಸ್ಸಿಗೆ ಸ್ಫೂರ್ತಿಯಾಗಿದೆ. ವೀರಶೈವ ಧರ್ಮದ ಬೇರುಗಳನ್ನು ಶಿವಾಗಮಗಳಲ್ಲಿ ಕಾಣುತ್ತೇವೆ. ಶಿವಾಗಮಗಳ ಆಚಾರ್ಯರ ಹಾಗೂ ಶಿವಶರಣರ ಸಾಹಿತ್ಯ ಬದುಕಿ ಬಾಳುವ ಮನುಷ್ಯನ ಎರಡು ಕಣ್ಣು ಇದ್ದ ಹಾಗೆ. ಮೂಲ ನಂಬಿಕೆಗಳನ್ನು ಮೂಢನಂಬಿಕೆ



ಎಂದು ತಿಳಿಯದೆ ಸಮನ್ವಯದಿಂದ ಬಾಳಿ ಬದುಕುವ ಧ್ಯೇಯವಾಗಬೇಕು. ಯಾವಾಗಲೂ ನಾಶವಾಗದೇ ಇರುವುದು ಧರ್ಮ. ಇದನ್ನು ನಾಶಮಾಡುವ ಶಕ್ತಿ ಯಾರಿಗೂ ಯಾವ ಕಾಲಕ್ಕೂ ಇಲ್ಲ. ಸುಸಂಸ್ಕೃತ ಸದೃಢ ಸಮಾಜ ನಿರ್ಮಾಣಕ್ಕೆ ಭದ್ರ ಅಡಿಪಾಯವಾಗಿರುವ ಆಧ್ಯಾತ್ಮ ಜ್ಞಾನದ ಅನುಸಂಧಾನ ಮುಖ್ಯ. ವೀರಶೈವ ಧರ್ಮದ ಸಂವಿಧಾನಗಳು ಭಾರತೀಯರ ಬದುಕಿಗೆ ಸಜ್ಜನಿಕೆಯ ಜೀವ ತುಂಬಿವೆ. ಸತ್ಯ ಮತ್ತು ಶಾಂತಿ ಎಲ್ಲರ ಬಾಳಿಗೂ ಅಗತ್ಯವಾಗಿದೆ. ಶಿವಜ್ಞಾನದ ತಂಗಾಳಿ ಜೀವನದ ಉನ್ನತಿಗೆ ಸಹಕಾರಿಯಾಗಿವೆ. ಶಿವ ಜೀವ ಐಕ್ಯದ ವಿದ್ಯೆಯಲ್ಲಿ ಯಾರು ಆಸಕ್ತರಾಗಿರುವರೋ ಅವರೆಲ್ಲರೂ ವೀರಶೈವರು. ಗುರು ಕೊಟ್ಟ ಇಷ್ಟಲಿಂಗವನ್ನು ಎದೆಯ ಮೇಲೆ ಧರಿಸಿ ಪೂಜಿಸುವಾತನೇ ನಿಜವಾದ ವೀರಶೈವ. ಸಾಮಾಜಿಕ 'ಬದುಕಿನಲ್ಲಿ ಎಲ್ಲರೊಂದಿಗೆ ಬೆರೆತು ಬಾಳುವುದೇ ವೀರಶೈವ ಧರ್ಮದ ಗುರಿಯಾಗಿದೆ. ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರು ಹಾಗೂ ಬಸವಾದಿ ಶರಣರು ವೀರಶೈವ ಲಿಂಗಾಯತ ಧರ್ಮದ ಎರಡು ಕಣ್ಣು ಎಂಬುದನ್ನು ಯಾರೂ ಮರೆಯಬಾರದೆಂದರು.

# ಜಾತಿ ಸಮೀಕ್ಷೆಯಲ್ಲಿ ಕುಂಚಿಟಿಗ ಎಂದು ಬರೆಸಲು ಮನವಿ

**ಚಿಕ್ಕಮಗಳೂರು–** ಸರ್ಕಾರ ಇದೇ ಸೆ.22 ರಿಂದ ಅ.7 ರವರೆಗೆ ನಡೆಸುತ್ತಿರುವ ಜಾತಿಗಣತಿ ಸಮೀಕ್ಷೆಯಲ್ಲಿ ಜಾತಿ ಕಾಲಂನಲ್ಲಿ 0795 ಸಂಖ್ಯೆಯ ಕುಂಚಿಟಿಗ ಎಂದು, ಧರ್ಮದ ಕಾಲಂನಲ್ಲಿ ಹಿಂದೂ ಎಂದು ಬರೆಸುವಂತೆ ಜಿಲ್ಲಾ ಕುಂಚಿಟಿರ ಸಂಘದ ಅಧ್ಯಕ್ಷ ಎಸ್. ರಂಗನಾಥ್ ಸಮಾಜ ಬಾಂಧವರಲ್ಲಿ ಮನವಿ ಮಾಡಿದ್ದಾರೆ.ಪತ್ರಿಕಾ ಹೇಳಿಕೆಯಲ್ಲಿ ಈ ವಿಷಯ ತಿಳಿಸಿರುವ ಅವರು, ಈ ಸಂಬಂಧ ಸಂಘದ ಸರ್ವ ಸದಸ್ಯರ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದ್ದು, ಕುಲಬಾಂಧವರು ಮೇಲ್ಕಂಡಂತೆ ಬರೆಸುವ ಮೂಲಕ ಸಂಘದೊಂದಿಗೆ ಸಹಕರಿಸಬೇಕೆಂದು ವಿನಂತಿಸಿದ್ದಾರೆ.

# ಸೆ.30 ಮಹಿಳಾ ಒಕ್ಕಲಿಗರ ಸಂಘದ ಸರ್ವ ಸದಸ್ಯರ ಸಭೆ

**ಚಿಕ್ಕಮಗಳೂರು–** ಜಿಲ್ಲಾ ಒಕ್ಕಲಿಗರ ಮಹಿಳಾ ಸಂಘದ ವಾರ್ಷಿಕೋತ್ಸವ ಮತ್ತು 2024-25 ನೇ ಸಾಲಿನ 20ನೇ ಸರ್ವ ಸದಸ್ಯರ ಸಭೆ ಸೆ.30 ರಂದು ಮಂಗಳವಾರ ಜಿಲ್ಲಾ ಒಕ್ಕಲಿಗರ ಸಮುದಾಯ ಭವನದಲ್ಲಿ ಆಯೋಜಿಸಲಾಗಿದೆ.ಪತ್ರಿಕಾ ಹೇಳಿಕೆಯಲ್ಲಿ ಈ ವಿಷಯ ತಿಳಿಸಿರುವ ಸಂಘದ ಕಾರ್ಯದರ್ಶಿ ಅಮಿತಾವಿಜಯೇಂದ್ರ ಅವರು, ಅಧ್ಯಕ್ಷತೆಯನ್ನು ಮಹಿಳಾ ಸಂಘದ ಜಿಲ್ಲಾಧ್ಯಕ್ಷೆ ರೀನಾ ಸುಜೇಂದ್ರ ವಹಿಸಲಿದ್ದು, ಉದ್ಘಾಟನೆಯನ್ನು ಮೌಂಟೆನ್ ವ್ಯೂ ಪ್ರೌಢಶಾಲೆಯ ಗೀತಾ ಸುಬ್ರಾಯ ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಟಿ.ರಾಜಶೇಖರ್, ಉಪಾಧ್ಯಕ್ಷ ಟಿ.ಡಿ ಮಲ್ಲೇಶ್, ಗೌರವ ಕಾರ್ಯದರ್ಶಿ ಎಂ.ಎಸ್ ಪ್ರದೀಪ್‌ಕುಮಾರ್ ಭಾಗವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ.

# ಅ.15 ಜಿಲ್ಲಾ ಮಟ್ಟದ ಯುವಜನೋತ್ಸವ

**ಚಿಕ್ಕಮಗಳೂರು, ಸೆ.29:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ನೆಹರು ಯುವ ಕೇಂದ್ರದ ಸಹಯೋಗದಲ್ಲಿ ಅಕ್ಟೋಬರ್ 15 ರಂದು ಬೆಳಿಗ್ಗೆ 10 ಗಂಟೆಗೆ ಕುವೆಂಪು ಕಲಾಮಂದಿರದಲ್ಲಿ 2025ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಯುವಜನರಿಗೆ ಗುಂಪು ಜನಪದ ನೃತ್ಯ, ಗುಂಪು ಜನಪದ ಗೀತೆ, ಕಥೆ ಬರೆಯುವುದು, ಕವಿತೆ ಬರೆಯುವುದು, ಘೋಷಣೆ, ಚಿತ್ರಕಲೆ, ವಿಜ್ಞಾನ ಮೇಳ ಸ್ಪರ್ಧೆಗಳಲ್ಲಿ ಭಾಗವಹಿಸುವ ಅವಕಾಶವಿದೆ. 15 ರಿಂದ 29 ವಯೋಮಾನದ ಎಲ್ಲಾ ಯುವಕ, ಯುವತಿಯರು ಈ ಸ್ಪರ್ಧಾ ಕಾರ್ಯಕ್ರಮದಲ್ಲಿ ಮುಕ್ತವಾಗಿ ಭಾಗವಹಿಸಬಹುದು. ಆಸಕ್ತರು ತಮ್ಮ ಊರು, ವಿಳಾಸ, ವಯಸ್ಸಿನ ಪ್ರಮಾಣ ಪತ್ರ ಭಾಗವಹಿಸುವ ಸ್ಪರ್ಧೆ ವಿವರಗಳೊಂದಿಗೆ ಅಕ್ಟೋಬರ್ 15 ರಂದು ಬೆಳಿಗ್ಗೆ 9.30 ರೊಳಗೆ ಕುವೆಂಪು ಕಲಾಮಂದಿರದಲ್ಲಿ ವರದಿ ಮಾಡಿಕೊಳ್ಳಲು ಕೋರಲಾಗಿದೆ.

ವಿಜೇತರಿಗೆ ಪಾರಿತೋಷಕ, ಪ್ರಶಸ್ತಿ ಪತ್ರ ಹಾಗೂ ನಗದು ಬಹುಮಾನವನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗೆ ದೂರವಾಣಿ (08262-295724) ಸಂಖ್ಯೆಯನ್ನು ಸಂಪರ್ಕಿಸಬಹುದು. ವಿಜ್ಞಾನ ಮೇಳಕ್ಕೆ 7892442286 ಹಾಗೂ ಚಿತ್ರಕಲಾ ಸ್ಪರ್ಧೆಗೆ 6360448844 ಸಂಖ್ಯೆಯನ್ನು ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪುಸ್ತಕದ ಒಡನಾಟ ಜೀವನ ಬದಲಾವಣೆಗೆ ನಾಂದಿ : ಪುಷ್ಪ ಭಾರತಿ

**ಕಡೂರು:** ಪುಸ್ತಕಗಳ ಒಡನಾಟ ನಮ್ಮ ಜೀವನವನ್ನು ಬದಲಾಯಿಸಬಲ್ಲದು ಎಂದು ಪ್ರಾಧ್ಯಾಪಕಿ ಪುಷ್ಪಭಾರತಿ ಪ್ರತಿಪಾದಿಸಿದರು.

ಪಟ್ಟಣದ ಜ್ಞಾನಭಾರತಿ ಮಹಾವಿದ್ಯಾಲಯದಲ್ಲಿ ಕರ್ನಾಟಕ ಲೇಖಕಿಯರ ಸಂಘದ ಜಿಲ್ಲಾ ಘಟಕ ಏರ್ಪಡಿಸಿದ್ದ ಮಾತು-ಮಂಥನ ಕಾರ್ಯಕ್ರಮದಲ್ಲಿ ಪುಸ್ತಕಗಳ ಒಡನಾಟ ಕುರಿತು ಉಪನ್ಯಾಸ ನೀಡಿ ಅವರು ಮಾತನಾಡಿದರು.

ಓದು ಎಂಬುದು ಜ್ಞಾನದ ಮಾಧ್ಯಮ. ಪುಸ್ತಕಗಳನ್ನು ಓದುವುದರಿಂದ ನಮ್ಮ ಚಿಂತನೆಗಳನ್ನು ವಿಮರ್ಶೆಗೊಳಪಡಿಸಬಹುದು. ನಮ್ಮ ಜ್ಞಾನದ ಮಟ್ಟ ಹೆಚ್ಚಲು ಪುಸ್ತಕಗಳ ಓದು ಬಹುದೊಡ್ಡ ಮಾಧ್ಯಮ. ಪತ್ರಿಕೆಗಳನ್ನೋದುವುದರಿಂದ ಪ್ರಚಲಿತ ವಿದ್ಯಮಾನಗಳ ನಿತ್ಯ ಪರಿಚಯವಾಗುತ್ತದೆ.




ಆಧುನಿಕ ಅವಿಷ್ಕಾರಗಳಿಂದ ಪುಸ್ತಕಗಳನ್ನೋದುವ ಪರಿಪಾಠ ಕಡಿಮೆಯಾಗುತ್ತಿದೆ. ಆದರೆ, ಪುಸ್ತಕಗಳನ್ನು ಓದುವ ಹವ್ಯಾಸ ಬೆಳೆಸಿಕೊಂಡರೆ ಅದರಿಂದ ಅಪಾರ ಜೀವನಾನುಭವ ನಮ್ಮದಾಗುತ್ತದೆ. ಸರಿದಾರಿಯಲ್ಲಿ ನಡೆಯುವ ಚಿಂತನೆ ನಮ್ಮದಾಗುತ್ತದೆ. ಆತ್ಮವಿಶ್ವಾಸ ಹೆಚ್ಚುತ್ತದೆ. ಕನ್ನಡ ಭಾಷೆಯಲ್ಲಿರುವ ಕಾದಂಬರಿಗಳು, ಜನಪದ ಸಾಹಿತ್ಯ, ಆಧ್ಯಾತ್ಮಿಕ ಸಾಹಿತ್ಯ, ಹಾಸ್ಯ, ನಾಟಕಗಳು ನಮ್ಮ ಜ್ಞಾನಭಂಡಾರಕ್ಕೆ ಅಕ್ಷಯ ಪಾತ್ರೆಯಿದ್ದಂತೆ ಎಂದು ಹಲವಾರು ಜಾನಪದ, ಸಾಹಿತ್ಯಿಕ ವಿಚಾರಗಳನ್ನು ಉದಾಹರಿಸಿದರು.

ಕರ್ನಾಟಕ ಲೇಖಕಿಯರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷೆ ಅಜ್ಜಂಪುರ ಎಸ್.ಶೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಜ್ಞಾನ ವಿಸ್ತರಣೆಗೆ ನಮ್ಮ ಮನಸ್ಸನ್ನು ಚಿಂತನೆಗೆ ತೊಡಗಿಸುವ ಹಾಗೂ ಹಿಡಿತದಲ್ಲಿಡಲು ಪುಸ್ತಕ ಪ್ರೀತಿ ಬಹುದೊಡ್ಡದು. ಪುಸ್ತಕಗಳ ಒಡನಾಟದಲ್ಲಿ ಜೀವನಾನುಭವದ ಹುಡುಕಾಟ ನಮಗೆ ನೀಡುವ ಅನುಭವ ಅನನ್ಯವಾದುದು. ಈ ನಿಟ್ಟಿನಲ್ಲಿ ಕರ್ನಾಟಕ ಲೇಖಕಿಯರ ಸಂಘ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸುತ್ತಿದೆ. ಮಹಿಳಾ ಲೇಖಕಿಯರ ಸಂಖ್ಯೆ ಕಡಿಮೆಯಾಗುತ್ತಿರುವ ಈ ದಿನಮಾನದಲ್ಲಿ ಹೊಸ ತಲೆಮಾರಿನ ಬರಹಗಾರ್ತಿಯರು ಉದಯಿಸಬೇಕೆಂಬ ಆಶಯ ಸಂಘದ್ದಾಗಿದೆ ಎಂದರು. ಅಧ್ಯಕ್ಷತೆ ವಹಿಸಿದ್ದ ಜ್ಞಾನಭಾರತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷೆ ಸುಜಾತ ಕೃಷ್ಣಮೂರ್ತಿ ಮಾತನಾಡಿ, ಪುಸ್ತಕಗಳನ್ನು ಓದುವುದು ಅತ್ಯಂತ ಒಳ್ಳೆಯ ಅಭ್ಯಾಸ. ಪುಸ್ತಕಗಳನ್ನು ಓದುವವರ ಚಿಂತನೆ ವಿಶೇಷವಾಗಿರುತ್ತದೆ. ಜೀವನಾನುಭವದ ಪರಿಚಯವಾಗಬೇಕೆಂದರೆ ಪುಸ್ತಕಗಳನ್ನು ಓದುವುದು ನಮ್ಮ ನಿತ್ಯ ಜೀವನದ ಅಂಗವಾಗಿ ಅಳವಡಿಸಿಕೊಳ್ಳಬೇಕಿದೆ ಎಂದರು.

# ಲಿಡ್ಕರ್‌ನಲ್ಲಿ ರಿಯಾಯ್ತಿ ಮಾರಾಟ

**ಚಿಕ್ಕಮಗಳೂರು, ಸೆ.29:** ನಗರದ ಎನ್‌ಎಂಸಿ ಸರ್ಕಲ್ ಸಮೀಪ ಮಲ್ಲಂದೂರು ರಸ್ತೆಯ ಎ.ಟಿ.ಐ. ಕಾಂಪ್ಲೆಕ್ಸ್‌ನಲ್ಲಿರುವ ಡಾ.ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಲಿಡ್ಕರ್ ಮಾರಾಟ ಮಳಿಗೆಯಲ್ಲಿ ನಾಡ ಹಬ್ಬ, ದಸರಾ ಮತ್ತು ದೀಪಾವಳಿ ಪ್ರಯುಕ್ತ ಚರ್ಮದ ಶೂಗಳು, ಪಾದರಕ್ಷೆಗಳು, ಚರ್ಮದ ವ್ಯಾನಿಟಿ ಬ್ಯಾಗ್‌ಗಳು, ಪರ್ಸ್‌ಗಳು, ಲೆದರ್ ಬೆಲ್ಟ್‌ಗಳನ್ನು ಶೇ.20ರ ರಿಯಾಯಿತಿ ದರದಲ್ಲಿ ಸೆಪ್ಟಂಬರ್ 29 ರಿಂದ ಅಕ್ಟೋಬರ್ 18 ರವರೆಗೆ ನೀಡಲಾಗುವುದು. ಲಿಡ್ಕರ್ ಮಾರಾಟ ಮಳಿಗೆಯು ವಾರದ ಎಲ್ಲಾ ದಿನಗಳಲ್ಲೂ ಬೆಳಗ್ಗೆ 10 ರಿಂದ ರಾತ್ರಿ 8 ಗಂಟೆಯವರೆಗೂ ತೆರೆದಿರುತ್ತದೆ. ಜಿಲ್ಲೆಯ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಲಿಡ್ಕರ್ ಮಾರಾಟ ಮಳಿಗೆಯ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**